

‘ಪುಷ್ಪ 2’ ಸಿನಿಮಾದ ಸಕ್ಸಸ್ ಬಳಿಕ ಅಲ್ಲು ಅರ್ಜುನ್ ಇದೀಗ ‘ಜವಾನ್’ ಡೈರೆಕ್ಟರ್ ಅಟ್ಲಿ ಜೊತೆ ಕೈಜೋಡಿಸಿದ್ದಾರೆ. ಇದೀಗ ಈ ಚಿತ್ರಕ್ಕೆ ನಾಯಕಿಯಾಗಿ ಬಾಲಿವುಡ್ ಬೆಡಗಿ ಅನನ್ಯಾ ಪಾಂಡೆ ನಟಿಸಲಿದ್ದಾರೆ ಎನ್ನಲಾದ ಸುದ್ದಿಯೊಂದು ಹರಿದಾಡುತ್ತಿದೆ.

2 ಎನ್‌ಪಿಸಿಐ ಭಾರತ್ ಬಿಲ್‌ಪೇ ಸಹಭಾಗಿತ್ವ ಘೋಷಣೆ

3 ‘ಆಡಳಿತಾಧಿಕಾರಿಗಳ ಹುದ್ದೆ ಖಾಲಿ ಇಲ್ಲದಂತೆ ಭರ್ತಿ’

6 ‘ಪಾಕಿಸ್ತಾನ ಪ್ರೇರಿತ ಭಯೋತ್ಪಾದಕ ಕೃತ್ಯ ವಿಶ್ವವನ್ನೇ ತಲೆತಗ್ಗಿಸುವಂತೆ ಮಾಡಿದೆ’

ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ

VOLUME: 15 01 MAY 2025 ಗುರುವಾರ RS: 2 PAGE: 06 ISSUE: 28

CALL 9740160669

# ಭಾರತ ಸಾರಥಿ

BHARATHA SARATHI
KANNADA DAILY NEWS PAPER

ಸದಾ ನಿಮ್ಮೊಂದಿಗೆ ಕನ್ನಡ ದಿನಪತ್ರಿಕೆ



ಸಂಪಾದಕ
ಗಂಡಸಿ ಸದಾನಂದಸ್ವಾಮಿ

RNI KARKAN2011/44806

ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com


ಸ್ವಾತಂತ್ರ್ಯಾನಂತರ ನಡೆದ ಜನ ಗಣತಿಯಲ್ಲಿ ಜಾತಿಯನ್ನು ಸೇರಿಸಲಾಗಿಲ್ಲ. ಕಾಂಗ್ರೆಸ್ ಯಾವಾಗಲೂ ಜಾತಿ ಜನಗಣತಿಯನ್ನು ವಿರೋಧಿಸುತ್ತದೆ. ಪಕ್ಷವು ಇದನ್ನು ರಾಜಕೀಯ ಸಾಧನವಾಗಿ ಬಳಸಿಕೊಂಡಿದೆ ಎಂದು ಆರೋಪಿಸಿದರು. 2010ರಲ್ಲಿ ಅಂದಿನ ಪ್ರಧಾನಿ ಮನಮೋಹನ್ ಸಿಂಗ್ ಅವರ ಸರ್ಕಾರ ಜಾತಿ ಗಣತಿ ನಡೆಸಲು ವಿರೋಧಿಸಿತ್ತು. ಸಂಪುಟ ಸಭೆಯಲ್ಲಿ ಜಾತಿ ಗಣತಿ ಕುರಿತು ತೀರ್ಮಾನಿಸಲಾಗುವುದು ಎಂದು ಪ್ರಧಾನಿ ಸಿಂಗ್ ಹೇಳಿದ್ದರು. ಇದರ ಅಧ್ಯಯನಕ್ಕೆ ಸಚಿವರ ಸಮಿತಿಯನ್ನೂ ರಚಿಸಲಾಗಿತ್ತು.

# ಜಾತಿ ಗಣತಿಗೆ ಮುಂದಾದ ಕೇಂದ್ರ ಸರ್ಕಾರ

ನವದೆಹಲಿ: ರಾಜಕೀಯವಾಗಿ ತೀವ್ರ ಚರ್ಚೆಯಲ್ಲಿರುವ ಜಾತಿಗಣತಿ ನಡೆಸಲು ಕೇಂದ್ರ ಸರ್ಕಾರ ತೀರ್ಮಾನಿಸಿದೆ. ಶೀಘ್ರದಲ್ಲಿ ನಡೆಯುವ ಜನಗಣತಿಯ ಜೊತೆಗೆ ಜಾತಿ ಗಣತಿಯನ್ನೂ ದಾಖಲಿಸಲಾಗುವುದು ಎಂದು ಬುಧವಾರ ಘೋಷಿಸಿದೆ.

ಪ್ರಧಾನಿ ನರೇಂದ್ರ ಮೋದಿ ಅವರ ಅಧ್ಯಕ್ಷತೆಯಲ್ಲಿ ಇಂದು ದೆಹಲಿಯಲ್ಲಿ ನಡೆದ ರಾಜಕೀಯ ವ್ಯವಹಾರಗಳ ಸಂಪುಟ ಸಮಿತಿ ಸಭೆಯಲ್ಲಿ ತೆಗೆದುಕೊಂಡ ನಿರ್ಧಾರವನ್ನು ಪ್ರಕಟಿಸಿದ ಕೇಂದ್ರ ಸಚಿವ ಅಶ್ವಿನಿ ವೈಷ್ಣವ್, ಜಾತಿ ಗಣತಿಯನ್ನು ಜನ ಗಣತಿಯ ಭಾಗವಾಗಿ ನಡೆಸಲು ತೀರ್ಮಾನಿಸಲಾಗಿದೆ. ಇದು ಶೀಘ್ರದಲ್ಲೇ ನಡೆಯಲಿದೆ ಎಂದರು.




ಕೆಲ ರಾಜ್ಯ ಸರ್ಕಾರಗಳು ರಾಜಕೀಯ ಲಾಭಕ್ಕಾಗಿ ಜಾತಿ ಸಮೀಕ್ಷೆಯನ್ನು ನಡೆಸಿವೆ. ಇದು ‘ಪಾರದರ್ಶಕವಲ್ಲ’ ಎಂಬ ಅನುಮಾನ ಸಮಾಜದಲ್ಲಿದೆ.

ಹೀಗಾಗಿ, ಕೇಂದ್ರ ಸರ್ಕಾರವೇ ಈ ಎಲ್ಲಾ ಪ್ರಶ್ನೆಗಳಿಗೆ ಉತ್ತರ ಹುಡುಕಲು ಮುಂದಾಗಿದೆ. ಮುಂಬರುವ ಜನಗಣತಿಯಲ್ಲಿ ಜಾತಿ ಗಣತಿಯನ್ನೂ ಪಾರದರ್ಶಕ ರೀತಿಯಲ್ಲಿ ನಡೆಸಲಾಗುವುದು ಎಂದು ತಿಳಿಸಿದರು.

ಸ್ವಾತಂತ್ರ್ಯಾನಂತರ ನಡೆದ ಜನ ಗಣತಿಯಲ್ಲಿ ಜಾತಿಯನ್ನು ಸೇರಿಸಲಾಗಿಲ್ಲ. ಕಾಂಗ್ರೆಸ್ ಯಾವಾಗಲೂ ಜಾತಿ ಜನಗಣತಿಯನ್ನು ವಿರೋಧಿಸುತ್ತದೆ. ಪಕ್ಷವು ಇದನ್ನು ರಾಜಕೀಯ ಸಾಧನವಾಗಿ ಬಳಸಿಕೊಂಡಿದೆ ಎಂದು ಆರೋಪಿಸಿದರು. 2010ರಲ್ಲಿ ಅಂದಿನ ಪ್ರಧಾನಿ ಮನಮೋಹನ್ ಸಿಂಗ್ ಅವರ ಸರ್ಕಾರ ಜಾತಿ ಗಣತಿ ನಡೆಸಲು ವಿರೋಧಿಸಿತ್ತು.

ಸಂಪುಟ ಸಭೆಯಲ್ಲಿ ಜಾತಿ ಗಣತಿ ಕುರಿತು ತೀರ್ಮಾನಿಸಲಾಗುವುದು ಎಂದು ಪ್ರಧಾನಿ ಸಿಂಗ್ ಹೇಳಿದ್ದರು. ಇದರ ಅಧ್ಯಯನಕ್ಕೆ ಸಚಿವರ ಸಮಿತಿಯನ್ನೂ ರಚಿಸಲಾಗಿತ್ತು.

ಬಹುತೇಕ ರಾಜಕೀಯ ಪಕ್ಷಗಳು ಜಾತಿ ಗಣತಿ ಪರವಾಗಿದ್ದವು. ಆದರೆ, ಕಾಂಗ್ರೆಸ್ ನೇತೃತ್ವದ ಸರ್ಕಾರ ಜಾತಿ ಸಮೀಕ್ಷೆ ನಡೆಸಲು ನಿರ್ಧರಿಸಿತ್ತು ಎಂದರು.

ರಾಜಕೀಯ ಮಾಡಲು ಮುಂದಾಗಿವೆ. ಕೆಲ ರಾಜ್ಯಗಳು ಜಾತಿ ಗಣತಿ ನಡೆಸಿವೆ. ಇನ್ನೂ ಕೆಲವು ಜಾತಿ ಸಮೀಕ್ಷೆ ನಡೆಸಿವೆ. ಕೆಲವೆಡೆ ರಾಜಕೀಯ ಉದ್ದೇಶದಿಂದ ಅಪಾರದರ್ಶಕವಾಗಿ ಸಮೀಕ್ಷೆ ಕೈಗೊಂಡಿವೆ. ಇದೆಲ್ಲವೂ ಸಮಾಜದಲ್ಲಿ ಸಂದೇಹ ಉಂಟು ಮಾಡಿವೆ. ರಾಜಕೀಯಕ್ಕಾಗಿ ಸಾಮಾಜಿಕ ಸ್ವಾಸ್ಥ್ಯ ಹಾಳಾಗಬಾರದು. ಇದನ್ನು ಖಚಿತಪಡಿಸಲು ಜನ ಗಣತಿ ಜೊತೆಗೆ ಜಾತಿ ಗಣತಿ ಮಾಹಿತಿಯನ್ನೂ ದಾಖಲಿಸಲಾಗುವುದು ಎಂದು ತಿಳಿಸಿದರು. ಕಾಂಗ್ರೆಸ್ ಸೇರಿದಂತೆ ವಿರೋಧ ಪಕ್ಷಗಳು ರಾಷ್ಟ್ರವ್ಯಾಪಿ ಜಾತಿ ಜನಗಣತಿ ನಡೆಸಲು ಒತ್ತಾಯಿಸುತ್ತಿವೆ. ಇದು ಕೆಲವೆಡೆ ಚುನಾವಣಾ ವಿಷಯವೂ ಆಗಿದೆ. ಬಿಹಾರ, ತೆಲಂಗಾಣ ಮತ್ತು ಕರ್ನಾಟಕದಂತಹ ಕೆಲವು ರಾಜ್ಯಗಳು ಜಾತಿ ಸಮೀಕ್ಷೆಗಳನ್ನು ನಡೆಸಿವೆ.

## ವಿದೇಶಿ ಮಹಿಳೆ ಮೃತದೇಹ ಪತ್ತೆ

ಬೆಂಗಳೂರು: ಬೆಂಗಳೂರು ಹೊರವಲಯದ ಚಿಕ್ಕಜಾಲ ಪೊಲೀಸ್ ಠಾಣಾ ವ್ಯಾಪ್ತಿಯ ತರಹುಣಸೆ ಗ್ರಾಮದ ನಿರ್ಜನ ಪ್ರದೇಶದಲ್ಲಿ ವಿದೇಶಿ ಮಹಿಳೆಯ ಮೃತದೇಹ ಪತ್ತೆಯಾಗಿದೆ.

ಬೆಟ್ಟಹಲಸೂರು ಮುಖ್ಯ ರಸ್ತೆಯ ನಿರ್ಜನ ಪ್ರದೇಶದಲ್ಲಿ ಮೃತದೇಹ ಪತ್ತೆಯಾಗಿದ್ದು, ಮೃತಳನ್ನು ಆಫ್ರಿಕಾದ ನೈಜೀರಿಯಾದ ಕ್ರಾಸ್ ರಿವರ್ ಮೂಲದ ಲೋವೆತ್ ಎಂದು ಗುರುತಿಸಲಾಗಿದೆ. ಘಟನಾ ಸ್ಥಳಕ್ಕೆ ಚಿಕ್ಕಜಾಲ ಠಾಣೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

ನಿರ್ಜನ ಪ್ರದೇಶದಲ್ಲಿ ಪತ್ತೆಯಾದ 32 ವರ್ಷದ ಮಹಿಳೆ ಲೋವಿತ್ ಎಂಬುದು ಗೊತ್ತಾಗಿದೆ. ಮೃತಳ ಪಾಸ್ ಪೋರ್ಟ್ ಚಿಕ್ಕ ಮಜಾಲ ಪೊಲೀಸರಿಗೆ ಪತ್ತೆಯಾಗಿದ್ದು, ಬನ್ನೇರುಘಟ್ಟ ರಸ್ತೆಯಲ್ಲಿ ನೆಲೆಸಿದ್ದಳು ಎಂದು ತಿಳಿದುಬಂದಿದೆ.

ಮೃತ ಮಹಿಳೆ ಮೂಲತಃ ಆಫ್ರಿಕಾದ ಕ್ರಾಸ್ ರಿವರ್ ರಾಜ್ಯದ ಮಹಿಳೆ. ಮಹಿಳೆ ಹಿನ್ನಲೆ ಪರಿಶೀಲನೆ ನಡೆಸ್ತಿರುವ ಪೊಲೀಸರು, ಆಕೆ ಭಾರತಕ್ಕೆ ಬಂದಿದ್ದರ ಹಿಂದಿನ ಉದ್ದೇಶವೇನು? ಕಳೆದ ರಾತ್ರಿ ಕೊಲೆಗೂ ಮುನ್ನ ಆಕೆ ಸಂಪರ್ಕದಲ್ಲಿದ್ದವರು ಯಾರು ಎನ್ನುವುದರ ಬಗ್ಗೆ ತನಿಖೆ ಚುರುಕುಗೊಳಿಸಿದ್ದಾರೆ.

ಇನ್ನು ಪೋರೆನ್ಸಿಕ್ ತಂಡದೊಂದಿಗೆ ಕೃತ್ಯ ನಡೆದ ಕ್ರೈಂ ಸ್ಪಾಟ್‌ಗೆ ದೌಡಯಿಸಿದ ಚಿಕ್ಕಜಾಲ ಪೊಲೀಸರು ಸ್ಥಳ ಪರಿಶೀಲನೆ ನಡೆಸಿ ಮೃತಳ ಗುರುತು ಪತ್ತೆಹಚ್ಚಲು ಮುಂದಾಗಿದ್ದಾರೆ.

## ಶಾಸನ ಪತ್ತೆ

ದಾವಣಗೆರೆ: ಜಿಲ್ಲೆಯ ನ್ಯಾಮತಿ ತಾಲ್ಲೂಕಿನ ಮಾದಾಪುರ ಕೆರೆಯಲ್ಲಿ ಬಾದಾಮಿ ಚಾಲುಕ್ಯರ ಒಂದನೇ ವಿಕ್ರಮಾದಿತ್ಯನ ಕಾಲದ ಶಿಲಾಶಾಸನ ಪತ್ತೆಯಾಗಿದೆ ಎಂದು ಕಮಲಾಪುರದಲ್ಲಿನ ಪುರಾತತ್ವ, ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ ನಿರ್ದೇಶಕ ಡಾ. ಆರ್.ಶೇಜೇಶ್ವರ ತಿಳಿಸಿದ್ದಾರೆ. ಮಾದಾಪುರ ಕೆರೆಯಲ್ಲಿ ಸ್ಥಳೀಯರು ಜೆಸಿಬಿಯಿಂದ ಮಣ್ಣನ್ನು ತೆಗೆಯುವಾಗ ಶಿಲಾ ಶಾಸನ ಪತ್ತೆಯಾಗಿದೆ. ಇಲ್ಲಿಗೆ ಪುರಾತತ್ವ ಇಲಾಖೆ ನಿರ್ದೇಶಕರು ಭೇಟಿ ನೀಡಿ ಪರಿಶೀಲಿಸಿದ ನಂತರ ಇದು ಬಾದಾಮಿ ಚಾಲುಕ್ಯರ ಶಿಲಾಶಾಸನವಾಗಿದೆ ಎಂದು ತಿಳಿದುಬಂದಿದೆ.

ಶಾಸನವು 5 ಅಡಿ ಉದ್ದವಿದ್ದು, ಹಳೆಗನ್ನಡದ 17 ಸಾಲುಗಳನ್ನು ಒಳಗೊಂಡಿದೆ. ಇದು ಕ್ರಿ.ಶ 7ನೇ ಶತಮಾನದ ಬಾದಾಮಿ ಚಾಲುಕ್ಯರ ಒಂದನೇ ವಿಕ್ರಮಾದಿತ್ಯನ ಕ್ರಿ.ಶ.654–681 ಕಾಲದ ಶಾಸನವಾಗಿದೆ. ಒಂದನೇ ವಿಕ್ರಮಾದಿತ್ಯನು ರಾಜ್ಯವಾಳುವಾಗ ಅವನ ಅಧಿಕಾರಿ ಸಿಂಘವೆಣ್ಣನು ಬಳ್ಳಾವಿ ನಾಡನ್ನು ಆಳುತ್ತಿದ್ದಾಗ ಪ್ರಜೆಗಳಿಗಾಗಿ ಊರ ಮೇಲಿನ ಕೆಲವು ತೆರಿಗೆಗಳನ್ನು ಮನ್ನಾ ಮಾಡಿರುವುದು ಹಾಗೂ ಕೆರೆಯನ್ನು ನಿರ್ಮಿಸಿದ ರಾಜರಿಗೆ ಆರು ಎಕರೆ ಭೂಮಿ ದಾನ ನೀಡಿರುವುದು ಹಾಗೂ ಈ ಭೂಮಿಯು ಬಳ್ಳಾವಿ ಎಪ್ಪತ್ತರ ಒಕ್ಕಲುಗಳಿಗೆ ಸಲ್ಲುತ್ತೆಂದು ಉಲ್ಲೇಖಿಸಲಾಗಿದೆ.

ಈ ಶಾಸನ ಶೋಧನೆಯಿಂದ ಬಳ್ಳಾವಿ ಎಪ್ಪತ್ತು ಎಂಬ 70 ಗ್ರಾಮಗಳಿದ್ದ ಆಡಳಿತ ವಿಭಾಗದ ಪ್ರಾಚೀನತೆಯನ್ನು ಹಾಗೂ 1344 ವರ್ಷಗಳ ಪುರಾತನವಾದ ಶಾಸನ ಎಂಬುವುದು ತಿಳಿಸುತ್ತದೆ. ಈ ಶಾಸನದ ಮುಂಭಾಗ ಹಾಗೂ ಹಿಂಭಾಗದಲ್ಲಿ ಕ್ರಿ.ಶ.17 ನೇ ಶತಮಾನದಲ್ಲಿ ಅಪೂರ್ಣ ಉಬ್ಬು ಶಿಲ್ಪವಿದೆ.

ಈ ಶಾಸನವನ್ನು ಹುಡುಕಿಕೊಟ್ಟ ಪ್ರೊ.ಶ್ರೀನಿವಾಸ ಪಾಡಿಗರ, ರಮೇಶ ಹಿರೇಜಂಬೂರು, ಕ್ಷೇತ್ರ ಕಾರ್ಯದಲ್ಲಿ ಸಹಕರಿಸಿದ ಡಾ. ರವಿಕುಮಾರ ನವಲಗುಂದ, ಮಂಜಪ್ಪ ಚುರ್ಚಿಗುಂಡಿ, ಮಾದಾಪುರ ಗ್ರಾಮ ಆಡಳಿತಾಧಿಕಾರಿ ವಿಶ್ವನಾಥ, ಗ್ರಾಮಸ್ಥರಾದ ಬುಜಂಗ, ವೀರೇಶ್ ಹಾಗೂ ಇತರರ ಕಾರ್ಯವನ್ನು ಪುರಾತ್ವತ ಇಲಾಖೆ ನಿರ್ದೇಶಕರು ಶ್ಲಾಘಿಸಿದ್ದಾರೆ.

ಬೆಂಗಳೂರು: ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇಂದು ವಿಧಾನಸೌಧ ಮುಂದೆ ಬಸವ ಸಮಿತಿ ಆಯೋಜಿಸಿದ್ದ ವಿಶ್ವಗುರು ಬಸವೇಶ್ವರರ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿದರು. ಈ ಸಂದರ್ಭದಲ್ಲಿ ಸಚಿವರಾದ ಎಂ.ಬಿ.ಪಾಟೀಲ್ ಸೇರಿದಂತೆ ಹಲವರಿದ್ದರು.



## ಚಿನ್ನಬೆಳ್ಳಿ ಖರೀದಿಗೆ ಮುಗಿಬಿದ್ದ ಜನತೆ..!

ಬೆಂಗಳೂರು: ಬಂಗಾರದ ಬೆಲೆ ಲಕ್ಷದ ಗಡಿ ದಾಟಿದ್ದರ ನಡುವೆಯೂ ಸಿಲಿಕಾನ್ ಸಿಟಿ, ಸೇರಿದಂತೆ ರಾಜ್ಯದ ವಿವಿಧೆಡೆ ಗ್ರಾಹಕರು ಅಕ್ಷಯ ತೃತೀಯ ದಿನವಾದ ಇಂದು ಚಿನ್ನ, ಬೆಳ್ಳಿ ಮತ್ತು ಆಸ್ತಿ ಖರೀದಿಗೆ ಮುಗಿಬಿದ್ದಿದ್ದಾರೆ. ಅಕ್ಷಯ ತೃತೀಯದಂದು ಸಂಪತ್ತನ್ನು ಕೊಳ್ಳುವುದಕ್ಕೆ ಸಕಾಲ, ಈ ದಿನ ಸಂಪತ್ತು ಖರೀದಿಸಿದರೆ ಅಕ್ಷಯವಾಗುತ್ತದೆ ಎಂಬ ನಂಬಿಕೆ ಇದೆ. ಅದರಲ್ಲೂ ವಿಶೇಷವಾಗಿ ಬಂಗಾರ ಮತ್ತು ರಿಯಲ್ ಎಸ್ಟೇಟ್‌ಗೆ ಈ ದಿನ ಹೆಚ್ಚು ಒತ್ತು ನೀಡಲಾಗುತ್ತದೆ.

ಅಕ್ಷಯ ಎಂದರೆ, ಎಂದೂ ಕರಗದ ಅಥವಾ ಶಾಶ್ವತ ಎಂದು ಅರ್ಥ. ಈ ದಿನ ಬಂಗಾರ, ಬೆಳ್ಳಿ ಮತ್ತು ಆಸ್ತಿ ಖರೀದಿಯಿಂದ ಜೀವನ ಪರ್ಯಂತ ಯಶಸ್ಸು ಮತ್ತು ಸಂಪತ್ತು ಸಿಗುತ್ತದೆ ಎಂಬ ನಂಬಿಕೆ ಜನರದ್ದಾಗಿದೆ. ಬೆಂಗಳೂರಿನ ಮಂದಿ ಕೂಡ ಈ ನಂಬಿಕೆಯಿಂದ ಹೊರತಾಗಿಲ್ಲ. ಈ ದಿನ ಬಂಗಾರದ ವ್ಯಾಪಾರದಲ್ಲಿ ಗರಿಷ್ಟ ವಹಿವಾಟು ಕಾಣುವುದರ ಜೊತೆಗೆ ಜನರು ಬಂಗಾರ ದರ ಕೊಳ್ಳುವಿಕೆ ಹೊಸ ದಾಖಲೆ ಸೃಷ್ಟಿಸುವ ಸಾಧ್ಯತೆಗಳಿವೆ.

ಲಕ್ಷದ ಗಡಿ ದಾಟಿರುವ ಚಿನ್ನದ ಬೆಲೆಯು ಕಳೆದ ಆರು ದಿನಗಳಿಂದ ಸ್ಥಿರತೆ ಕಾಯ್ದುಕೊಂಡಿದೆ. ಅಕ್ಷಯ ತೃತೀಯ ದಿನದಂದು ಚಿನ್ನದ ಬೇಡಿಕೆ ಕೂಡ ಹೆಚ್ಚಿದ್ದು, ಈ ದಿನ ಬಂಗಾರ ಕೊಳ್ಳುವ ಮುನ್ನ ಅದರ ದರ ತಿಳಿಯಿರಿ.

ಇಂದು ಬಂಗಾರದ ದರದಲ್ಲಿ ಕೊಂಚ ಇಳಿಕೆ ಕಂಡಿದ್ದು, ಗ್ರಾಹಕರಿಗೆ ಸಂತಸ ಮೂಡಿಸಿದೆ. ಹಾಗೆಯೇ, ಬೆಳ್ಳಿ ದರದಲ್ಲಿ ಕೊಂಚ ಏರಿಕೆ ಕಂಡಿದೆ. ಮಂಗಳವಾರ 10 ಗ್ರಾಂ ಚಿನ್ನದ ಬೆಲೆ 98,880 ರೂ.ಗಳಷ್ಟಿತ್ತು, ಬುಧವಾರ 250 ರೂ.ಗಳಷ್ಟು ಇಳಿಕೆಯಾಗಿ 98,630 ರೂ.ಗಳಾಗಿದೆ. ಮಂಗಳವಾರ ಒಂದು ಕೆಜಿ ಬೆಳ್ಳಿಯ ಬೆಲೆ 99,393 ರೂ.ಗಳಷ್ಟಿದ್ದು, ಬುಧವಾರ 857 ರೂ.ಗಳಷ್ಟು ಏರಿಕೆಯೊಂದಿಗೆ 1,00,250 ರೂ.ಗೆ ತಲುಪಿದೆ. ಹುಬ್ಬಳ್ಳಿ, ಹಾಗೂ ಮೈಸೂರಿನಲ್ಲಿಯೂ 24 ಕ್ಯಾರೆಟ್ ಚಿನ್ನ 97,600 (10 ಗ್ರಾಂ.ಗೆ), 22 ಕ್ಯಾರೆಟ್ ಚಿನ್ನ 89,800 ಹಾಗೂ ಬೆಳ್ಳಿದರ 99,900 (ಕೆ.ಜಿಗೆ) ಇದೆ.



ಬಂಗಾರದ ಬೆಲೆಯು ಕೇವಲ ಕೊಳ್ಳುವಿಕೆ, ಮಾರಾಟದ ಮೇಲೆ ಅವಲಂಬಿತವಲ್ಲ. ಇದು ಅಂತಾರಾಷ್ಟ್ರೀಯ ಪ್ರವೃತ್ತಿಗಳು, ಆಮದು ಸುಂಕಗಳು, ಡಾಲರ್ ವಿರುದ್ಧ ರೂಪಾಯಿಯಲ್ಲಿನ ಏರಿಳಿತಗಳು ಮತ್ತು ಖರೀದಿ ನಡವಳಿಕೆಯನ್ನು ಅವಲಂಬಿಸಿದೆ ಎಂದು ವಿಶ್ಲೇಷಕರು ಹೇಳಿದ್ದಾರೆ.

ಕಳೆದ ಮಾರ್ಚ್ ಆರಂಭದಲ್ಲಿ ಗ್ರಾಂಗೆ 7,940 ಗ್ರಾಂ ಇದ್ದ ಬಂಗಾರದ ಬೆಲೆ ಜಾಗತಿಕ ಅನಿಶ್ಚಿತತೆ ಮತ್ತು ಬೇಡಿಕೆಯಿಂದಾಗಿ ಏಪ್ರಿಲ್‌ನಲ್ಲಿ ಭಾರೀ ಏರಿಕೆ ಕಾಣಲಾರಂಭಿಸಿದ್ದು, ಗರಿಷ್ಠ ದಾಖಲೆ ಏರಿಕೆಯ ಹಂತ ತಲುಪುವ ಮೂಲಕ ಗ್ರಾಹಕರನ್ನು ಕಂಗಾಲಾಗಿಸಿತು.

ಇದರೊಟ್ಟಿಗೆ ಅಕ್ಷಯ ತೃತೀಯ ದಿನ ಆಸ್ತಿ ಮಾರಾಟಗಳಲ್ಲಿ ಕೂಡ ಏರಿಕೆ ಕಂಡಿದೆ. ಅಕ್ಷಯ ತೃತೀಯದಂದು ಮಾಡಿದ ಹೂಡಿಕೆಗಳು ದೀರ್ಘಾವಧಿಯ ಪ್ರಯೋಜನಗಳನ್ನು ತರುತ್ತವೆ ಎಂಬ ನಂಬಿಕೆ ಇದೆ.

## ಮತ್ತೆ ಮದ್ಯದ ಬೆಲೆ ಏರಿಕೆ...!

ಬೆಂಗಳೂರು: ಡೀಸೆಲ್ ತೆರಿಗೆ, ವಿದ್ಯುತ್ ಸುಂಕ ಮತ್ತು ಹಾಲಿನ ಬೆಲೆಗಳನ್ನು ಹೆಚ್ಚಿಸಿದ ಕೆಲವೇ ದಿನಗಳಲ್ಲಿ, ಸರ್ಕಾರ ಈಗ ಮದ್ಯದ ಬೆಲೆಗಳನ್ನು ಹೆಚ್ಚಿಸಲು ನಿರ್ಧರಿಸಿದೆ.

ಕರ್ನಾಟಕದಲ್ಲಿ ಮದ್ಯದ ಬೆಲೆ ದುಬಾರಿ ಆಗಿರುವಾಗಲೇ ಮದ್ಯದ ಬೆಲೆಯನ್ನು ಪ್ರತಿ ತ್ರೈಮಾಸಿಕಕ್ಕೆ (ಪ್ರತಿ ಮೂರು ತಿಂಗಳು)10 ರೂಪಾಯಿಯಿಂದ 15 ರೂಪಾಯಿ ಹೆಚ್ಚಳ ಹಾಗೂ ಬಿಯರ್ ಬೆಲೆಯನ್ನು ಈಗ ಇರುವ ಬೆಲೆಗಿಂತ ಶೇ.10% ರಷ್ಟು ಹೆಚ್ಚಳ ಮಾಡಲು ಭರ್ಜರಿ ಸಿದ್ಧತೆ ಶುರುವಾಗಿದೆ . ಮುಖ್ಯಮಂತ್ರಿಗಳು ಅಬಕಾರಿ ಇಲಾಖೆಗೆ 40,000 ಕೋಟಿ ರೂ.ಗಳ ಅಬಕಾರಿ ಸುಂಕ ಸಂಗ್ರಹ ಗುರಿ ನಿಗದಿಪಡಿಸಿರುವುದನ್ನು ಗಮನದಲ್ಲಿಟ್ಟುಕೊಂಡು ಮದ್ಯದ ಬೆಲೆಗಳನ್ನು ಹೆಚ್ಚಿಸಲು ಪ್ರಸ್ತಾಪಿಸಲಾಗಿದೆ ಎಂದು ಅಬಕಾರಿ ಇಲಾಖೆಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ನೆರೆಯ ರಾಜ್ಯಗಳಿಗೆ ಹೋಲಿಸಿದರೆ ಮದ್ಯದ ಬೆಲೆಯನ್ನು ಸ್ಪರ್ಧಾತ್ಮಕವಾಗಿ ನಿಗದಿಪಡಿಸುವುದು ಸಹ ಪ್ರಸ್ತಾವನೆಯಲ್ಲಿದೆ.

## ಟ್ಯಾಕ್ಸಿ ಸೇವೆ ವಿಸ್ತರಣೆ

ಬೆಂಗಳೂರು: ಕರ್ನಾಟಕದಲ್ಲಿ ಬೈಕ್ ಟ್ಯಾಕ್ಸಿ ಸೇವೆಯನ್ನು ಜೂನ್ 15ರ ವರೆಗೆ ವಿಸ್ತರಿಸಿ ಹೈಕೋರ್ಟ್ ಮಹತ್ವದ ಆದೇಶ ನೀಡಿದೆ. ಆ ಮೂಲಕ ರೈಡ್–ಹೇಲಿಂಗ್ ಕಂಪನಿಗಳಿಗೆ ಬೈಕ್ ಟ್ಯಾಕ್ಸಿ ಸೇವೆಗಳನ್ನು ಒದಗಿಸಲು ಇನ್ನೂ ಒಂದು ತಿಂಗಳು ಕಾಲಾವಕಾಶ ಸಿಕ್ಕಂತಾಗಿದೆ. ರಾಜ್ಯದಲ್ಲಿ ಬೈಕ್ ಟ್ಯಾಕ್ಸಿ ಸೇವೆಯನ್ನು ಮುಂದುವರೆಸಲು ನಿರ್ದೇಶನ ಕೋರಿ ರೊಪ್ಪೆನ್ ಟ್ರಾನ್ಸ್‌ಪೋರ್ಟೇಶನ್ ಸರ್ವೀಸ್ ಲಿಮಿಟೆಡ್ ಸೇರಿದಂತೆ ಇತರೆ ಕಂಪನಿಗಳು ಸಲ್ಲಿಸಿದ್ದ ಮಧ್ಯಂತರ ಅರ್ಜಿಯನ್ನು ಪರಿಗಣಿಸಿ ನ್ಯಾಯಮೂರ್ತಿ ಬಿ ಎಂ ಶ್ಯಾಮ್ ಪ್ರಸಾದ್ ಅವರಿದ್ದ ನ್ಯಾಯಪೀಠದಿಂದ ಆದೇಶ ಹೊರಡಿಸಲಾಗಿದೆ.

> ವಿಚಾರಣೆ ವೇಳೆ ಅರ್ಜಿದಾರರ ಪರ ವಕೀಲರು ವಾದ ಮಂಡಿಸಿದ್ದು, ರೋಪೆನ್ ಟ್ರಾನ್ಸ್‌ಫರ್ಮೇಷನ್ ಸರ್ವೀಸಸ್ ಪ್ರೈವೇಟ್ ಲಿಮಿಟೆಡ್ ಪ್ರಕಾರ, ಕರ್ನಾಟಕದಲ್ಲಿ ಆರು ಲಕ್ಷಕ್ಕೂ ಹೆಚ್ಚು ನೋಂದಾಯಿತ ಬೈಕ್ ಟ್ಯಾಕ್ಸಿಗಳಿದ್ದು, ಆ ಮೂಲಕ ಸವಾರರು ತನ್ನ ಜೀವನ ನಡೆಸುತ್ತಿದ್ದಾರೆ. ಒಂದು ವೇಳೆ ಬೈಕ್ ಟ್ಯಾಕ್ಸಿಗಳ ಕಾರ್ಯಾಚರಣೆ ಸ್ಥಗಿತಗೊಳಿಸಿದರೇ ಅವರು ತೀವ್ರ ಸಂಕಷ್ಟಕ್ಕೆ ಸಿಲುಕಬಹುದು ಎಂದು ಹೇಳಿದ್ದಾರೆ.

ವಿಚಾರಣೆ ವೇಳೆ ಅರ್ಜಿದಾರರ ಪರ ವಕೀಲರು ವಾದ ಮಂಡಿಸಿದ್ದು, ರೋಪೆನ್ ಟ್ರಾನ್ಸ್‌ಫರ್ಮೇಷನ್ ಸರ್ವೀಸಸ್ ಪ್ರೈವೇಟ್ ಲಿಮಿಟೆಡ್ ಪ್ರಕಾರ, ಕರ್ನಾಟಕದಲ್ಲಿ ಆರು ಲಕ್ಷಕ್ಕೂ ಹೆಚ್ಚು ನೋಂದಾಯಿತ ಬೈಕ್ ಟ್ಯಾಕ್ಸಿಗಳಿದ್ದು, ಆ ಮೂಲಕ ಸವಾರರು ತನ್ನ ಜೀವನ ನಡೆಸುತ್ತಿದ್ದಾರೆ. ಒಂದು ವೇಳೆ ಬೈಕ್ ಟ್ಯಾಕ್ಸಿಗಳ ಕಾರ್ಯಾಚರಣೆ ಸ್ಥಗಿತಗೊಳಿಸಿದರೇ ಅವರು ತೀವ್ರ ಸಂಕಷ್ಟಕ್ಕೆ ಸಿಲುಕಬಹುದು ಎಂದು ಹೇಳಿದ್ದಾರೆ.

ರಾಜ್ಯ ಸರ್ಕಾರವು ಪ್ರಸ್ತುತ ಬೈಕ್ ಟ್ಯಾಕ್ಸಿಗಳಿಗಾಗಿ ಸಮಗ್ರ ನೀತಿಯನ್ನು ರೂಪಿಸುತ್ತಿದೆ. ಕೈಗೆಟುಕುವ ಬೆಲೆ ಮತ್ತು ಬೇಡಿಕೆ ಹಿನ್ನೆಲೆ ಬೈಕ್ ಟ್ಯಾಕ್ಸಿ ಸೇವೆಗಳು ನಗರ ಪ್ರದೇಶದಲ್ಲಿ ಹೆಚ್ಚುತ್ತಿವೆ. ವಾದ–ಪ್ರತಿವಾದಗಳನ್ನು ಆಲಿಸಿದ ಹೈಕೋರ್ಟ್, ರಾಜ್ಯದಲ್ಲಿ ಬೈಕ್ ಟ್ಯಾಕ್ಸಿ ಸೇವೆಯನ್ನು ಜೂನ್ 15ರ ವರೆಗೆ ನಡೆಸಲು ವಿಸ್ತರಣೆ ಮಾಡಿ ವಿಚಾರಣೆ ಮುಂದೂಡಿದೆ.

ಇತ್ತೀಚೆಗೆ ಹೈಕೋರ್ಟ್ ಆರು ವಾರದೊಳಗೆ ಬೈಕ್ ಟ್ಯಾಕ್ಸಿ ನಿಲ್ಲಿಸುವಂತೆ ಆದೇಶ ನೀಡಿತ್ತು. 1988 ರ ಮೋಟಾರು ವಾಹನ ಕಾಯ್ದೆಯ ಸೆಕ್ಷನ್ 93 ರ ಅಡಿಯಲ್ಲಿ ಅಗತ್ಯ ನಿಯಮಗಳೊಂದಿಗೆ ಸಂಬಂಧಿತ ಮಾರ್ಗಸೂಚಿಗಳನ್ನು ತಿಳಿಸದ ಹೊರತು ರಾಜ್ಯದಲ್ಲಿ ಬೈಕ್ ಟ್ಯಾಕ್ಸಿ ಕಾರ್ಯನಿರ್ವಹಿಸಲು ಸಾಧ್ಯವಿಲ್ಲ. ಹಾಗಾಗಿ ಆರು ವಾರಗಳ ಒಳಗೆ ಎಲ್ಲಾ ಬೈಕ್ ಟ್ಯಾಕ್ಸಿ ಕಾರ್ಯಾಚರಣೆಗಳು ಸ್ಥಗಿತಗೊಳ್ಳುವಂತೆ ನೋಡಿಕೊಳ್ಳಲು ನ್ಯಾಯಾಲಯ ರಾಜ್ಯ ಸರ್ಕಾರ ಮತ್ತು ಸಾರಿಗೆ ಇಲಾಖೆಗೆ ನಿರ್ದೇಶನ ನೀಡಿತ್ತು.

## ಆಸ್ತಿ ತೆರಿಗೆ ರಿಯಾಯಿತಿ ವಿಸ್ತರಣೆ

ಬೆಂಗಳೂರು: ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಇತ್ತೀಚೆಗೆ 2025–26ನೇ ಸಾಲಿನ ಸಂಪೂರ್ಣ ಆಸ್ತಿ ತೆರಿಗೆ ಏಪ್ರಿಲ್ 30ರೊಳಗೆ ಪಾವತಿಸಿದರೆ ಶೇ.5 ರಿಯಾಯಿತಿ ನೀಡಲಾಗುವುದು ಎಂದು ತಿಳಿಸಿತ್ತು. ಆದರೆ ಇದೀಗ ಶೇ.5ರಷ್ಟು ವಿನಾಯಿತಿ ಜೊತೆ ತೆರಿಗೆ ಪಾವತಿ ಅವಧಿವನ್ನು ಮೇ 30ರವರೆಗೆ ವಿಸ್ತರಣೆ ಮಾಡಿದೆ. ಆ ಮೂಲಕ ಸಿಲಿಕಾನ್ ಸಿಟಿಯಲ್ಲಿ ಆಸ್ತಿ ತೆರಿಗೆ ಪಾವತಿದಾರರಿಗೆ ಬಿಬಿಎಂಪಿ ಗುಡ್ ನ್ಯೂಸ್ ನೀಡಿದೆ. ಆದಾಯ ಹೆಚ್ಚಿಸಿಕೊಳ್ಳಲು ಬಿಬಿಎಂಪಿ ಈ ಪ್ಲ್ಯಾನ್ ರೂಪಿಸಿದೆ. ಈ ಬಗ್ಗೆ ಮಾಧ್ಯಮ ಪ್ರಕಟಣೆ ಹೊರಡಿಸಿರುವ ಬಿಬಿಎಂಪಿ, ಪಾಲಿಕೆ ವ್ಯಾಪ್ತಿಯಲ್ಲಿ 2025–26 ನೇ ಸಾಲಿನ ಆಸ್ತಿತೆರಿಗೆಯನ್ನು ಪೂರ್ಣ ಪ್ರಮಾಣದಲ್ಲಿ ಏಪ್ರಿಲ್ 30ರ ಒಳಗಾಗಿ ಪಾವತಿಸುವ ಎಲ್ಲಾ ತೆರಿಗೆದಾರರಿಗೆ ಆಸ್ತಿತೆರಿಗೆಯ ಮೇಲೆ ಶೇ.5 ರಷ್ಟು ರಿಯಾಯಿತಿ ನೀಡಲಾಗಿತ್ತು.





ಬೆಂ. ಕನ್ನಡ ಸಾಹಿತ್ಯ ಪರಿಷತ್ ನಲ್ಲಿ ನಡೆದ ಕನ್ನಡ ಜಾನಪದ ದಶಮಾನೋತ್ಸವ ಶಾಂತಿನಗರ ವಿಧಾನಸಭಾ ವತಿಯಿಂದ ನಡೆದ ದಶಮಾನೋತ್ಸವ ಸಂಭ್ರಮ ವನ್ನು ಅದ್ದೂರಿಯಾಗಿ ನಡೆಯಿತು ಬಸವ ಜಯಂತಿ ಪ್ರಶಸ್ತಿ 51 ಜನ ಸಾಧಕರಿಗೆ ಸನ್ಮಾನ ಮಾಡಲಾಯಿತು ವೇದಿಕೆಯಲ್ಲಿ ಡಾ. ಜಾನಪದ ಬಾಲಾಜಿ ಡಾ. ಬಾಲಾಜಿ ಡಾ. ರಿಯಾಜ್ ಪಾಷಾ,ಡಾ. ಅಪ್ಪಗೆರೆ ತಿಮ್ಮರಾಜು, ರಫಿ ಪಾಷಾ ಉಪ ಆಯುಕ್ತರು ಕರ್ನಾಟಕ ಸರ್ಕಾರ ನಟ, ನಿರ್ಮಾಪಕ, *ಗಂಡಸಿ ಸದಾನಂದ ಸ್ವಾಮಿ,. ಡಾ. ರತ್ನಕುಮಾರಿ ಬಿ ಎಂ, ವಿಜಯ್ ಕುಮಾರ್ ಸೇರಿದಂತೆ ಅನೇಕ ಗಣ್ಯರು ಭಾಗವಹಿಸಿದ್ದರು.




ಬೆಂ.ಜಂಬುಸವಾರಿ ದಿಣ್ಣೆ ರಾಯಲ್ ಕೌಂಟಿ ಯಲ್ಲಿ ಬಸವ ಭಕ್ತ ವೃಂದದ ವತಿಯಿಂದ ಅದ್ದೂರಿಯಾಗಿ ನಡೆದ ವಿಶ್ವಗುರು ಬಸವ ಜಯಂತಿ ಯನ್ನ ಆಚರಿಸಲಾಯಿತು ಮುಖ್ಯ ಅತಿಥಿಗಳಾಗಿ ನಟ, ನಿರ್ಮಾಪಕ, ಗಂಡಸಿ ಸದಾನಂದ ಸ್ವಾಮಿ ಕಾರ್ಯಕ್ರಮ ಉದ್ಘಾಟಿಸದರು ವೇದಿಕೆಯಲ್ಲಿ ಸೋಮಶೇಖರ್ ಕೆ.ಎನ್,ರವಿ, ಶಂಕ್ರಪ್ಪ, ಸಿದ್ದೇಶ್, ಶಿವಸ್ವಾಮಿ, ವಿರೂಪಾಕ್ಷ, ಮಹಾಂತೇಶ್ ಸೇರಿದಂತೆ ಅನೇಕ ಗಣ್ಯರು ಮತ್ತು ಮುಖಂಡರು ಭಾಗವಹಿಸಿದ್ದರು.

# 50% ಪ್ರಗತಿ ನಿರೀಕ್ಷೆ

ಉಡುಪಿ: ಉಜ್ಜೀವನ್ ಸ್ಮಾಲ್ ಫೈನಾನ್ಸ್ ಬ್ಯಾಂಕ್ (ಉಜ್ಜೀವನ್) ಉತ್ತಮ ಪ್ರಗತಿಯ ಪಥದಲ್ಲಿದ್ದು, ವೈವಿಧ್ಯಮಯ ಅಡಮಾನ ಸಹಿತ ಸ್ವತ್ತು ಪೋರ್ಟ್ಫೋಲಿಯೋ ಮತ್ತು ಸಮತೋಲಿನ ಸಾಲ ಮಿಶ್ರಣದ ಕಡೆಗೆ ಬದಲಾವಣೆಯಿಂದ ಇದು ಸಾಧ್ಯವಾಗಿದೆಯಂತೆ.

ಉಜ್ಜೀವನ್ ಸ್ಮಾಲ್ ಫೈನಾನ್ಸ್ ಬ್ಯಾಂಕ್ನ ವ್ಯವಸ್ಥಾಪಕ ನಿರ್ದೇಶಕ ಮತ್ತು ಸಿಇಒ ಶ್ರೀ ಸಂಜೀವ್ ನೌಟಿಯಾಲ್ ಮಾತನಾಡುತ್ತಾ, "ಪ್ರಸ್ತುತ ತ್ರೈಮಾಸಿಕದಲ್ಲಿ, ಕಡಿಮೆ ದರದ ವಸತಿ, ಸಣ್ಣ ಅಡಮಾನಗಳು, ಎಂಎಸ್ಎಂಇ, ವಾಹನ ಸಾಲ, ಚಿನ್ನದ ಸಾಲ ಮತ್ತು ಕೃಷಿ ಸಾಲವು ನಮ್ಮ ಅಡಮಾನ ಸಹಿತ ಸ್ವತ್ತು ಪೋರ್ಟ್ಫೋಲಿಯೋದಲ್ಲಿ ಬೆಳವಣಿಗೆಯನ್ನು ಪ್ರೋತ್ಸಾಹಿಸಿವೆ. ವಾರ್ಷಿಕವಾಗಿ ನಮ್ಮ ಖಾತೆಯನ್ನು 50% ಬೆಳವಣಿಗೆ ಸಾಧಿಸುವ ಗುರಿಯನ್ನು ನಾವು ಹೊಂದಿದ್ದೇವೆ. ಈ ಗುರಿಗೆ ಅನುಗುಣವಾಗಿ, ನಮೂದಿಸಿದ ಸೆಗ್ಮೆಂಟ್ಗಳಲ್ಲಿ ವೈವಿಧ್ಯಮಯ ಅಡಮಾನ ಸಹಿತ ಸಾಲದ ಪೋರ್ಟ್ಫೋಲಿಯೋದ ಮೇಲೆ ಬ್ಯಾಂಕ್ ಹೆಚ್ಚು ಗಮನ ಕೇಂದ್ರೀಕರಿಸಿದೆ. ಅಂದರೆ, ಕಡಿಮೆ ದರದ ವಸತಿ, ಎಂಎಸ್ಎಂಇ, ವಾಹನ ಸಾಲಗಳು, ಕೃಷಿ ಸಾಲಗಳು, ಚಿನ್ನದ ಸಾಲ ಮತ್ತು ಅತಿ ಸಣ್ಣ ಅಡಮಾನಗಳ ಮೇಲೆ ಹೆಚ್ಚು ಗಮನ ಕೇಂದ್ರೀಕರಿಸಲಾಗಿದ್ದು, ವಾರ್ಷಿಕವಾಗಿ 52% ಏರಿಕೆಯೊಂದಿಗೆ ವರ್ಷದಲ್ಲಿ ಈ ದಿನದವರೆಗೆ 33% ಬೆಳವಣಿಗೆ ಸಾಧಿಸಲಾಗಿದೆ" ಎಂದು ಹೇಳಿದ್ದಾರೆ.

# ಶೇ.82ರಷ್ಟು ಉದ್ಯೋಗಿಗಳ ನೇಮಕ: ಇಂಡೀಡ್

ಬೆಂಗಳೂರು: ಭಾರತದ ಉದ್ಯೋಗ ಮಾರುಕಟ್ಟೆಯು ಆರ್ಥಿಕ ವರ್ಷವನ್ನು ಉನ್ನತ ಉತ್ತಮ ರೀತಿಯಲ್ಲಿ ಕೊನೆಗೊಳಿಸುತ್ತಿದೆ. ಜಾಗತಿಕ ಪ್ರತಿಕೂಲ ಪರಿಸ್ಥಿತಿಗಳ ಹೊರತಾಗಿಯೂ, ಭಾರತದಲ್ಲಿ ಉದ್ಯೋಗದಾತರು ನೇಮಕಾತಿಯನ್ನು ದ್ವಿಗುಣಗೊಳಿಸುತ್ತಿದ್ದಾರೆ, ವಿಶೇಷವಾಗಿ ಟೆಕ್ ಪ್ರತಿಭೆಗಳು ಮತ್ತು ಫ್ರೆಶರ್ಗಳು. ಇಂಡೀಡ್ನ ಇತ್ತೀಚಿನ 'ಹೈರಿಂಗ್ ಟ್ರ್ಯಾಕರ್' ಪ್ರಕಾರ, 82% ಉದ್ಯೋಗದಾತರು ಜನವರಿ ಮತ್ತು ಮಾರ್ಚ್ 2025ರ ನಡುವೆ ಸಕ್ರಿಯವಾಗಿ ನೇಮಕಗೊಂಡಿದ್ದಾರೆ ಮತ್ತು ಅಕ್ಟೋಬರ್ ಮತ್ತು ಡಿಸೆಂಬರ್ 2024 ಕ್ಕೆ ಹೋಲಿಸಿದರೆ ಒಟ್ಟಾರೆ ನೇಮಕಾತಿಯನ್ನು 3% ಹೆಚ್ಚಿಸಿದ್ದಾರೆ. "ಉದ್ಯೋಗ ಮಾರುಕಟ್ಟೆ ಪ್ರಗತಿಶೀಲವಾಗಿದೆ ಮತ್ತು ಉದ್ಯೋಗದಾತರು ಎಚ್ಚರಿಕೆಯಿಂದ ಆಶಾವಾದದೊಂದಿಗೆ ಮುಂದು ವರಿದಿದ್ದಾರೆ. ಡೇಟಾ ಅನಾಲಿಟಿಕ್ಸ್ ಮತ್ತು ಎಐ ನಂತಹ ಕ್ಷೇತ್ರಗಳಲ್ಲಿ ಟೆಕ್ ಪಾತ್ರಗಳು ಹೆಚ್ಚಾಗುತ್ತಿವೆ. ಈ ಜೊತೆಗೆ ಕೌಶಲ್ಯದ ಅಂತರ ವನ್ನು ಭರಿಸಲು ಸ್ಪಷ್ಟ ಅಗತ್ಯವಿದೆ. ನಾವು ಎಫ್ವೈ26 ಗೆ ಪ್ರವೇಶಿ ಸುತ್ತಿರುವಾಗ, ಕಂಪನಿಗಳು ಯಾರು ನೇಮಕ ಮಾಡುತ್ತಾರೆ ಮತ್ತು ಹೇಗೆ ಭವಿಷ್ಯಕ್ಕೆ ಸಿದ್ಧ ತಂಡಗಳನ್ನು ನಿರ್ಮಿಸುತ್ತಾರೆ ಎಂಬ ಬಗ್ಗೆ ಹೆಚ್ಚು ಯೋಗ್ಯವಾಗಿ ಚಿಂತಿಸುತ್ತಿವೆ," ಎಂದು ಇಂಡೀಡ್ ಇಂಡಿಯಾದ ಮಾರಾಟ ಮುಖ್ಯಸ್ಥ ಶಶಿ ಕುಮಾರ್ ಹೇಳಿದ್ದಾರೆ.

# ಕ್ರೋಕ್ಸ್‌ನ ಉತ್ಪನ್ನ ಬಿಡುಗಡೆ

ಬೆಂಗಳೂರು: ಜಾಗತಿಕ 'ಯುವರ್ ಕ್ರೋಕ್ಸ್, ಯುವರ್ ಸ್ಟೋರಿ, ಯುವರ್ ವರ್ಲ್ಡ್' ಅಭಿಯಾನದ ಭಾರತೀಯ ಆವೃತ್ತಿಯ ಮುಖವಾಗಿ, ರಶ್ಮಿಕಾ ಶೈಲಿಯ ಮೂಲಕ ವೈಯಕ್ತಿಕ ಕಥೆ ಹೇಳುವ ಚೈತನ್ಯವನ್ನು ಸಾಕಾರಗೊಳಿಸುತ್ತಾರೆ. ಈ ಅಭಿಯಾನವು ಕ್ರೋಕ್ಸ್ ಅನ್ನು ಕೇವಲ ಪಾದರಕ್ಷೆಯಾಗಿ ಮಾತ್ರವಲ್ಲದೆ, ಪ್ರತಿ ಹೆಜ್ಜೆಯಲ್ಲೂ ಪ್ರತ್ಯೇಕತೆಯು ಜೀವಂತವಾಗುವ ಸ್ವಯಂ ಅಭಿವ್ಯಕ್ತಿಗಾಗಿ ಕ್ಯಾನ್ವಾಸ್ ಆಗಿ ಹೈಲೈಟ್ ಮಾಡುತ್ತದೆ. ತಮಾಷೆಯ ಮತ್ತು ಗ್ರಾಹಕೀಯಗೊಳಿಸಬಹುದಾದ ಜಿಬ್ಬಿಟ್ಜ್ ಮೋಡಿಗಳ ಮೂಲಕ, ಗ್ರಾಹಕರು ತಮ್ಮದೇ ಆದ ವಿಶಿಷ್ಟವಾದ ನೋಟವನ್ನು ರಚಿಸಲು ಪ್ರೋತ್ಸಾಹಿಸಲಾಗುತ್ತದೆ – ದೈನಂದಿನ ಫ್ಯಾಷನ್ ಅನ್ನು ವೈಯಕ್ತಿಕ ಕಥೆಗಳು, ಮನಸ್ಥಿತಿಗಳು ಮತ್ತು ಕ್ಷಣಗಳ ಪ್ರತಿಬಿಂಬವಾಗಿ ಪರಿವರ್ತಿಸುವುದು ಮತ್ತು




ಪ್ರತಿಯೊಂದು ಜೋಡಿ ಕ್ರೋಕ್ಸ್ ಅನ್ನು ಒಂದು ರೀತಿಯ ಶೈಲಿಯ ವಿವರವನ್ನಾಗಿ ಮಾಡಲಾಗಿದೆ. ರಶ್ಮಿಕಾ ಅವರ ದೈನಂದಿನ ಜೀವನದ ರೋಮಾಂಚಕ ಕ್ಯಾನ್ವಾಸ್ಗೆ ವಿರುದ್ಧವಾಗಿ, 'ಯುವರ್ ಕ್ರೋಕ್ಸ್, ಯುವರ್ ಸ್ಟೋರಿ, ಯುವರ್ ವರ್ಲ್ಡ್' ಗಾಗಿ ಅಭಿಯಾನದ ಚಲನಚಿತ್ರವು ಮಾಂತ್ರಿಕ ಸರ್ರಿಯಲಿಸಂನ ಮಸೂರದ ಮೂಲಕ ಹೊಸ ಶೂ ಪರಿಚಯಿಸಿದೆ.

ದೈನಂದಿನ ಜೀವನವನ್ನು ಮರುಕಲ್ಪಿಸುತ್ತದೆ. ಸಿಜಿಐ ಮತ್ತು ದೃಶ್ಯ ಪರಿಣಾಮಗಳನ್ನು ಸರಾಗವಾಗಿ ಮಿಶ್ರಣ ಮಾಡುವ ಈ ಚಲನಚಿತ್ರವು ಪರಿಚಿತ ಸೆಟ್ಟಿಂಗ್ಗಳು – ಚಲನಚಿತ್ರ ಸೆಟ್ಗಳು, ರೆಡ್ ಕಾರ್ಪೆಟ್ಗಳು, ಸ್ನೇಹಶೀಲ ಮನೆಯ ಕ್ಷಣಗಳು – ರಶ್ಮಿಕಾ ಅವರ ಕ್ರೋಕ್ಸ್ ಮತ್ತು ಜಿಬ್ಬಿಟ್ಜ್ ಮೋಡಿಗಳನ್ನು ಕೇಂದ್ರ ಹಂತಕ್ಕೆ ತೆಗೆದುಕೊಳ್ಳುವ ತಲ್ಲೀನಗೊಳಿಸುವ ಪ್ರಪಂಚಗಳಾಗಿ ತಮಾಷೆಯಾಗಿ ಪರಿವರ್ತಿಸುತ್ತದೆ. ಪ್ರತಿಯೊಂದು ಮೋಡಿಯೂ ಆಕರ್ಷಕ ಅನಿಮೇಷನ್ಗಳೊಂದಿಗೆ ಜೀವ ತುಂಬುತ್ತದೆ, ಅವಳ ವೈಯಕ್ತಿಕ ಮತ್ತು ವೃತ್ತಿಪರ ಪ್ರಪಂಚಗಳಿಗೆ ಪೋರ್ಟಲ್ಗಳನ್ನು ಅನಾವರಣಗೊಳಿಸುತ್ತದೆ ಮತ್ತು ವಾಸ್ತವ ಮತ್ತು ಕಲ್ಪನೆಯ ನಡುವಿನ ಗಡಿಗಳನ್ನು ಮಸುಕುಗೊಳಿಸುತ್ತದೆ. ಜಿಬ್ಬಿಟ್ಜ್ ಅನ್ನು ನಿರೂಪಣೆಯ ಹೃದಯಭಾಗದಲ್ಲಿಡುವ ಮೂಲಕ, ಚಲನಚಿತ್ರವು ಅವರನ್ನು ಸ್ವಯಂ ಅಭಿವ್ಯಕ್ತಿಯ ಪ್ರಬಲ ಸಾಧನಗಳಾಗಿ ಆಚರಿಸುತ್ತದೆ, ಪ್ರತಿಯೊಂದು ಜೋಡಿ ಕ್ರೋಕ್ಗಳನ್ನು ಸೃಜನಶೀಲತೆಯ ಕ್ರಿಯಾತ್ಮಕ ಕ್ಯಾನ್ವಾಸ್ ಆಗಿ ಪರಿವರ್ತಿಸುತ್ತದೆ. ಈ ತಾಜಾ, ತಲ್ಲೀನಗೊಳಿಸುವ ದೃಶ್ಯ ಕಥೆ ಹೇಳುವಿಕೆಯು ಗ್ರಾಹಕರನ್ನು ತಮ್ಮ ವಿಶಿಷ್ಟ ಆತ್ಮಗಳನ್ನು ಅಳವಡಿಸಿಕೊಳ್ಳಲು ಆಹ್ವಾನಿಸುತ್ತದೆ, ಇದು ಸ್ವಯಂ ಅಭಿವ್ಯಕ್ತಿಯನ್ನು ಮಿತಿಯಿಲ್ಲದ ಮತ್ತು ವೈಯಕ್ತಿಕ ಶೈಲಿಯನ್ನು ನಿಜವಾಗಿಯೂ ಮಾಂತ್ರಿಕವಾಗಿಸುತ್ತದೆ.



ಜಯ ಕರ್ನಾಟಕ ಸಂಘಟನೆಯ ಕೇಂದ್ರ ಕಚೇರಿಯಲ್ಲಿ 892 ನೆಯ ಬಸವ ಜಯಂತಿ ಆಚರಿಸಲಾಯಿತು ಕಾರ್ಯಕ್ರಮದಲ್ಲಿ ರಾಜ್ಯಧ್ಯಕ್ಷರಾದ ಬಿಎನ್ ಜಗದೀಶ್ ರಾಮಚಂದ್ರಯ್ಯ ಮುನಿಸಾಮಯ್ಯ ರಜತ್, ಹರೀಶ್ ಕೆ ಎಂ ನಟರಾಜ್ ಸುರೇಶ್ ವಸಂತ್ ಕುಮಾರ್ ಅಮರ್ ಗಂಗಾಧರ್ ಗಿರೀಶ್ ಜಾನ್ಸನ್ ಅಪ್ಪನವರು ಮುಂತಾದವರು ಭಾಗವಹಿಸಲು ಇನ್ನು ಮುಂತಾದ ಭಾಗಿಯಾಗಿದ್ದರು.

# ಬಂಧನ್ ಬ್ಯಾಂಕ್ ಆರ್ಥಿಕ ಫಲಿತಾಂಶ ಬಿಡುಗಡೆ

ಬೆಂಗಳೂರು: ಬಂಧನ್ ಬ್ಯಾಂಕ್ ತನ್ನ 2024–25ನೇ ಹಣಕಾಸು ವರ್ಷದ ನಾಲ್ಕನೇ ತ್ರೈಮಾಸಿಕದ ಆರ್ಥಿಕ ಫಲಿತಾಂಶಗಳನ್ನು ಬಿಡುಗಡೆ ಮಾಡಿದೆ. ಈ ಅವಧಿಯಲ್ಲಿ ಬ್ಯಾಂಕ್ ನ ಒಟ್ಟು ವ್ಯವಹಾರವು ಶೇ.11ರಷ್ಟು ಬೆಳವಣಿಗೆ ಹೊಂದಿದ್ದು, ವ್ಯವಹಾರ 2.88 ಲಕ್ಷ ಕೋಟಿ ರೂ.ಗೆ ತಲುಪಿದೆ. ಬ್ಯಾಂಕ್ ನ ಒಟ್ಟು ಠೇವಣಿಗಳಲ್ಲಿ ರಿಟೇಲ್ ಪಾಲು ಈಗ ಸುಮಾರು ಶೇ.69 ರಷ್ಟಾಗಿದೆ.

ಕಳೆದ ತ್ರೈಮಾಸಿಕದಲ್ಲಿ ಗಮನಿಸಿದಂತೆ ಬ್ಯಾಂಕ್‌ನ ಈ ಬೆಳವಣಿಗೆಯು ಬ್ಯಾಂಕ್ ನ ವಿಸ್ತಾರಗೊಂಡ ವಿತರಣಾ ಜಾಲ, ಅತ್ಯಾಧುಮಿಕ ಕಾರ್ಯಾಚರಣೆ ದಕ್ಷತೆ ಮತ್ತು ಉತ್ತಮ ವ್ಯಾಪಾರ ವಾತಾವರಣದಿಂದ




ಸಾಧ್ಯವಾಗಿದೆ. 2024–25ನೇ ಹಣಕಾಸು ವರ್ಷದಲ್ಲಿ ಬ್ಯಾಂಕ್ 2,745 ಕೋಟಿ ರೂ. ನಿವ್ವಳ ಲಾಭವನ್ನು ದಾಖಲಿಸಿದೆ.

ಬ್ಯಾಂಕ್ ಈಗ ಭಾರತದ ಒಟ್ಟು 36 ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿ 35 ಕಡೆಗಳಲ್ಲಿ 6,300ಕ್ಕೂ ಹೆಚ್ಚು ಬ್ಯಾಂಕಿಂಗ್ ಔಟ್ ಲೆಟ್ ಗಳನ್ನು ಹೊಂದಿದ್ದು, ಅವುಗಳ ಮೂಲಕ 3.15 ಕೋಟಿಗೂ ಅಧಿಕ ಗ್ರಾಹಕರಿಗೆ ಸೇವೆ ಸಲ್ಲಿಸುತ್ತಿದೆ. ಬಂಧನ್ ಬ್ಯಾಂಕ್ ನಲ್ಲಿ ಕೆಲಸ ಮಾಡುವ ಒಟ್ಟು ಉದ್ಯೋಗಿಗಳ ಸಂಖ್ಯೆ ಸುಮಾರು 75,000 ಆಗಿದೆ.

2025ನೇ ಹಣಕಾಸು ವರ್ಷದ ನಾಲ್ಕನೇ ತ್ರೈಮಾಸಿಕದಲ್ಲಿ ಬ್ಯಾಂಕ್ ತನ್ನ ಠೇವಣಿಗಳ ಆಧಾರದಲ್ಲಿ ವಾರ್ಷಿಕವಾಗಿ ಶೇ.12ರಷ್ಟು ಬೆಳವಣಿಗೆಯನ್ನು ದಾಖಲಿಸಿದೆ ಮತ್ತು ಠೇವಣಿ ಪುಸ್ತಕವು ಈಗ 1.51 ಲಕ್ಷ ಕೋಟಿ ರೂ. ವರೆಗೆ ತಲುಪಿದೆ. ಒಟ್ಟು ಸಾಲಗಳು ಇದೇ ಅವಧಿಯಲ್ಲಿ 1.37 ಲಕ್ಷ ಕೋಟಿ ರೂ.ಗೆ ತಲುಪಿವೆ. ಚಾಲ್ತಿ ಖಾತೆ ಅಥವಾ ಕರೆಂಟ್ ಅಕೌಂಟ್ ಮತ್ತು ಉಳಿತಾಯ ಖಾತೆ ಗಳು ಒಟ್ಟು ಠೇವಣಿಗಳಲ್ಲಿ ಶೇ.31.4ರಷ್ಟನ್ನು ಹೊಂದಿದ್ದು, ಸಿಎಎಸ್ಎ ಅನುಪಾತವು ಆರೋಗ್ಯಕರವಾಗಿದೆ. ಬ್ಯಾಂಕ್ ನ ಆರ್ಥಿಕ ಸ್ಥಿರತೆಯ ಪ್ರಮುಖ ಸೂಚಕವಾಗಿರುವ ಕ್ಯಾಪಿಟಲ್ ಅಡೆಕ್ವಸಿ ರೇಶಿಯೋ (ಸಿಎಆರ್) ನಿಯಂತ್ರಕ ಮಿತಿಗಿಂತ ಉತ್ತಮವಾಗಿದ್ದು, ಶೇ.18.7ರಷ್ಟಿದೆ.




ಡಿಕನ್ ಸನ್ಸ್ ರಸ್ತೆಯಲ್ಲಿ ನೂತನವಾಗಿ ನಿರ್ಮಿಸಲಾಗಿರುವ "ತ್ರಿ ದಿಯಾ" ಅತ್ಯಾಧುನಿಕ ವಜ್ರಾಭರಣಗಳ ಮಳಿಗೆಯನ್ನು ಸಂಸದರಾದ ಪಿ.ಸಿ.ಮೋಹನ್, ಶಾಸಕರಾದ ರಿಜ್ವಾನ್ ಅರ್ಷದ್ ಹಾಗೂ ನಟಿ ಸಪ್ತಮಿ ಗೌಡ ಉದ್ಘಾಟಿಸಿದರು. ಕಾರ್ಯಕ್ರಮದಲ್ಲಿ ತ್ರಿ ದಿಯಾ ಮಳಿಗೆಯ ನಿರ್ದೇಶಕರಾದ ಅವನಿ ಮೆಹ್ತಾ ಉಪಸ್ಥಿತರಿದ್ದರು.

# ಎನ್‌ಪಿಸಿಐ ಭಾರತ್ ಬಿಲ್‌ಪೇ ಸಹಭಾಗಿತ್ವ ಘೋಷಣೆ

ಬೆಂಗಳೂರು: ನ್ಯಾಷನಲ್ ಪೇಮೆಂಟ್ಸ್ ಕಾರ್ಪೊರೇಷನ್ ಆಫ್ ಇಂಡಿಯಾ (ಎನ್‌ಪಿಸಿಐ) ಒಡೆತನದ ಸಂಸ್ಥೆಯಾಗಿರುವ ಎನ್‌ಪಿಸಿಐ ಭಾರತ್ ಬಿಲ್‌ಪೇ (ಎನ್‌ಬಿಬಿಎಲ್) ಸಂಸ್ಥೆಯು ಏರ್‌ಟೆಲ್ ಪೇಮೆಂಟ್ಸ್ ಬ್ಯಾಂಕ್ ನ ಎನ್‌ಸಿಎಂಸಿ (ನ್ಯಾಷನಲ್ ಕಾಮನ್ ಮೊಬಿಲಿಟಿ ಕಾರ್ಡ್) ಆಧರಿತ ರುಪೇ ಆನ್–ದಿ–ಗೋ ಕಾರ್ಡ್ ಗಳಿಗೆ ಭಾರತ್ ಕನೆಕ್ಟ್ ಆಪ್ ಗಳ ಮೂಲಕ ಸುಲಭವಾಗಿ ರೀಚಾರ್ಜ್ ಮಾಡುವ ಸೌಲಭ್ಯವನ್ನು ಒದಗಿಸಲು ಸಹಭಾಗಿತ್ವ ಮಾಡಿಕೊಂಡಿದೆ. ಭಾರತ್ ಕನೆಕ್ಟ್ ಜೊತೆಗಿನ ಈ ಸಂಯೋಜನೆಯಿಂದ ಬಳಕೆದಾರರು ಭಾರತ್ ಕನೆಕ್ಟ್ ಜೊತೆ ಹೊಂದಿಕೊಳ್ಳುವ ಯಾವುದೇ ಆಪ್ ನಿಂದ ತಮ್ಮ ಕಾರ್ಡ್‌ಗಳನ್ನು ಸುಲಭವಾಗಿ ರೀಚಾರ್ಜ್ ಮಾಡಬಹುದು.

ಎನ್‌ಸಿಎಂಸಿ ಯೋಜನೆಯು ಭಾರತದ ವಿವಿಧ ನಗರಗಳಲ್ಲಿ ಸಾರ್ವಜನಿಕ ಸಾರಿಗೆ ವ್ಯವಸ್ಥೆಯನ್ನು ಸರಳಗೊಳಿಸಲಿದ್ದು, ಇದು ಮೆಟ್ರೋ ಮತ್ತು ಬಸ್ ಗಳಲ್ಲಿ ಒಂದೇ ಕಾರ್ಡ್ ಬಳಸಿಕೊಂಡು ಸಂಪರ್ಕ ರಹಿತವಾಗಿ, ತೊಂದರೆಮುಕ್ತವಾಗಿ ಸುಲಭವಾಗಿ ಪ್ರಯಾಣಿಸುವ ಸುಖಕರ ಅನುಭವವನ್ನು ಒದಗಿಸುತ್ತದೆ. ಈ ಸಂಯೋಜನೆಯು ದೈನಂದಿನ ಪ್ರಯಾಣ ಅವಶ್ಯಕತೆ ಇರುವ ಪ್ರಯಾಣಿಕರು ದೀರ್ಘ ಸರತಿಯಲ್ಲಿ ನಿಂತು




ರೀಚಾರ್ಜ್ ಮಾಡುವ ಅಗತ್ಯವನ್ನು ತೊಡೆಯುತ್ತದೆ. ನಗದು ರಹಿತ ವಹಿವಾಟುಗಳನ್ನು ಮಾಡಲು ಉತ್ತೇಜಿಸುತ್ತದೆ ಮತ್ತು ಬಳಕೆದಾರರಿಗೆ ಹೆಚ್ಚಿನ ಸೌಲಭ್ಯವನ್ನು ನೀಡುತ್ತದೆ.

# ‘ಜನರ ಸಮಸ್ಯೆ ನಿವಾರಣೆಯಲ್ಲಿ ನಿರ್ಲಕ್ಷ್ಯ ಸಲ್ಲದು’



ಬೆಂಗಳೂರು: ಸಾರ್ವಜನಿಕರ ಕುಂದುಕೊರತೆಗಳನ್ನು ನಿವಾರಿಸುವ ನಿಟ್ಟಿನಲ್ಲಿ ನಿರ್ಲಕ್ಷ್ಯ ವಹಿಸಬಾರದು ಎಂದು ನಗರಾಭಿವೃದ್ಧಿ ಮತ್ತು ಯೋಜನಾ ಖಾತೆ ಸಚಿವ ಬಿ.ಎಸ್.ಸುರೇಶ ಅವರು, ಮಹಾನಗರ ಪಾಲಿಕೆಗಳ ಆಯುಕ್ತರಿಗೆ ಸೂಚನೆ ನೀಡಿದ್ದಾರೆ.

ಬೆಂಗಳೂರಿನಲ್ಲಿ ಮಂಗಳವಾರ ಎಲ್ಲಾ ಮಹಾನಗರ ಪಾಲಿಕೆ ಆಯುಕ್ತರೊಂದಿಗೆ ವಿಡಿಯೋ ಸಂವಾದ ನಡೆಸಿದ ಅವರು, ಪಾಲಿಕೆಗಳ ವ್ಯಾಪ್ತಿಯಲ್ಲಿನ ನಾಗರಿಕರಿಂದ ದೂರುಗಳು ಬಂದ ತಕ್ಷಣವೇ ಸಮಸ್ಯೆಗಳನ್ನು ಪರಿಹರಿಸಬೇಕು. ಯಾವುದೇ ಕಾರಣಕ್ಕೂ ನಾಗರಿಕರು ಇಲಾಖೆಯ ಕೇಂದ್ರ ಕಚೇರಿಯವರೆಗೆ ಸಮಸ್ಯೆಗಳನ್ನು ಹೊತ್ತು ತರಬಾರದು ಎಂದು ನಿರ್ದೇಶನ ನೀಡಿದರು.

ರಾಜ್ಯ ಸರ್ಕಾರ ಬಿಡುಗಡೆ ಮಾಡಿರುವ ಅನುದಾನಗಳನ್ನು ಕಾಲಮಿತಿಯಲ್ಲಿ ಬಳಕೆ ಮಾಡಿ, ಸಾರ್ವಜನಿಕರಿಗೆ ಸೌಲಭ್ಯಗಳನ್ನು ಒದಗಿಸಬೇಕು. ಈ ಕರ್ತವ್ಯದಿಂದ ಯಾರೂ ನುಣುಚಿಕೊಳ್ಳಬಾರದು ಎಂದು ಸಚಿವರು ಎಚ್ಚರಿಕೆ ನೀಡಿದರು.

ಇದೇ ವೇಳೆ ಕೇಂದ್ರ ಯೋಜನೆಗಳ ಬಗ್ಗೆಯೂ ಗಮನಹರಿಸಬೇಕು ಮತ್ತು ರಾಜ್ಯ ಹಾಗೂ ಕೇಂದ್ರ ಸರ್ಕಾರದ ಯೋಜನೆಗಳನ್ನು ಕೈಗೆತ್ತಿಕೊಂಡು ಕಾಲಮಿತಿಯೊಳಗೆ ಪೂರ್ಣಗೊಳಿಸಬೇಕೆಂದು ಸೂಚಿಸಿದರು.

ಪಾಲಿಕೆ ವ್ಯಾಪ್ತಿಯಲ್ಲಿನ ಕಸ ವಿಲೇವಾರಿ ಸಮಸ್ಯೆ, ರಸ್ತೆಗಳ ಕಾಮಗಾರಿ ಸೇರಿದಂತೆ ಇನ್ನಿತರ ಕಾಮಗಾರಿಗಳನ್ನು ಯಾವುದೇ ಲೋಪವಾಗದ ರೀತಿಯಲ್ಲಿ ಕೈಗೊಳ್ಳಬೇಕು. ಇದೇ ವೇಳೆ, ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೆಯ ಇ-ಖಾತಾ ಸೌಲಭ್ಯವನ್ನು ಅರ್ಹ ನಾಗರಿಕರಿಗೆ ವಿತರಣೆ ಮಾಡಲು ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕೆಂದು ಅವರು ತಿಳಿಸಿದರು.

ಸರ್ಕಾರದಿಂದ ಬರುವ ಅನುದಾನವನ್ನು ಸೂಕ್ತ ಸಮಗ್ರ ಯೋಜನೆಯನ್ನು ಸಿದ್ಧಪಡಿಸಿ ಆ ಅನುದಾನವನ್ನು ಬಳಕೆ ಮಾಡಿಕೊಳ್ಳಬೇಕೆಂದು ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಇದೇ ವೇಳೆ, ಪೌರಕಾರ್ಮಿಕರ ಸಮಸ್ಯೆಗಳನ್ನು ಪರಿಹರಿಸುವ ನಿಟ್ಟಿನಲ್ಲಿ ಸೂಕ್ತ ಕ್ರಮ ವಹಿಸಬೇ ಕೆಂದು ಸೂಚಿಸಿದ ಸಚಿವರು, ಪಾಲಿಕೆಗಳ ಸಿಬ್ಬಂದಿ ಸಮಸ್ಯೆಗಳನ್ನೂ ಆಲಿಸಿದರು. ಈ ಸಭೆಯಲ್ಲಿ ಪೌರಾಡಳಿತ ನಿರ್ದೇಶನಾಲಯದ ನಿರ್ದೇಶ ಕರಾದ ಪ್ರಭುಲಿಂಗ ಕವಳಿಕಟ್ಟಿ, 10 ಪಾಲಿಕೆ ಆಯು ಕ್ತರು ಮತ್ತು ಅಧಿಕಾರಿಗಳು ಪಾಲ್ಗೊಂಡಿದ್ದರು.

# ಬೆಂಗಳೂರಿನ ಕಮಾಂಡ್ ಆಸ್ಪತ್ರೆಯಲ್ಲಿ ಹೊಸ ಸಂಕೀರ್ಣ ಶಂಕುಸ್ಥಾಪನೆ




ಬೆಂಗಳೂರು: ಬೆಂಗಳೂರಿನ ಕಮಾಂಡ್ ಆಸ್ಪತ್ರೆ ವಾಯುಪಡೆ ಯಲ್ಲಿ ಏಪ್ರಿಲ್ 29, 2025 ರಂದು ಶಿಲಾನ್ಯಾಸ ಸಮಾರಂಭವನ್ನು ನಡೆಸಲಾಯಿತು, ತರಬೇತಿ ಕಮಾಂಡ್‌ನ ವಾಯು ಅಧಿಕಾರಿ ಕಮಾಂಡಿಂಗ್-ಇನ್-ಚೀಫ್ ಏರ್ ಮಾರ್ಷಲ್ ನಾಗೇಶ್ ಕಪೂರ್ ಅವರು, ವಾಯುಪಡೆಯ ಪ್ರಧಾನ ವೈದ್ಯಕೀಯ ಸೇವೆಗಳ (ವಾಯು) ಮಹಾನಿರ್ದೇಶಕ ಏರ್ ಮಾರ್ಷಲ್ ಸಂದೀಪ್ ಥರೇಜಾ ಅವರ ಸಮ್ಮುಖದಲ್ಲಿ ಹೊಸ ಆಧುನಿಕ ಬಹುಮಹಡಿ ಆಸ್ಪತ್ರೆ ಸಂಕೀರ್ಣದ ನಿರ್ಮಾಣಕ್ಕೆ ಶಿಲಾನ್ಯಾಸ ನೆರವೇರಿಸಿದರು. ಈ ಕಾರ್ಯಕ್ರಮವು ಭಾರತದ ಮಿಲಿಟರಿ ಆರೋಗ್ಯ ಮೂಲಸೌಕರ್ಯದ ಆಧುನೀಕರಣದಲ್ಲಿ ಪ್ರಮುಖ ಮೈಲಿಗಲ್ಲನ್ನು ಗುರುತಿಸುತ್ತದೆ.

ಪ್ರಸ್ತುತ ರಚನೆಯು 157 ವರ್ಷ ಹಳೆಯದ್ದಾಗಿದೆ. ಇದು ಸುಮಾರು 3 ಲಕ್ಷ ರೋಗಿಗಳ ಒಪಿಡಿ ಅನ್ನು ನಿರ್ವಹಿಸುತ್ತದೆ, ಇಲ್ಲಿ ವಾರ್ಷಿಕವಾಗಿ 21 ಸಾವಿರ ರೋಗಿಗಳು ದಾಖಲಾಗುತ್ತಾರೆ. ಹೆಚ್ಚುತ್ತಿರುವ ಕೆಲಸದ ಹೊರೆ, ಆರೋಗ್ಯ ತಂತ್ರಜ್ಞಾನದಲ್ಲಿ ತ್ವರಿತ ಪ್ರಗತಿಯನ್ನು ಅಳವಡಿಸಿಕೊಳ್ಳುವ ಅಗತ್ಯತೆ ಇರುವ ಹಿನ್ನೆಲೆಯಲ್ಲಿ, ಭವಿಷ್ಯದಲ್ಲಿ ವಿಸ್ತರಣೆಗೆ ಸಾಕಷ್ಟು ಅವಕಾಶವಿರುವ ಆಧುನಿಕ ಮೂಲಸೌಕರ್ಯವನ್ನು ಇದು ಒಳಗೊಂಡಿದೆ. ಈ ಯೋಜನೆಯು ಪೂರ್ಣಗೊಂಡ ನಂತರ ಅತ್ಯಾಧುನಿಕ 800 ಹಾಸಿಗೆಗಳ ಸೌಲಭ್ಯಗಳು ಲಭ್ಯವಾಗಲಿವೆ. ಇದು 16 ಮಾಡ್ಯುಲರ್ ಆಪರೇಷನ್ ಥಿಯೇಟರ್‌ಗಳು, ಆಧುನಿಕ ಐಸಿಯುಗಳು, ನ್ಯೂಮ್ಯಾಟಿಕ್ ಚ್ಯೂಟ್ ಸಿಸ್ಟಮ್‌ನೊಂದಿಗೆ ಸುಧಾರಿತ ಇಮೇಜಿಂಗ್ ಮತ್ತು ಪ್ರಯೋಗಾಲಯ ಸೌಲಭ್ಯಗಳನ್ನು ಒಳಗೊಂಡಂತೆ ಉನ್ನತ-ಮಟ್ಟದ ರೋಗನಿರ್ಣಯ ಸೇವೆಗಳನ್ನು ಹೊಂದಿರುತ್ತದೆ. ಸ್ಮಾರ್ಟ್ ಕಟ್ಟಡ ನಿರ್ವಹಣಾ ವ್ಯವಸ್ಥೆ ಮತ್ತು ಔಷಿ ಕೊಠಡಿಯು ವಿಶಾಲವಾದ ಬೆಳಕು, ಸಾಕಷ್ಟು ಭದ್ರತೆ, ಇಂಧನ ಬಳಕೆ, ಮೂಲಸೌಕರ್ಯದ ಪರಿಣಾಮಕಾರಿ ನಿರ್ವಹಣೆ ಮತ್ತು ಸ್ಮಾರ್ಟ್ ಹವಾಮಾನ ನಿಯಂತ್ರಣವನ್ನು ಮೇಲ್ವಿಚಾರಣೆ ಮಾಡುತ್ತದೆ, ಇದರಿಂದಾಗಿ ಆರೋಗ್ಯ ಸೇವೆಗಳ ತಡೆರಹಿತ ವಿತರಣೆಯನ್ನು ಖಚಿತಪಡಿಸುತ್ತದೆ.

ಕೆಳ ಮಹಡಿಗಳಲ್ಲಿನ ಒಪಿಡಿಗಳು, ವಿಶಾಲವಾದ ಲಿಫ್ಟ್‌ಗಳು ಮತ್ತು ಎಸ್ಕಲೇಟರ್‌ಗಳನ್ನು ಹೊಂದಿದ್ದು, ವಿಕಲಚೇತನರು ಸೇರಿದಂತೆ ಇತರ ರೋಗಿಗಳಿಗೆ ಅನುಕೂಲಕರ ವಾತಾವರಣ ನಿರ್ಮಿಸಲಿದೆ. ಇದರ ಜೊತೆಗೆ, ಡಿಜಿಟಲೀಕರಣ ಮತ್ತು ಸಂಯೋಜಿತ ವ್ಯವಸ್ಥೆಗಳು, ರೋಗಿಗಳು ಹೆಚ್ಚು ಸಮಯದವರೆಗೆ ಕಾಯುವುದನ್ನು ಕಡಿಮೆಗೊಳಿಸಿ, ಶೀಘ್ರದಲ್ಲಿ ರೋಗಿಗಳಿಗೆ ಚಿಕಿತ್ಸೆ ಸಿಗಲಿದೆ.



ಶ್ರೀನಿವಾಸಪುರ ಪಟ್ಟಣದ ಪುರಸಭೆ ಕಚೇರಿಯ ಆವರಣದಲ್ಲಿ ಜಿಲ್ಲಾ ಮತ್ತು ತಾಲೂಕು ಆರೋಗ್ಯ ಇಲಾಖೆ ವತಿಯಿಂದ ರಾಷ್ಟ್ರೀಯ ಮಲೇರಿಯಾ ವಿರೋಧಿ ದಿನ ಮಾಸಾಚರಣೆ ಜಾಗೃತಿ ಜಾಥಗೆ ತಾಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಎಸ್.ಶಿವಕಮಾರಿ ಚಾಲನೆ ನೀಡಿ ಮಾತನಾಡಿ ಸಾರ್ವಜನಿಕರು ಮನೆಗಳ ಸುತ್ತಾ ಮುತ್ತಾ ಸ್ವಚ್ಚ ಹಾಗು ನೈರ್ಮಲ್ಯ ಕಾಪಾಡುತ್ತಾ, ಸೊಳ್ಳೆ ಪರದೆಗಳು ಬಳಸಿಕೊಳ್ಳಬೇಕು ಎಂದು ಸಲಹೆ ನೀಡುತ್ತಾ, ಯಾವುದೇ ಅಡ್ಡಪರಿಣಾಮಗಳು ಇಲ್ಲದ ರೀತಿಯಲ್ಲಿನ ಕೀಟ ನಾಶಕಗಳನ್ನು ಬಳಸಿಕೊಳ್ಳುತ್ತಾ ತಮ್ಮ ತಮ್ಮ ಆರೋಗ್ಯದ ಕಡೆ ಹೆಚ್ಚು ಕಾಳಜಿ ವಹಿಸಿಕೊಳ್ಳುವಂತೆ ಎಂದು ಸಲಹೆ ನೀಡಿದರು.

# ಅಂತರಾಜ್ಯ ಸರ ಕಳ್ಳನ ಬಂಧನ

ಗುಡಿಬಂಡೆ: ಕಳೆದ 16 ಜನವರಿ 2024 ರಂದು ಗುಡಿಬಂಡೆ ತಾಲೂಕಿನ ಹಂಪಸಂದ್ರ ಗ್ರಾಪಂ ವ್ಯಾಪ್ತಿಯ ಓಬನ್ನಗಾರಿಪಲ್ಲಿ ಗ್ರಾಮದ ಹೊರವಲಯದಲ್ಲಿ ಕುರಿಗಳಿಗಾಗಿ ಮೇವನ್ನು ಕೊಯ್ಯುತ್ತಿದ್ದ ಮಹಿಳೆಯ ಕತ್ತಿನಲ್ಲಿದ್ದ 33 ಗ್ರಾಂ ಚಿನ್ನದ ಮಾಂಗಲ್ಯ ಸರವನ್ನು ಕಿತ್ತುಕೊಂಡು ಪರಾರಿಯಾಗಿದ್ದ ಖತರ್ನಾಕ್ ಕಳ್ಳನನ್ನು ಗುಡಿಬಂಡೆ ಪೊಲೀಸರು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ. ಆರೋಪಿಯನ್ನು ಮಹಾರಾಷ್ಟ ಮೂಲದ ಸಾಧಿಕ್ ರಫೀಕ್ ಖಾನ್ (40) ಎಂದು ಗುರ್ತಿಸಲಾಗಿದೆ.

ಕಳೆದ ಒಂದು ವರ್ಷದ ಹಿಂದೆ ಓಬನ್ನಗಾರಿಹಳ್ಳಿ ಗ್ರಾಮದ ಚೌಡಮ್ಮ ಎಂಬ ಮಹಿಳೆ ಗುಡಿಬಂಡೆ ಬಾಗೇಪಲ್ಲಿ ಮಾರ್ಗದಲ್ಲಿ ಬರುವಂತಹ ತಮ್ಮ ಜಮೀನಿನಲ್ಲಿ ಕುರಿಗಳಿಗಾಗಿ ಮೇವನ್ನು ಕೊಯ್ಯುತ್ತಿರುತ್ತಾರೆ. ಈ ಸಮಯದಲ್ಲಿ ದ್ವಿಚಕ್ರ ವಾಹನದಲ್ಲಿ ಬಂದ ಇಬ್ಬರು ಅಸಾಮಿಗಳು ಅಲ್ಲಿ ಯಾರೂ ಇಲ್ಲದೇ ಇರುವುದನ್ನು ಗಮನಿಸಿ ಮಹಿಳೆಯ ಕತ್ತಿನಲ್ಲಿದ್ದ 33 ಗ್ರಾಂ ಚಿನ್ನದ ಮಾಂಗಲ್ಯ ಸರವನ್ನು ಕಸಿದುಕೊಂಡು ಪರಾರಿಯಾಗಿರುತ್ತಾರೆ. ಸಂತ್ರಸ್ತರು ಈ ಸಂಬಂಧ ಗುಡಿಬಂಡೆ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿರುತ್ತಾರೆ. ಆರೋಪಿಯ ಪತ್ತೆಗೆ ಚಿಕ್ಕಬಳ್ಳಾಪುರ ಎಸ್.ಪಿ. ಕುಶಾಲ್ ಚೌಕ್ಸೆ ಪ್ರತ್ಯೇಕ ತಂಡವನ್ನು ರಚಿಸಿರುತ್ತಾರೆ.

ಇನ್ನೂ ಕಳ್ಳನನ್ನು ಹಿಡಿಯಲು ರಚನೆಯಾದ ಪ್ರತ್ಯೇಕ ಪೊಲೀಸ್ ತಂಡ ಆರೋಪಿಯನ್ನು ಬಂಧಿಸಿದ್ದಾರೆ. ಆರೋಪಿ ಸಾಧಿಕ್ ರಫೀಕ್ ಖಾನ್ ಮಹಾರಾಷ್ಟ ಮೂಲದವನಾಗಿದ್ದು, ಬೀದಿ ಬದಿಯಲ್ಲಿ ಕನ್ನಡಕ ವ್ಯಾಪಾರ ಮಾಡುತ್ತಿದ್ದ ಎನ್ನಲಾಗಿದೆ. ಬಂಧಿತ ಆರೋಪಿಯಿಂದ 33 ಗ್ರಾಂ ಚಿನ್ನದ ಮಾಂಗಲ್ಯವನ್ನು ವಶಪಡಿಸಿಕೊಂಡು ನ್ಯಾಯಾಲಯದ ಬಂಧನಕ್ಕೆ ಒಳಪಡಿಸಲಾಗಿದೆ.

ಈ ಕಾರ್ಯಾಚರಣೆಯಲ್ಲಿ ಭಾಗಿಯಾಗಿದ್ದ ಗುಡಿಬಂಡೆ ಪೊಲೀಸ್ ಆರಕ್ಷಕ ವೃತ್ತ ನಿರೀಕ್ಷಕ ನಯಾಜ್ ಬೇಗ್, ಸಬ್ ಇನ್ಸ್‌ಪೆಕ್ಟರ್ ಗಣೇಶ್, ರಮೇಶ್ ಹಾಗೂ ಪೊಲೀಸ್ ಪೇದೆಗಳಾದ ಆನಂದ್, ದಕ್ಷಿಣಾ ಮೂರ್ತಿ, ನಾರಾಯಣಸ್ವಾಮಿ, ರವೀಂದ್ರ ಕುಮಾರ್, ಮುನಿಕೃಷ್ಣ, ಅರುಣ್ ಸೇರಿದಂತೆ ಇತರರನ್ನು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕುಶಾಲ್ ಚೌಕ್ಸೆ ಅಭಿನಂದಿಸಿದ್ದಾರೆ.

# ಶಂಕರಾಚಾರ್ಯ ಜಯಂತಿ

ಕೋಲಾರ: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕೋಲಾರ ಇವರ ಸಂಯುಕ್ತ ಆಶ್ರಯದಲ್ಲಿ ನಡೆಯಲಿರುವ ಶ್ರೀ ಶಂಕರಾಚಾರ್ಯ ಜಯಂತಿ ಕಾರ್ಯಕ್ರಮವನ್ನು ಮೇ02 ರಂದು ಬೆಳಗ್ಗೆ 11ಗಂಟೆಗೆ ಕೋಲಾರದ ಶ್ರೀ ಟಿ.ಚನ್ನಯ್ಯ ರಂಗಮಂದಿರದಲ್ಲಿ ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮದ ಉದ್ಘಾಟನೆಯನ್ನು ಸನ್ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಹಾಗೂ ಕೋಲಾರ ಜಿಲ್ಲಾ ಉಸ್ತುವಾರಿ ಸಚಿವರಾದ ಬಿ.ಎಸ್. ಸುರೇಶ್ ಅವರು ನೆರವೇರಿಸುವರು. ಅಧ್ಯಕ್ಷತೆಯನ್ನು ಕೋಲಾರ ವಿಧಾನಸಭಾ ಕ್ಷೇತ್ರದ ಶಾಸಕರಾದ ಡಾ॥ ಕೊತ್ತೂರು ಜಿ.ಮಂಜುನಾಥ್ ಅವರು ವಹಿಸುವರು.

ಮುಖ್ಯ ಅತಿಥಿಗಳಾಗಿ ವಿಧಾನ ಪರಿಷತ್ ಸದಸ್ಯರು ಮತ್ತು ಸನ್ಮಾನ್ಯ ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿಗಳಾದ ನಸೀರ್ ಅಹಮದ್, ನಗರ ಮೂಲ ಸೌಕರ್ಯ ಅಭಿವೃದ್ಧಿ ಮತ್ತು ಹಣಕಾಸು ನಿಗಮದ ಅಧ್ಯಕ್ಷರು ಮತ್ತು ಬಂಗಾರಪೇಟೆ ವಿಧಾನಸಭಾ ಕ್ಷೇತ್ರದ ಶಾಸಕರಾದ ಎಸ್.ಎನ್.ನಾರಾಯಣಸ್ವಾಮಿ ಕೆ.ಎಂ, ಕರಕುಶಲ ಕೈಗಾರಿಕಾ ಅಭಿವೃದ್ಧಿ ನಿಗಮದ ಅಧ್ಯಕ್ಷರು ಮತ್ತು ಕೆ.ಜಿ.ಎಫ್ ವಿಧಾನಸಭಾ ಕ್ಷೇತ್ರದ ಶಾಸಕರಾದ ಡಾ॥ ರೂಪಕಲಾ ಎಂ.ಶಶಿಧರ್, ಕೋಲಾರ ಲೋಕಸಭಾ ಕ್ಷೇತ್ರದ ಸಂಸದರಾದ ಎಂ.ಮಲ್ಲೇಶ್ ಬಾಬು, ಮಾಲೂರು ವಿಧಾನಸಭಾ ಕ್ಷೇತ್ರದ ಶಾಸಕರಾದ ಕೆ.ವೈ.ನಂಜೇಗೌಡ, ಶ್ರೀನಿವಾಸಪುರ ವಿಧಾನಸಭಾ ಕ್ಷೇತ್ರದ ಶಾಸಕರಾದ ಜಿ.ಕೆ ವೆಂಕಟಶಿವಾರೆಡ್ಡಿ, ಮುಳಬಾಗಿಲು ವಿಧಾನಸಭಾ ಕ್ಷೇತ್ರದ ಶಾಸಕರಾದ ಸಮೃದ್ಧಿ ಮಂಜುನಾಥ್. ವಿಧಾನ ಪರಿಷತ್ ಶಾಸಕರಾದ ಇಂಚರ ಗೋವಿಂದರಾಜು, ಚಿದಾನಂದ ಎಂ.ಗೌಡ, ಎಂ.ಎಲ್ ಅನಿಲ್ ಕುಮಾರ್, ಡಾ॥ ಡಿ.ಟಿ. ಶ್ರೀನಿವಾಸ, ನಗರಸಭೆ ಅಧ್ಯಕ್ಷರಾದ ಕೆ.ಲಕ್ಷ್ಮಿದೇವಮ್ಮ ರಮೇಶ್, ಗ್ಯಾರೆಂಟಿ ಯೋಜನೆಗಳ ಜಿಲ್ಲಾಧ್ಯಕ್ಷರಾದ ವೈ.ಶಿವಕುಮಾರ್, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಮಹ್ಮದ್ ಹನಿಫ್ ಅವರು ಭಾಗವಹಿಸುವರು.

# ಗ್ರಾಮಸಭೆಗೆ ತಹಸೀಲ್ದಾರ್ ವೆಂಕಟೇಶಪ್ಪ ಗೈರು: ಎನ್.ನಾರಾಯಣಸ್ವಾಮಿ ಗರಂ





ಬಂಗಾರಪೇಟೆ: “ತಾಲ್ಲೂಕು ಕಛೇರಿಯಲ್ಲಿ ಲಂಚವಿಲ್ಲದೆ ಯಾವುದೂ ಕೆಲಸ ನಡೆಯುತ್ತಿಲ್ಲ” ಎಂದು ಆರೋಪಿಸಿ ಬಂಗಾರಪೇಟೆ ಶಾಸಕ ಎಸ್. ಎನ್. ನಾರಾಯಣಸ್ವಾಮಿ ಅವರು ತಹಸೀಲ್ದಾರ್ ವೆಂಕಟೇಶಪ್ಪ ವಿರುದ್ಧ ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ತಾಲ್ಲೂಕಿನ ಎಳೇಸಂದ್ರ ಮತ್ತು ಗುಲ್ಲಹಳ್ಳಿ ಗ್ರಾಮ ಪಂಚಾಯಿತಿಗಳಲ್ಲಿ ಮಂಗಳವಾರ ನಡೆದ ಗ್ರಾಮಸಭೆಯಲ್ಲಿ ಮಾತನಾಡಿದ ಶಾಸಕರು, “ತಹಸೀಲ್ದಾರ್ ವೆಂಕಟೇಶಪ್ಪ ಅಧಿಕಾರಕ್ಕೆ ಬಂದ ನಂತರ ಹೈಟೆಕ್ ಅಧಿಕಾರಿಯಂತೆ ನಡೆದುಕೊಳ್ಳುತ್ತಿದ್ದಾರೆ. ಸಾರ್ವಜನಿಕರು ಲಂಚ ಕೊಟ್ಟರೆ ಮಾತ್ರ ಕೆಲಸ ಮಾಡುತ್ತಾರೆ. ಇಲ್ಲದಿದ್ದರೆ ಯಾರ ಕೆಲಸವೂ ಆಗುವುದಿಲ್ಲ,” ಎಂದು ಗಂಭೀರ ಆರೋಪ ಹೊರಹಾಕಿದರು.

ಶಾಸಕರು ಮುಂದುವರಿಸಿ, “ಗ್ರಾಮಸ್ಥರ ಸಮಸ್ಯೆಗಳನ್ನು ಸ್ಥಳದಲ್ಲೇ ಬಗೆಹರಿಸಲು ಗ್ರಾಮಸಭೆ ಒಂದು ಉತ್ತಮ ವೇದಿಕೆಯಾಗಿದ್ದು, ವಿವಿಧ ಇಲಾಖೆ ಅಧಿಕಾರಿಗಳು ಈ ಸಭೆಗೆ ಹಾಜರಾಗಿದ್ದಾರೆ. ಆದರೆ, ಕಂದಾಯ ಮತ್ತು ಸರ್ವೆ ಇಲಾಖೆಗೆ ಸಂಬಂಧಿಸಿದಂತೆ ಪ್ರಮುಖ ಅಧಿಕಾರಿಯಾದ ತಹಸೀಲ್ದಾರ್ ಗೈರು ಹಾಜರಾಗಿದ್ದಾರೆ. ಇದು ಗಂಭೀರ ಬೆಳವಣಿಗೆ,” ಎಂದು ಹೇಳಿದರು.

ತಹಸೀಲ್ದಾರ್ ವಿರುದ್ಧ ಹಲವು ಸಂಘ-ಸಂಸ್ಥೆಗಳು ಹಾಗೂ ಸಾರ್ವಜನಿಕರಿಂದ ದೂರುಗಳು ದಾಖಲಾಗಿವೆ. ಲೋಕಾಯುಕ್ತಕ್ಕೂ ಈ ಕುರಿತು ದೂರು ಸಲ್ಲಿಸಲಾಗಿದೆ. “ಗ್ರಾಮ ಸಭೆಗಳಿಗೆ ನಿರ್ಲಕ್ಷ್ಯ ತೋರುತ್ತಿರುವ ವೆಂಕಟೇಶಪ್ಪ ವಿರುದ್ಧ ಕ್ರಮಕೈಗೊಳ್ಳಲು ಜಿಲ್ಲೆಯ ಜಿಲ್ಲಾಧಿಕಾರಿಗೆ ದೂರು ನೀಡಲಾಗುವುದು,” ಎಂದು ಶಾಸಕರು ಎಚ್ಚರಿಕೆ ನೀಡಿದರು.



ಪೀಣ್ಯ,ದಾಸರಹಳ್ಳಿ: ಕ್ಷೇತ್ರದ ರಾಜಗೋಪಾಲನಗರ ವಾರ್ಡ್ ನ ಪೀಣ್ಯ 2ನೇ ಹಂತದಲ್ಲಿ ರಾಜಗೋಪಾಲನಗರ ವಾರ್ಡ್ ನ ಬಿಜೆಪಿ ಮುಖಂಡರು ಹಾಗೂ ರಾಜಗೋಪಾಲನಗರ ವಾರ್ಡ್ ಅಧ್ಯಕ್ಷ ನರಸಿಂಹಮೂರ್ತಿ (ಮಂಗಳ ವಾಟರ್), ಬಿಜೆಪಿ ಮುಖಂಡರು ಹಾಗೂ ಸಮೃದ್ಧಿ ಫೌಂಡೇಶನ್ ಸಂಸ್ಥಾಪಕ ಅಧ್ಯಕ್ಷರು, ಸಣ್ಣ ಕೈಗಾರಿಕೆಗಳ ಸಂಘದ ನಿರ್ದೇಶಕರಾದ ಬಿ.ಎನ್.ದಿನೇಶ್ ಹಾಗೂ ಮಾಜಿ ವಾರ್ಡ್ ಅಧ್ಯಕ್ಷ ನಾಗೇಶ್ ಇವರುಗಳ ನೇತೃತ್ವದಲ್ಲಿ ಜಮ್ಮು ಕಾಶ್ಮೀರದ ಪಹಲ್ಗಾಮ್ ನಲ್ಲಿ ಭಯೋತ್ಪಾದಕರ ದಾಳಿಗೆ ಹುತಾತ್ಮರಾದ ಮಧುಸೂದನ್ ರಾವ್, ಭರತ್, ಮಂಜುನಾಥ್ ಇವರುಗಳಿಗೆ ಮೇಣದಬತ್ತಿ ಬೆಳಗುವ ಮೂಲಕ ಭಾವಪೂರ್ಣ ಶ್ರದ್ಧಾಂಜಲಿ ಸಲ್ಲಿಸಲಾಯಿತು. ಈ ಸಂದರ್ಭದಲ್ಲಿ ಆರ್ ಸಿ ಹರೀಶ್, ಕಂಪ್ಯೂಟರ್ ವಿಜಯ್, ರಾಧಾಕೃಷ್ಣ ಶೆಟ್ಟಿ, ಶ್ರೀನಿವಾಸ್, ಮಹಿಳಾ ಮುಖಂಡರಾದ ರೇಣುಕಾ, ಮಾದೇವಮ್ಮ ಮುಂತಾದವರು ಭಾಗವಹಿಸಿದ್ದರು.



ಮುಳಬಾಗಿಲು ನಗರದ ಮುತ್ಯಾಲ ಪೇಟೆ ಯ ಗಂಗಮ್ಮ ದೇವಾಲಯದಲ್ಲಿ ಗಂಗೆ ಜಾತ್ರೆಯ ಸಲುವಾಗಿ ಗಂಗಮ್ಮ ಶಿರಸ್ಸು ಮೆರವಣಿಗೆ ಸೋಮವಾರ ರಾತ್ರಿ ಮತ್ತು ಮಂಗಳವಾರ ಬೆಳಗ್ಗೆನಜಾವದ ವರೆವಿಗೂ ನಡೆಯಿತು.ಸಾವಿರಾರು ಮಂದಿ ಭಕ್ತರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.ನೆಂಟರಿಷ್ಟರಿಗೆ, ಸ್ನೇಹಿತರಿಗೆ ಗಂಗೆ ಜಾತ್ರೆಯ ಸಲುವಾಗಿ ಭರ್ಜರಿ ಔತಣ ಕೂಟ ಏರ್ಪಡಿಸಲಾಗಿತ್ತು. ಹಬ್ಬದ ವಾತಾವರಣ ಉಂಟಾಗಿತ್ತು.

# ‘ಆಡಳಿತಾಧಿಕಾರಿಗಳ ಹುದ್ದೆ ಖಾಲಿ ಇಲ್ಲದಂತೆ ಭರ್ತಿ ಮಾಡಲಾಗುವುದು’



ಬೆಂಗಳೂರು: ಗ್ರಾಮ ಆಡಳಿತಾಧಿಕಾರಿಗಳ ನೇಮಕಾತಿಯನ್ನು ಒಂದು ರೂಪಾಯಿ ಲಂಚವಿಲ್ಲದೇ, ಮಧ್ಯವರ್ತಿಗಳ ಹಾವಳಿಯಿಲ್ಲದೇ ಮಾಡಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಅವರು ಕಂದಾಯ ಇಲಾಖೆಯಲ್ಲಿ ನೂತನವಾಗಿ ಆಯ್ಕೆಯಾಗಿರುವ 1000 ಗ್ರಾಮ ಆಡಳಿತಾಧಿಕಾರಿಗಳಿಗೆ ನೇಮಕಾತಿ ಆದೇಶ ವಿತರಣೆ, ಅಭಿಶಿಕ್ಷಣ ತರಬೇತಿ ಮತ್ತು 4000 ಕ್ರೋಮ್ ಬುಕ್ ವಿತರಣೆ ಹಾಗೂ ಸಾಧನೆಯ ಹಾದಿಯಲ್ಲಿ ಪುಸ್ತಕ ಬಿಡುಗಡೆ ಮಾಡಿ ಮಾತನಾಡಿದರು.

ಹಿಂದೆ 94-95 ರಲ್ಲಿ ಗೋವಿಂದೇಗೌಡರು ಇದ್ದ ಸಂದರ್ಭದಲ್ಲಿ ಒಂದು ಲಕ್ಷ ಉಪಾಧ್ಯಾಯರನ್ನು ಲಂಚವಿಲ್ಲದೇ, ಮಧ್ಯವರ್ತಿಗಳಿಲ್ಲದೇ ನೇಮಕಾತಿ ಮಾಡಲಾಗಿತ್ತು. ಪ್ರಸ್ತುತ ಆರು ಲಕ್ಷ ಅರ್ಜಿಗಳಲ್ಲಿ ಒಂದು ಸಾವಿರ ಗ್ರಾಮ ಆಡಳಿತಾಧಿಕಾರಿಗಳು ಆಯ್ಕೆಯಾಗಿದ್ದು, ಆಯ್ಕೆಯಾಗಿರುವವರು ಪುಣ್ಯವಂತರು. ಕರ್ನಾಟಕ ಪರೀಕ್ಷಾ ಪ್ರಾಧಿಕಾರ ನಡೆಸಿದ ಪರೀಕ್ಷೆಯಲ್ಲಿ ಮೆರಿಟ್ ಆಧಾರದ ಮೇಲೆ ಆಯ್ಕೆಯಾಗಿದ್ದೀರಿ. 9834 ಒಟ್ಟು ಗ್ರಾಮ ಆಡಳಿತಾಧಿಕಾಗಳಿದ್ದು, ಅದರಲ್ಲಿ 8003 ಜನ ಕಾರ್ಯನಿರ್ವಹಿಸುತ್ತಿದ್ದಾರೆ. ಈಗ 1000 ಜನ ಸೇರ್ಪಡೆಯಾಗುತ್ತಿದ್ದಾರೆ. ಯಾವುದೇ ಗ್ರಾಮ ಆಡಳಿತಾಧಿಕಾರಿಯ ಹುದ್ದೆ ಖಾಲಿ ಇಲ್ಲದಂತೆ ಭರ್ತಿ ಮಾಡುವ ಕೆಲಸವನ್ನು ಸರ್ಕಾರ ಮಾಡಲಿದೆ ಎಂದು ಮುಖ್ಯಮಂತ್ರಿಗಳು ಭರವಸೆ ನೀಡಿದರು. ಅಲ್ಲೇ ಇದ್ದು ಸಾಧ್ಯವಾದಷ್ಟು ಮಟ್ಟಿಗೆ ಗ್ರಾಮಗಳಲ್ಲಿಯೇ ವಾಸ ಮಾಡುವುದು ಉತ್ತಮ ಎಂದರು.

ನಮ್ಮ ದೇಶ ಗ್ರಾಮಗಳ ದೇಶ. ಕೃಷಿ ಪ್ರಮುಖವಾದ ಉದ್ಯೋಗವಾಗಿದ್ದು, ಹೆಚ್ಚು ಶೇ 60 ಕ್ಕೂ ಹೆಚ್ಚು ಜನ ಕೃಷಿಯ ಮೇಲೆ ಅವಲಂಬಿತರಾಗಿದ್ದಾರೆ. ಜಮೀನುಗಳ ಲೆಕ್ಕ ಇಡುವುದು ಗ್ರಾಮ ಆಡಳಿತಾಧಿಕಾರಿಗಳ ಜವಾಬ್ದಾರಿ. ಹಳ್ಳಿಗಳಲ್ಲಿ ಶಾಂತಿ, ನೆಮ್ಮದಿ ನೆಲೆಸಲು ದಾಖಲಾತಿಗಳು ಸರಿಯಾಗಿರಬೇಕು. ದಾಖಲೆಗಳನ್ನು ಬಹಳ ಕರಾರುವಾಕ್ಕಾಗಿ ಇಡುವುದು ಅವಶ್ಯಕ. ಆಧುನಿಕ ನಾಡಿನಲ್ಲಿ ತಂತ್ರಜ್ಞಾನ, ವಿಜ್ಞಾನ ಬೆಳೆದಿದೆ. ಈಗ ಪ್ರತಿಯೊಂದೂ ಡಿಜಿಟಲೀಕರಣವಾಗಿದೆ. ಆನ್ ಲೈನ್ ನಲ್ಲಿ ದಾಖಲಾತಿಗಳನ್ನು ಪಡೆಯುವ ವ್ಯವಸ್ಥೆ ಬಂದ ನಂತರ ನಾವು ಯಾವುದೇ ಕಾರಣಕ್ಕೂ ತಪ್ಪುಗಳಿಗೆ ಅವಕಾಶ ನೀಡಬಾರದು. ಗ್ರಾಮ ಆಡಳಿತಾಧಿಕಾರಿಗಳ ಜವಾಬ್ದಾರಿ ಬಹಳ ಮಹತ್ವದ್ದು. ರೈತರಿಗೂ ಗ್ರಾಮ ಆಡಳಿತಾಧಿಕಾರಿಗಳಿಗೆ ಹತ್ತಿರದ ಸಂಬಂಧವಿದ್ದು, ಪ್ರತಿಯೊಬ್ಬ ರೈತರ ಪರಿಚಯ ಅವರಿಗಿರುತ್ತದೆ. ಅವರ ಭೂಮಿಯ ಕುರಿತು ಮಾಹಿತಿ ಗೊತ್ತಿರುತ್ತದೆ. ಅವರ ಪರಿಚಯವಿಟ್ಟುಕೊಂಡು ಅಗತ್ಯ ದಾಖಲಾತಿಗಳನ್ನು ಒದಗಿಸುವುದು ನಿಮ್ಮ ಕೆಲಸ ಎಂದು ಮುಖ್ಯಮಂತ್ರಿಗಳು ಕರೆ ನೀಡಿದರು.

ಗ್ರಾಮ ಆಡಳಿತಾಧಿಕಾರಿಗಳು ಉತ್ತಮ ನಡತೆ, ಸಂಪರ್ಕವನ್ನು ಹೊಂದಿದ್ದರೆ ರೈತರು ನಿಮ್ಮ ಮಾತನ್ನು ಕೇಳುತ್ತಾರೆ. ಗ್ರಾಮ ಆಡಳಿತಾಧಿಕಾರಿಗಳು ಒಳ್ಳೆ ರೀತಿಯ ಕೆಲಸ ಮಾಡಿಕೊಟ್ಟರೆ ಅವರ ಮೇಲೂ ಗೌರವ ವಿರುತ್ತದೆ. ಜನರ ಕೆಲಸ ದೇವರ ಕೆಲಸ ಎಂದು ನೆನೆಪಿಟ್ಟುಕೊಳ್ಳಬೇಕು. ನಾವಿರುವುದೇ ಜನರ ಸೇವೆಗಾಗಿ ಎನ್ನುವುದನ್ನು ಮರೆಯಬಾರದು. ಆರು ಲಕ್ಷ ಜನ ಸರ್ಕಾರಿ ನೌಕರರು ಅವರಿಗಾಗಿಯೇ ಇರುವುದು. ರಾಜಕಾರಣಿಗಳು, ಜನರಿಂದ ಆಯ್ಕೆಯಾದರೆ, ಸರ್ಕಾರದಿಂದ ಆಯ್ಕೆಯಾದ ಸರ್ಕಾರಿ ನೌಕರರು ಜನಸೇವೆಯನ್ನು ಅವರ ಧ್ಯೇಯವಾಗಿಸಬೇಕು.

ಕಂದಾಯ ಇಲಾಖೆಯದ್ದು ಅತ್ಯಂತ ಜವಾಬ್ದಾರಿಯುತ ಕೆಲಸ. ಇಲ್ಲಿ ಸುಧಾರಣೆಗಳನ್ನು ತರಬೇಕೆಂದು ಕೃಷ್ಣಬೈರೇಗೌಡರಿಗೆ ಸೂಚಿಸಲಾಗಿತ್ತು,ಅವರು ಈಗಾಗಲೇ ಅನೇಕ ಸುಧಾರಣೆಗಳನ್ನು ತಂದಿದ್ದಾರೆ. ಅವರಿಗೆ ಇನ್ನಷ್ಟು ಸುಧಾರಣೆಗಳನ್ನು ತರುವ ಶಕ್ತಿ ಇದೆ ಎಂದು ನಂಬಿರುವುದಾಗಿ ಮುಖ್ಯಮಂತ್ರಿಗಳು ತಿಳಿಸಿದರು.

ಗ್ರಾಮ ಆಡಳಿತಾಧಿಕಾರಿಗಳು ತಮ್ಮ ವ್ಯಾಪ್ತಿಯ ಪಂಚಾಯಿತಿಯ ಕೇಂದ್ರಸ್ಥಾನದಲ್ಲಿಯೇ ವಾಸ್ತವ್ಯವಿರುವುದರಿಂದ ರೈತರಿಗೆ ಎಲ್ಲ ಸಮಯದಲ್ಲಿಯೂ ಲಭ್ಯವಿರಲು ಸಾಧ್ಯವಾಗುತ್ತದೆ. ರೈತರ ಮನೆಮನೆಗೆ ಭೇಟಿ ನೀಡಿ ಅವರ ಕುಂದುಕೊರತೆಗಳನ್ನು ಆಲಿಸಬೇಕು. ಗ್ರಾಮ ಆಡಳಿತಾಧಿಕಾರಿಗಳ ಮಂಜೂ 9834 ಮಂಜೂರಾದ ಹುದ್ದೆಗಳಿಗೆ ಲ್ಯಾಪಟಾಪ್ ನೀಡಲು ಸರ್ಕಾರ ನಿರ್ಧರಿಸಿದ್ದು, ಮೊದಲನೇ ಹಂತದಲ್ಲಿ 4000 ಲ್ಯಾಪ್ ಟಾಪ್ ಗಳನ್ನು ಇಂದು ನೀಡಲಾಗುತ್ತಿದೆ. ಯಾವುದೇ ಕಾರಣಕ್ಕೆ ರೈತರಿಗೆ ತೊಂದರೆ ಕೊಡುವುದಾಗಲಿ, ಭ್ರಷ್ಟಾಚಾರಕ್ಕಾಗಲಿ ಅವಕಾಶ ಕೊಡಬಾರದು. ಸಣ್ಣ ಹಿಡುವಳಿದಾರರು ಹೆಚ್ಚಿನ ಸಂಖ್ಯೆಯಲ್ಲಿದ್ದು ಅವರಿಗೆ ಅನುಕೂಲ ಕಲ್ಪಿಸುವುದು ಗ್ರಾಮ ಆಡಳಿತಾಧಿಕಾರಿಗಳ ಜವಾಬ್ದಾರಿಯಾಗಿರುತ್ತದೆ ಎಂದರು.

ಕೃಷಿ, ಲಾಭದಾಯಕ ವೃತ್ತಿಯಾಗಿ ಉಳಿದುಕೊಂಡಿಲ್ಲ. ಅನ್ನದಾತರ ಹಾಗೂ ನಾಡಿನ ಒಳಿತಿಗೆ ಕೆಲಸ ಮಾಡುತ್ತಿರುವ ಅರಿವಿರಬೇಕು. ರೈತರಿಗೆ ಭೂಮಿ ಬೀಟ್ ಕಾರ್ಯಕ್ರಮ ಸರ್ಕಾರ ಜಾರಿಗೆ ತಂದಿದೆ. ವಿದ್ಯಾರ್ಥಿದೆಸೆಯಲ್ಲಿ ವ್ಯವಸಾಯ ಕೈಗೊಂಡ ಸಂದರ್ಭದಲ್ಲಿ ಪಕ್ಕದ ರೈತ ಜಮೀನನ್ನು ಅತಿಕ್ರಮಣ ಮಾಡಿದ್ದು, ಈ ಬಗ್ಗೆ ನಡೆದ ಪಂಚಾಯತಿಯ ಬಗ್ಗೆ ತಮ್ಮ ಅನುಭವ ಹಂಚಿಕೊಂಡ ಮುಖ್ಯಮಂತ್ರಿಗಳು, ಜಮೀನುಗಳನ್ನು ಅತಿಕ್ರಮಣದ ಇಂತಹ ಸಮಸ್ಯೆಗಳನ್ನು ನಿವಾರಿಸಲು ಭೂಮಿ ಬೀಟ್ ಕಾರ್ಯಕ್ರಮ ಅನುಕೂಲ ಕಲ್ಪಿಸಿದೆ ಎಂದರು.

# ದೇಶದ್ರೋಹಿಗಳನ್ನು ಮಟ್ಟಹಾಕಲು ಸೊಗಡು ಶಿವಣ್ಣ ಆಗ್ರಹ

ತುಮಕೂರು

ಪಹಲ್ಗಾಮ್ ಹತ್ಯಾಕಾಂಡದ ನಂತರ ಭಾರತದಲ್ಲಿರುವ ಪಾಕಿಸ್ತಾನದ ಪ್ರಜೆಗಳನ್ನು ಪತ್ತೆ ಮಾಡಿ ಅವರ ದೇಶಕ್ಕೆ ವಾಪಸ್ ಕಳುಹಿಸಲು ಕೇಂದ್ರ ಸರ್ಕಾರ ಎಲ್ಲಾ ರಾಜ್ಯಗಳಿಗೂ ಸೂಚನೆ ನೀಡಿದೆ. ಜಿಲ್ಲೆಯಲ್ಲಿ ಪಾಕಿಸ್ತಾನಿ ಪ್ರಜೆಗಳ ಜೊತೆಗೆ ಬಾಂಗ್ಲಾದೇಶದ ಅಕ್ರಮ ವಲಸಿಗರನ್ನೂ ಪತ್ತೆ ಮಾಡಿ ಅವರ ದೇಶಕ್ಕೆ ಕಳುಹಿಸಬೇಕು ಎಂದು ಮಾಜಿ ಸಚಿವ ಸೊಗಡು ಶಿವಣ್ಣ ಜಿಲ್ಲಾಡಳಿತ ಹಾಗೂ ಪೊಲೀಸ್ ಇಲಾಖೆಗೆ ಒತ್ತಾಯಿಸಿದರು.

ಮಂಗಳವಾರ ನಗರದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಪೊಲೀಸ್ ಹಾಗೂ ಗುಪ್ತಚರ ಇಲಾಖೆಯವರು ಕಾರ್ಯಪ್ರವೃತ್ತರಾಗಿ ಜಿಲ್ಲೆಯಲ್ಲಿಯಲ್ಲಿರುವ ಪಾಕಿಸ್ತಾನಿ, ಬಾಂಗ್ಲಾ ಅಕ್ರಮ ನಿವಾಸಿಗಳು, ಭಯೋತ್ಪಾದಕರು, ಮಾದಕ



ಪದಾರ್ಥ ಮಾರಾಟ ಜಾಲದಲ್ಲಿ ಭಾಗಿಯಾದವರು, ಸಮಾಜ ದ್ರೋಹಿಗಳನ್ನು ಪತ್ತೆಹಚ್ಚಿ ಅವರ ವಿರುದ್ಧ ಕಾನೂನು ಕ್ರಮ ತೆಗೆದುಕೊಂಡು ಸಮಾಜದಲ್ಲಿ ಶಾಂತಿ, ಸುವ್ಯವಸ್ಥೆ ಕಾಪಾಡಬೇಕು. ಬಾಂಗ್ಲಾದಂತಹ ದೇಶಿಯವರು ಅಕ್ರಮವಾಗಿ ಬಂದು ಇಲ್ಲಿ ರೇಷನ್ ಕಾರ್ಡ್, ಆಧಾರ್ ಕಾರ್ಡ್ ಮಾಡಿಸಿಕೊಂಡಿದ್ದಾರೆ ಎಂಬ ಮಾತು ಕೇಳಿಬಂದಿವೆ. ಅಂತಹವರನ್ನೂ ಗುರುತಿಸಿ, ಅವರಿಗೆ ನೆರವಾದವರನ್ನೂ ಪತ್ತೆ ಮಾಡಿ ಶಿಕ್ಷೆಗೆ ಒಳಪಡಿಸಬೇಕು ಎಂದು ಹೇಳಿದರು.

ಪಹಲ್ಗಾಮ್‌ನಲ್ಲಿ ಪ್ರವಾಸಿ ಹಿಂದೂಗಳನ್ನು ಪಾಕಿಸ್ತಾನಿ ಪ್ರಾಯೋಜಿತ ಭಯೋತ್ಪಾದಕರು ಗುಂಡು ಹಾರಿಸಿ ಹತ್ಯೆ ಮಾಡಿದ್ದನ್ನು ಸಹಿಸಲಾಗುವುದಿಲ್ಲ. ಭಾರತದಲ್ಲಿ ಹಿಂದೂ, ಮುಸ್ಲೀಮರು ಭಾವೈಕ್ಯತೆಯಿಂದ ಬಾಳುತ್ತಿದ್ದಾರೆ. ಇವರ ನಡುವೆ ಶಾಂತಿ, ಭಾವೈಕ್ಯತೆಗೆ ಧಕ್ಕೆ ಮಾಡುವ ಸಲುವಾಗಿ ಭಯೋತ್ಪಾದಕರು ದಾಳಿ ಮಾಡುತ್ತಿದ್ದಾರೆ. ಭಯೋತ್ಪಾದನೆ ಮಟ್ಟ ಹಾಕಲು ಪ್ರಧಾನಿ ನರೇಂದ್ರ ಮೋದಿಯವರ ಸರ್ಕಾರ ಕಠಿಣ ಕ್ರಮಕ್ಕೆ ಮುಂದಾಗಿದೆ. ದೇಶದ ಹಿಂದೂ, ಮುಸ್ಲೀಂ ಸೇರಿದಂತೆ ಎಲ್ಲಾ ಜಾತಿ, ಧರ್ಮದವರೂ ಮೋದಿಯವರ ಕಾರ್ಯಕ್ಕೆ ಬೆಂಬಲ ನೀಡಬೇಕು. ದೇಶದ ಭದ್ರತೆ, ಸಾರ್ವಭೌಮತ್ವ ಕಾಪಾಡುವುದು ಪ್ರತಿಯೊಬ್ಬರ ಜವಾಬ್ದಾರಿ ಎಂದರು.

ಪಾಕಿಸ್ತಾನ ಹಾಗೂ ಬಾಂಗ್ಲಾದೇಶ ನಮ್ಮದೇ ದೇಶಗಳು. ದುರಾದೃಷ್ಟ ಬೇರೆ ರಾಷ್ಟ್ರಗಳಾಗಿವೆ. ಭಾರತ ಸರ್ಕಾರ ಈ ದೇಶಗಳನ್ನು ವಶಪಡಿಸಿಕೊಂಡು ಅಖಂಡ ಭಾರತ ನಿರ್ಮಾಣಕ್ಕೂ ಪ್ರಯತ್ನ ಮಾಡಬೇಕು ಎಂದು ಹೇಳಿದರು.

# ಬಿಜೆಪಿ ಮುಖವಾಡ ಕಳಚಿದೆ: ಸೌಮ್ಯರೆಡ್ಡಿ ಆಕ್ರೋಶ



ಬೆಂಗಳೂರು: ಹಿಂದೂ ವಿರೋಧಿ ಬಿಜೆಪಿ ಪಕ್ಷದ ಮುಖವಾಡ ಬಯಲಾಗಿದೆ ಎಂದು ಕೆಪಿಸಿಸಿ ಮಹಿಳಾ ಘಟಕದ ರಾಜ್ಯಾಧ್ಯಕ್ಷರಾದ ಸೌಮ್ಯರೆಡ್ಡಿ ಹೇಳಿದರು.

ಸಂಗೊಳ್ಳಿ ರಾಯಣ್ಣ ವೃತ್ತದಲ್ಲಿ ಕೇಂದ್ರ ರೈಲ್ವೆ ಇಲಾಖೆಯ ವಿಭಾಗೀಯ ರೈಲ್ವೆ ಅಧಿಕಾರಿಗಳನ್ನು ಕೆಪಿಸಿಸಿ ಮಹಿಳಾ ಘಟಕದ ರಾಜ್ಯಾಧ್ಯಕ್ಷರಾದ ಸೌಮ್ಯರೆಡ್ಡಿರವರು ಮಹಿಳಾ ಕಾರ್ಯಕರ್ತೆರ ಜೊತೆಯಲ್ಲಿ ತೆರಳಿದಾಗ ಮನವಿ ಸ್ವೀಕರಿಸಲು ಹಿಂದೇಟು ಮತ್ತು ಗೆಜೆಟೆಡ್ ಪ್ರತಿ ನೀಡಲು ತಿರಸ್ಕಾರ ಮಾಡಿರುವುದನ್ನು ಹಾಗೂ 35ಕ್ಕೂ ಹೆಚ್ಚು ಮಹಿಳೆಯರನ್ನು ವಿನಾಕರಣ ಬಂಧಿಸಿರುವುದನ್ನು ಖಂಡಿಸಿ ಪ್ರತಿಭಟಿಸಿ ಅವರು ಮಾತನಾಡಿದರು.

ಹಿಂದೂ ವಿರೋಧಿ ಬಿಜೆಪಿ ಸರ್ಕಾರ ಪಹಾಲ್ಗಾಮ್ ನಲ್ಲಿ ಮೃತಪಟ್ಟ 26 ಕುಟುಂಬಗಳಿಗೆ ಒಂದು ರೂಪಾಯಿ ಪರಿಹಾರ ಕೊಟ್ಟಿಲ್ಲ, 2500 ಕೋಟಿ ಬ್ಯಾಂಕ್ ಹಗರಣದಲ್ಲಿ 50ಕ್ಕೂ ಹೆಚ್ಚು ಹಿರಿಯ ನಾಗರಿಕರು ಬ್ಯಾಂಕ್ ಹಣ ಸಿಗದೇ ಕೊರಗಿ ಸತ್ತರು ಅದಕ್ಕೆ ಗಮನ ಹರಿಸಲಿಲ್ಲ. ಪಹಾಲ್ಗಾಮ್‌ನಲ್ಲಿ ಭದ್ರತಾ ವೈಫಲ್ಯವಾಗಿದೆ. ಇದೆಕ್ಕಲ್ಲ ಕೇಂದ್ರ ಸರ್ಕಾರ ಉತ್ತರಿಸಬೇಕು.

ನ್ಯಾಯ ಕೇಳಲು ಬರುವ ಮಹಿಳೆಯರ ಮೇಲೆ ಎ.ಸಿ.ಪಿ.ದಬ್ಬಾಳಿಕೆ ಮಾಡುತ್ತಿದ್ದಾರೆ. ಕೇಂದ್ರ ಬಿಜೆಪಿ ಸರ್ಕಾರದ ಅಣತಿಯಂತೆ ಅಧಿಕಾರಿಗಳು ವರ್ತನೆ ಮಾಡುತ್ತಿದ್ದಾರೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಎಂ.ಇ.ಐ.ಅಧ್ಯಕ್ಷ ಎಸ್.ಮನೋಹರ್, ಮಹಿಳಾ ಕಾಂಗ್ರೆಸ್, ಜಿಲ್ಲಾ ಕಾಂಗ್ರೆಸ್ ಪದಾಧಿಕಾರಿಗಳು ಭಾಗವಹಿಸಿದ್ದರು.



ಕೋಲಾರ ಜಿಲ್ಲೆಯ ವೈಕುಂಠಪುರಂ ಎಂದೇ ಖ್ಯಾತವಾದ ರೋಣೂರಿನಲ್ಲಿ ಅರ್ಜುನನಿಂದ ಪ್ರತಿಷ್ಠಾಪಿಸಲ್ಪಟ್ಟ ಲಕ್ಷ್ಮೀವೆಂಕಟರಮಣಸ್ವಾಮಿ ಬ್ರಹ್ಮ ರಥೋತ್ಸವದಲ್ಲಿ ಸವಿತಾ ಸಮಾಜದ ಬಂಧುಗಳಿಂದ ನಡೆಯುವ ಅದ್ದೂರಿ ಪುಷ್ಪವಿಮಾನೋತ್ಸವಕ್ಕೆ ಆಗಮಿಸಿದ್ದ ಶ್ರೀನಿವಾಸಪುರ ತಹಸೀಲ್ದಾರ್ ಸುಧೀಂದ್ರ ಅವರನ್ನು ದೇವಾಲಯ ಸಮಿತಿಯಿಂದ ಸನ್ಮಾನಿಸಲಾಯಿತು. ದೇವಾಲಯದ ಪ್ರಧಾನ ಅರ್ಚಕ ಮೋಹನ್ ಬಾಬು, ಸವಿತಾ ಸಮಾಜ ತಾಲ್ಲೂಕು ಅಧ್ಯಕ್ಷ ಶ್ರೀನಿವಾಸ್, ಮುಖಂಡರಾದ ರವಿಕುಮಾರ್, ಮುನಿರಾಜು ,ರೋಣೂರು ಗ್ರಾ.ಪಂ ಸದಸ್ಯೆ ರಾಧಮ್ಮ ನಟರಾಜ್, ರವಿ ಮತ್ತಿತರರಿದ್ದರು.

# ‘ಜೆಡಿಎಸ್ ಮುಖಂಡರನ್ನು ಉಚ್ಚಾಟನೆ ಮಾಡುವ ವಿಚಾರದಲ್ಲಿ ಜಿಲ್ಲಾಧ್ಯಕ್ಷರು ನನ್ನನ್ನು ಸಂಪರ್ಕಿಸಿಲ್ಲ’

ವಿಜಯಪುರ: ಜೆಡಿಎಸ್ ಪಕ್ಷವನ್ನು ಸಂಘಟಿಸಿ, ಬಲಪಡಿಸುವ ನಿಟ್ಟಿನಲ್ಲಿ, ಉಚ್ಚಾಟನೆಗೊಂಡಿರುವ ಮುಖಂಡರು ಹಾಗೂ ಪಕ್ಷದ ಜಿಲ್ಲಾಧ್ಯಕ್ಷರೊಂದಿಗೆ ಚರ್ಚೆ ನಡೆಸಿ, ಸೂಕ್ತ ತೀರ್ಮಾನ ಮಾಡುತ್ತೇವೆ ಎಂದು ಮಾಜಿ ಶಾಸಕ ನಿಸರ್ಗ ನಾರಾಯಣಸ್ವಾಮಿ ಹೇಳಿದರು.

ಪಟ್ಟಣದಲ್ಲಿ ಜೆಡಿಎಸ್ ಜಿಲ್ಲಾಧ್ಯಕ್ಷ ಬಿ.ಮುನೇಗೌಡ ಅವರು, 6 ಮಂದಿಯನ್ನು ಉಚ್ಚಾಟನೆ ಮಾಡಿರುವ ಕುರಿತು, ಸುದ್ದಿಗಾರರ ಪ್ರಶ್ನೆಗೆ ಉತ್ತರಿಸಿದ ಅವರು, ಜಿಲ್ಲಾಧ್ಯಕ್ಷ ಬಿ.ಮುನೇಗೌಡ ಹಾಗೂ ನನ್ನ ನಡುವೆ ತಂದೆ, ಮಗನ ಸಂಬಂಧವನ್ನು ಇಟ್ಟುಕೊಂಡಿದ್ದೇನೆ. ಒಗ್ಗಟ್ಟಿನಿಂದ ಪಕ್ಷ ಸಂಘಟನೆ ಮಾಡುತ್ತಿದ್ದೇವೆ. ಆದರೆ, ಜೆಡಿಎಸ್ ಮುಖಂಡರನ್ನು ಉಚ್ಚಾಟನೆ ಮಾಡುವ ಕುರಿತು ನನ್ನೊಂದಿಗೆ ಚರ್ಚೆ ನಡೆಸಬೇಕಾಗಿತ್ತು. ಆದರೆ, ನಾನು ಊರಲ್ಲಿ ಇಲ್ಲದ ಕಾರಣ, ಚರ್ಚೆ ನಡೆಸದೆ ತೀರ್ಮಾನ ತೆಗೆದುಕೊಂಡಿದ್ದಾರೆ.

ಯಾವ ಸಂದರ್ಭದಲ್ಲಿ ಇಂತಹ ತೀರ್ಮಾನ ತೆಗೆದುಕೊಳ್ಳಬೇಕಾಯಿತು ಎನ್ನುವ ಕುರಿತು ಜಿಲ್ಲಾಧ್ಯಕ್ಷರೊಂದಿಗೆ ಚರ್ಚೆ ನಡೆಸುತ್ತೇನೆ. ಎರಡೂ ಬಣಗಳನ್ನು ಒಂದುಗೂಡಿಸಿ, ಮುಂದಿನ ದಿನಗಳಲ್ಲಿ ಪಕ್ಷವನ್ನು ಮತ್ತಷ್ಟು ಸದೃಢವಾಗಿ ಕಟ್ಟುವ ಕೆಲಸ ಮಾಡುತ್ತೇವೆ ಎಂದರು.

ಪುರಸಭೆಯಲ್ಲಿ ಜೆಡಿಎಸ್‌ಗೆ ಸ್ಪಷ್ಟ ಬಹುಮತವಿದ್ದರೂ ಸದಸ್ಯರು ಕಾಂಗ್ರೆಸ್ ಅಭ್ಯರ್ಥಿಗೆ ಬೆಂಬಲ ನೀಡಿರುವ ಕುರಿತು, ಕೇಳಿದ ಪ್ರಶ್ನೆಗೆ ಉತ್ತರಿಸಿದ ಅವರು, ಯಾವುದೇ ಪಕ್ಷದ ಮುಖಂಡರಿರಲಿ ತಮ್ಮ ಪಕ್ಷದ ಸದಸ್ಯರು ಬೇರೆ ಪಕ್ಷಕ್ಕೆ ಬೆಂಬಲ ನೀಡಿದಾಗ ಬೇಸರವಾಗುವುದು ಸಹಜ. ನಮ್ಮ ಪಕ್ಷದಲ್ಲಿನ ಗೊಂದಲಗಳನ್ನು ಪರಿಹರಿಸಲು ಅವಕಾಶವಿತ್ತು. ಆದರೆ, ಈಗ ಕೈ ಮೀರಿ ಹೋಗಿದೆ. ಮುಂದಿನ ದಿನಗಳಲ್ಲಿ ಎಲ್ಲಾ ಸಮಸ್ಯೆಗಳು, ವೈಮನಸ್ಸುಗಳನ್ನು ಸರಿಪಡಿಸಿಕೊಂಡು ಹೋಗುತ್ತೇವೆ ಎಂದರು.

ರಾಜಕೀಯ ಗಾಳಿ, ಗಂಧ ಗೊತ್ತಿಲ್ಲದ ನಾನು, ಸಮಾಜ ಸೇವೆಗಾಗಿ ದೇವನಹಳ್ಳಿಗೆ ಬಂದ ನಂತರ, ಯಾವುದೇ ರಾಜಕೀಯ ಪಕ್ಷದಲ್ಲೂ ಗುರ್ತಿಸಿಕೊಂಡಿರಲಿಲ್ಲ. ಜನರ ಒತ್ತಾಯದಿಂದ ಜೆಡಿಎಸ್ ಪಕ್ಷಕ್ಕೆ ಸೇರ್ಪಡೆಗೊಂಡ ನಂತರ, 2018 ರಿಂದ 2023 ರವರೆಗೂ ನನ್ನನ್ನು ಶಾಸಕನನ್ನಾಗಿ ಮಾಡಿದ ಜನತೆಯ ಆಶೋತ್ತರಗಳಿಗೆ ಸ್ಪಂದಿಸಿದ್ದೇನೆ ಎಂದರು.

# ‘ವಿದ್ಯೆ ಸಾಧಕನ ಸ್ವತ್ತೇ ಹೊರತು ಸೋಮಾರಿಯ ಸ್ವತ್ತಲ್ಲ’

ತುಮಕೂರು: ವಿದ್ಯೆ ಸಾಧಕನ ಸ್ವತ್ತೇ ಹೊರತು ಸೋಮಾರಿಗಳ ಸ್ವತ್ತಲ್ಲ. ಅಂತಹ ಪವಿತ್ರವಾದ ವಿದ್ಯೆಯನ್ನು ಕಲಿತು ತಮ್ಮ ಬದುಕಿನ ಜೊತೆಗೆ ತಮ್ಮ ಕುಟುಂಬದ ಏಳಿಗೆಯನ್ನು ಯಾವ ವಿದ್ಯಾರ್ಥಿ ಸಾಧಿಸುತ್ತಾನೋ ಅಂದು ಕಲಿತ ವಿದ್ಯೆಗೆ ಸಾರ್ಥಕತೆ ಬರುತ್ತದೆ ಎಂದು ಹಿರಿಯ ಶಿಕ್ಷಕ ಬಿ.ಎನ್.ವೀರಣ್ಣ ತಿಳಿಸಿದರು.

ಅವರು ಚಿಕ್ಕತೊಟ್ಲುಕೆರೆ ಅಟವಿ ಜಂಗಮ ಕ್ಷೇತ್ರದಲ್ಲಿ ಶ್ರೀ ಅಟವಿ ಸಿದ್ದಲಿಂಗೇಶ್ವರ ಪ್ರೌಢಶಾಲೆಯ 1999ನೇ ಸಾಲಿನ ವಿದ್ಯಾರ್ಥಿಗಳು ಏರ್ಪಡಿಸಿದ್ದ ಗುರುವಂದನಾ ಕಾರ್ಯಕ್ರಮದಲ್ಲಿ ಗುರುವಂದನೆ ಸ್ವೀಕರಿಸಿ ತಮ್ಮ ಹಳೆಯ ವಿದ್ಯಾರ್ಥಿಗಳನ್ನು ಮಾತನಾಡಿದರು.

ವಿದ್ಯೆ ಕಲಿತ ವಿದ್ಯಾರ್ಥಿಗಳು 29 ವರ್ಷಗಳ ನಂತರ ನಮ್ಮನ್ನ ಗುರುತಿಸಿ ಗೌರವಿಸಿರುವುದು ಸಂತಸ ತಂದಿದೆ .ವಿದ್ಯಾರ್ಥಿಗಳು ನಮ್ಮ ಮತ್ತು ಶಿಕ್ಷಕರ ಸಂಬಂಧ ಅವಿನಾಭಾವವಾಗಿದೆ ಎಂದರು.

ಹಿರಿಯ ಶಿಕ್ಷಕರಾದ ಕೃಷ್ಣಮೂರ್ತಿ ಮಾತನಾಡಿ, ಪ್ರಾಥಮಿಕ ಹಂತವಾಗಲಿ, ಪ್ರೌಢ ಶಿಕ್ಷಣದ ಹಂತವಾಗಲಿ ಮುಗಿದ ನಂತರ ಶಿಕ್ಷಕರು ತಮ್ಮ ಕರ್ತವ್ಯ ಮುಗಿಯಿತು ,ವಿದ್ಯಾರ್ಥಿಗಳು ನಮ್ಮ ಶಿಕ್ಷಣದ ಒಂದು ಹಂತ ಮುಗಿಯಿತು ಎಂದು ಶಾಲೆಯ ಕಡೆ ತಿರುಗಿಯೂ ನೋಡದಿರುವಂತಹ ಸಂದರ್ಭ ಇರುವಾಗ 1999ನೇ ಸಾಲಿನ ವಿದ್ಯಾರ್ಥಿಗಳು 30 ವರ್ಷಗಳ ನಂತರವೂ ನಮ್ಮನ್ನು ಗುರುತಿಸಿ ಗುರುವಂದನಾ ಕಾರ್ಯಕ್ರಮ ಏರ್ಪಡಿಸಿ ಎಲ್ಲಾ ಶಿಕ್ಷಕರನ್ನು ಒಂದುಗೂಡಿಸಿ ಗೌರವ ಸಲ್ಲಿಸಿರುವುದು ನಮ್ಮ ಬದುಕಿನ ಪುಟಗಳಲ್ಲಿ ಉಳಿಯುತ್ತವೆ ಎಂದರು.

ಹಿರಿಯ ಶಿಕ್ಷಕರಾದ ನಾಗರಾಜು ಮಾತನಾಡಿ, ನಮ್ಮ ಸ್ನೇಹಿತರುಗಳ ಮಕ್ಕಳೇ ನನಗೆ ವಿದ್ಯಾರ್ಥಿಗಳಾಗಿದ್ದರು, ಅವರಿಗೆ ಉತ್ತಮ ಶಿಕ್ಷಣ ಕೊಡುವ ಜವಾಬ್ದಾರಿ ನಮ್ಮದಾಗಿತ್ತು.



ಅಂತಹ ಸಂದರ್ಭದಲ್ಲಿ ಅವರಿಗೆ ಪೆಟ್ಟು ಕೊಟ್ಟು ವಿದ್ಯೆ ಕಲಿಸು ತ್ತಿದ್ದೆವು. ಇಂದು ನಮ್ಮ ವಿದ್ಯಾರ್ಥಿಗಳು ಉತ್ತಮ ವ್ಯಕ್ತಿಗಳಾಗಿ ರೂಪಗೊಂಡು ಉತ್ತಮ ಮಾನವೀಯ ಮೌಲ್ಯಗಳನ್ನು ಕಲಿತು ನಮ್ಮನ್ನೆಲ್ಲಾ ಗುರುತಿಸಿ ಗೌರವ ಸಲ್ಲಿಸುತ್ತಿರುವುದು ಶ್ಲಾಘನೀಯ ಎಂದರು.

ಅಟವಿ ಸಿದ್ದಲಿಂಗೇಶ್ವರ ಪ್ರೌಢಶಾಲೆಯ ಪ್ರಾಂಶುಪಾಲರಾದ ನಿಜಲಿಂಗಯ್ಯ ಮಾತನಾಡಿ, ಅಂದು ನಾವು ನಿಮಗೆ ಶಿಕ್ಷೆ ಕೊಟ್ಟು ಶಿಕ್ಷಣ ಕಲಿಸುತ್ತಿದ್ದೆವು. ಇಂದಿನ ಶೈಕ್ಷಣಿಕ ಬದುಕಿನಲ್ಲಿ ಪೋಷಕರೇ ಬಂದು ಮಕ್ಕಳಿಗೆ ಶಿಕ್ಷೆ ನೀಡಬೇಡಿ ಮಕ್ಕಳು ಓದಿದಷ್ಟು ಓದಲಿ ಎಂದು ಶಿಕ್ಷಕರಿಗೇ ಹೇಳುತ್ತಾರೆ. ಅಂತಹ ಸಂದರ್ಭದಲ್ಲಿ ನಮಗೆ ನಮ್ಮ ಹಳೆಯ ವಿದ್ಯಾರ್ಥಿಗಳು ನೆನಪಾಗುತ್ತಾರೆ. ನಿಮಗೆಷ್ಟೇ ಶಿಕ್ಷಿಸಿದರೂ ತಮ್ಮ ಜ್ಞಾನಾ ರ್ಜನೆಗೆ ಎಂದು ನೀವು ಭಾವಿಸುತ್ತಿದ್ದಿರಿ ನಿಮ್ಮಂತಹ ವಿದ್ಯಾರ್ಥಿಗಳು ಇಂದಿಲ್ಲ. ಇಂದು ಕಾಲ ಬದಲಾಗಿದೆ ಎಂದು ವಿಷಾಧ ವ್ಯಕ್ತಪಡಿಸಿದರು.

ಹಿರಿಯ ಶಿಕ್ಷಕರಾದ ಎಸ್.ಸಿದ್ದಪ್ಪ ಮಾತನಾಡಿ, ನೆಮ್ಮದಿಯ ಸಮಾಜ ನಿರ್ಮಾಣಕ್ಕೆ ಶಿಕ್ಷಣ ಅತ್ಯಗತ್ಯ. ಯಾರು ಶಿಕ್ಷಣದ ಮಹತ್ವವನ್ನ ಅರಿಯುತ್ತಾರೋ ಅವರ ಬದುಕು ಹಸನಾಗುತ್ತದೆ. ಇಂದು ಸಮಾಜ ಎತ್ತ ಸಾಗುತ್ತಿದೆ. ಇಂದು ಶಿಕ್ಷಣ ಆಧುನಿಕತೆಯ ಕೈಯಲ್ಲಿ ಸಿಕ್ಕಿ ನಲುಗುತ್ತಿದೆ. ಅಂದಿನಂತೆ ಇದು ಇಲ್ಲ. ಯಾವ ನಗರದಲ್ಲಿ ನೋಡಿದರೂ ಖಾಸಗಿ ಶಿಕ್ಷಣ ಸಂಸ್ಥೆಗಳು ನಾಯಿಕೊಡೆಗಳಂತೆ ತಲೆಯೆತ್ತಿವೆ. ಮಾನವೀಯ ಮೌಲ್ಯಗಳು ಕಡಿಮೆಯಾಗುತ್ತಿವೆ. ಆಧುನಿಕತೆ ಆವರಿಸಿದೆ, ಶಿಕ್ಷಣದ ಶೈಲಿಯೇ ಬದಲಾಗಿದೆ ಎಂದು ಆತಂಕ ವ್ಯಕ್ತಪಡಿಸಿದರು.

ವೇದಿಕೆಯಲ್ಲಿ ಹಿರಿಯ ಶಿಕ್ಷಕರುಗಳಾದ ಗುರುಲಿಂಗಯ್ಯ, ತೋಂಟಾರಾಧ್ಯ,ಸಿ. ಎನ್. ನರಸಿಂಹಮೂರ್ತಿ, ಟಿ.ಎಸ್.ಶಿವಕುಮಾರ್, ನಾಗರತ್ನಮ್ಮ, ಪುಷ್ಪವತಿ, ನರಸಯ್ಯ, ಸೋಮಣ್ಣ, ಮುಂತಾದವರು ಉಪಸ್ಥಿತರಿದ್ದರು. 1999ನೇ ಸಾಲಿನ ಎಲ್ಲಾ ವಿದ್ಯಾರ್ಥಿಗಳು ಭಾಗವಹಿಸಿ ತಮ್ಮ ಮತ್ತು ಗುರುಗಳ ನಡುವಿನ ಬಾಂಧವ್ಯದ ಸಿಹಿ ನೆನಪುಗಳನ್ನು ಸ್ಮರಿಸಿದರು. ಹಳೇ ವಿದ್ಯಾರ್ಥಿಗಳಾದ ಗೀತಾ ಪ್ರಾರ್ಥಿಸಿದರು. ಚೇತನ್ ಸ್ವಾಗತಿಸಿದರು. ವಿಜಯಶಂಕರ್ ಕಾರ್ಯಕ್ರಮ ನಿರೂಪಿಸಿದರು.

# ಸೀನಿಯರ್ ಛೇಂಬರ್ ನೂತನ ಅಧ್ಯಕ್ಷರಾಗಿ ಅಧಿಕಾರ ಸ್ವೀಕಾರ

ವಿಜಯಪುರ: ಪಟ್ಟಣದ ಸುಬ್ಬಮ್ಮ ಚನ್ನಪ್ಪ ಸಮುದಾಯ ಭವನದಲ್ಲಿ, ಸೋಮವಾರ ಸೀನಿಯರ್ ಛೇಂಬರ್ ಇಂಟರ್ ನ್ಯಾಷನಲ್ ವಿಜಯಪುರ ಲೀಜನ್ ನ 2025–26 ನೇ ಸಾಲಿನ ನೂತನ ಪದಾಧಿಕಾರಿಗಳ ಪದವಿ ಸ್ವೀಕಾರ ಸಮಾರಂಭ ನಡೆಯಿತು.

ಸಮಾರಂಭವನ್ನು ಸೀನಿಯರ್ ಛೇಂಬರ್ ಇಂಟರ್ ನ್ಯಾಷನಲ್ ರಾಷ್ಟ್ರೀಯ ಅಧ್ಯಕ್ಷ ಸೀನಿಯರ್ ಪಿಪಿಎಫ್ ಎಂ.ಆರ್.ಜಯೇಶ್ ಅವರು, ಉದ್ಘಾಟನೆ ಮಾಡಿದರು.

ಸೀನಿಯರ್ ಛೇಂಬರ್ ಇಂಟರ್ ನ್ಯಾಷನಲ್ ವಿಜಯಪುರ ಲೀಜನ್ ನ 2024–25 ನೇ ಸಾಲಿನ ಅಧ್ಯಕ್ಷ ಹಾಗೂ ರಾಷ್ಟ್ರೀಯ ಸಂಯೋಜಕ ದಿನ್ನೂರು ವೆಂಕಟೇಶ್ ಅವರು, ನೂತನ ಅಧ್ಯಕ್ಷ ಸೀನಿಯರ್ ಅನೀಸ್ ಉರ್ ರೆಹಮಾನ್ ಅವರಿಗೆ ಪ್ರಮಾಣ ವಚನ ಬೋಧಿಸಿದರು.

ಸಮಾರಂಭವನ್ನು ಉದ್ದೇಶಿಸಿ ರಾಷ್ಟ್ರೀಯ ಅಧ್ಯಕ್ಷ ಸೀನಿಯರ್ ಪಿಪಿಎಫ್ ಎಂ.ಆರ್. ಜಯೇಶ್ ಅವರು ಮಾತನಾಡಿ, ಸೀನಿಯರ್ ಛೇಂಬರ್ ಸಂಸ್ಥೆಯು ಹಲವಾರು ಸಮಾಜಮುಖಿಯಾದ ಕಾರ್ಯಕ್ರಮಗಳ ಮೂಲಕ ಎಲ್ಲರ ಗಮನ ಸೆಳೆದಿದೆ. ನಮ್ಮ ಸೇವಾ ಕ್ಷೇತ್ರವನ್ನು ಮತ್ತಷ್ಟು ವಿಸ್ತಾರಗೊಳಿಸುವುದರ ಜೊತೆಗೆ, ಜನರಿಗೆ ಸೇವೆಯ ಜೊತೆಗೆ ಜಾಗೃತಿ ಮೂಡಿಸುವಂತಹ ಕಾರ್ಯಕ್ರಮಗಳನ್ನು ಕೈಗೊಳ್ಳಬೇಕಾಗುತ್ತದೆ. ಇತ್ತೀಚೆಗೆ ಹೆಚ್ಚಾಗುತ್ತಿರುವ ಸೈಬರ್ ಅಪರಾಧಗಳ ಕುರಿತು, ಅರಿವು ಮೂಡಿಸುವಂತಹ ಕಾರ್ಯಕ್ರಮಗಳಾಗಬೇಕು, ಯುವಕರು ಮಾದಕ ವ್ಯಸನಿಗಳಾಗದಂತೆ ಜಾಗ್ರತೆ ವಹಿಸುವ ಕುರಿತು ಅರಿವು ಮೂಡಿಸಬೇಕಿದೆ. ಅಪಘಾತಗಳ ಸಂಖ್ಯೆಯನ್ನು ಕಡಿಮೆ ಮಾಡುವುದು ಕೂಡಾ ನಮ್ಮ ಹೊಣೆಗಾರಿಕೆಯಾಗಿದೆ. ರಸ್ತೆ ಸುರಕ್ಷತಾ ಸಪ್ತಾಹ ಕಾರ್ಯಕ್ರಮಗಳು ಆಯೋಜನೆ ಮಾಡಬೇಕು. ಕ್ಯಾನ್ಸರ್ ರೋಗದ ವಿರುದ್ಧ ಹೋರಾಡಬೇಕಿದೆ ಎಂದರು.

ಸೀನಿಯರ್ ದಿನ್ನೂರು ವೆಂಕಟೇಶ್ ಮಾತನಾಡಿ, ಒಂದು ವರ್ಷದಲ್ಲಿ ಎಲ್ಲಾ ಕ್ಷೇತ್ರಗಳಲ್ಲಿ ಸಮಾಜಮುಖಿಯಾದ ಕಾರ್ಯಕ್ರಮಗಳನ್ನು ಮಾಡಿದೆವು. ಸುಮಾರು 120 ಕ್ಕೂ ಹೆಚ್ಚು ಕಾರ್ಯಕ್ರಮಗಳು ಮಾಡಿದ್ದೇವೆ. ಸಮಾಜದಲ್ಲಿ ಯಾವುದೇ ಕೆಲಸ ಮಾಡಬೇಕಾದರೂ ಕುಟುಂಬದಿಂದಲೇ ಪ್ರೋತ್ಸಾಹ ಆರಂಭವಾಗಬೇಕು. ಸಮಾಜವು ಕೈ ಜೋಡಿಸಿದಾಗ ಯಶಸ್ವಿಯಾಗುತ್ತೇವೆ. ರಾಷ್ಟ್ರೀಯ ಹಂತದಲ್ಲಿ ಮತ್ತು ರಾಜ್ಯ ಹಂತದಲ್ಲಿ ಬಂದಿರುವ ಪ್ರಶಸ್ತಿಗಳು, ಇದಕ್ಕೆ ಉತ್ತಮವಾದ ಉದಾಹರಣೆಗಳಾಗಿವೆ. ಮುಂದಿನ ದಿನಗಳಲ್ಲಿ ಮತ್ತಷ್ಟು ಸಮಾಜ ಸೇವಾ ಕಾರ್ಯಗಳಲ್ಲಿ ತೊಡಗಿಸಿಕೊಳ್ಳಲಾಗುತ್ತದೆ ಎಂದರು.

ಮಾಜಿ ಶಾಸಕ ನಿಸರ್ಗ ನಾರಾಯಣಸ್ವಾಮಿ ಮಾತನಾಡಿ, ಸೀನಿಯರ್ ಛೇಂಬರ್ ಹಾಗೂ ಜೂನಿಯರ್ ಛೇಂಬರ್ ಗಳಂತಹ ಸಂಸ್ಥೆಗಳ ಸೇವಾ ಕಾರ್ಯಗಳು ಶ್ಲಾಘನೀಯವಾಗಿವೆ. ಇಂತಹ ಸಂಸ್ಥೆಗಳನ್ನು ಪ್ರೋತ್ಸಾಹಿಸುವಂತಹ ಕೆಲಸವನ್ನು ನಾವೆಲ್ಲರೂ ಮಾಡಬೇಕಿದೆ. ಮೂಲಸೌಕರ್ಯಗಳ ಜೊತೆಗೆ, ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡಬೇಕು ಎಂದರು.

ನೂತನ ಅಧ್ಯಕ್ಷ ಅನಿಸ್ ಉರ್ ರೆಹಮಾನ್ ಅವರು ಮಾತನಾಡಿ, ಸಮಾಜಸೇವೆಯಲ್ಲಿ ಮನಸ್ಸಿಗೆ ನೆಮ್ಮದಿ ದೊರೆಯುತ್ತಿದೆ. ಸೇವಾ ಮನೋಭಾವನೆಯನ್ನು ಇಟ್ಟುಕೊಂಡು ಕೆಲಸ ಮಾಡುವಾಗ, ಸಂಘಟಿತರಾಗಿ ಕೆಲಸ ಮಾಡುವುದಕ್ಕೆ ಇಷ್ಟಪಡುತ್ತೇವೆ ಎಂದರು.

# ಶೇ.5 ಆಸ್ತಿ ತೆರಿಗೆ ರಿಯಾಯಿತಿ ಅವಧಿ ವಿಸ್ತರಣೆ

ಬೆಂಗಳೂರು: ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ 2025–26 ನೇ ಸಾಲಿನ ಆಸ್ತಿ ತೆರಿಗೆಯನ್ನು ಪೂರ್ಣ ಪ್ರಮಾಣದಲ್ಲಿ ದಿನಾಂಕ: 30–04–2025 ರ ಒಳಗಾಗಿ ಪಾವತಿಸುವ ಎಲ್ಲಾ ತೆರಿಗೆದಾರರಿಗೆ ಆಸ್ತಿತೆರಿಗೆಯ ಮೇಲೆ ಶೇ.5% ರಷ್ಟು ರಿಯಾಯಿತಿ ನೀಡಲಾಗಿರುತ್ತದೆ.

ಬಿಬಿಎಂಪಿ ಕಾಯ್ದೆ 2020ರ ಪ್ರಕರಣ 144 (8) ರಲ್ಲಿ ಸರ್ಕಾರವು ಪಾಲಿಕೆಯ ಶಿಫಾರಸ್ಸಿನ ಮೇರೆಗೆ ಅಧಿಸೂಚನೆ ಮೂಲಕ ಯಾವುದೇ ಹಣಕಾಸು ವರ್ಷಗಳಿಗೆ ರಿಯಾಯಿತಿ ಅವಧಿಯನ್ನು ವಿಸ್ತರಿಸಬಹುದೆಂದು ಉಲ್ಲೇಖಿಸಲಾಗಿರುತ್ತದೆ. ಆದುದರಿಂದ 2025–26 ನೇ ಸಾಲಿನ ಆಸ್ತಿತೆರಿಗೆ ಶೇ. 5 % ರಷ್ಟು ರಿಯಾಯಿತಿ ಅವಧಿಯನ್ನು ದಿನಾಂಕ: 31–05–2025 ರವರೆಗೆ ವಿಸ್ತರಿಸಿ, 2025–26 ನೇ ಸಾಲಿನ ಆಸ್ತಿತೆರಿಗೆಯನ್ನು ಪೂರ್ಣ ಪ್ರಮಾಣದಲ್ಲಿ ದಿನಾಂಕ: 31–05–2025 ರ ಒಳಗಾಗಿ ಪಾವತಿಸುವ ಎಲ್ಲಾ ತೆರಿಗೆದಾರರಿಗೆ ಆಸ್ತಿತೆರಿಗೆಯ ಮೇಲೆ ಶೇ.5ರಷ್ಟು ರಿಯಾಯಿತಿ ನೀಡುವ ಸಂಬಂಧ ಮಾನ್ಯ ಆಡಳಿತಗಾರರ ನಡವಳಿಗಳಿಗೆ ಸರ್ಕಾರದ ಆದೇಶ ಕೋರಿ ಪ್ರಸ್ತಾವನೆ ಮಂಡಿಸಲಾಗಿತ್ತು. ಸದರಿ ಪ್ರಸ್ತಾವನೆಗೆ ಸರ್ಕಾರದಿಂದ ಆದೇಶ ನೀಡಿ ಅಧಿಸೂಚನೆ ಹೊರಡಿಸಲಾಗಿರುತ್ತದೆ.

ಸರ್ಕಾರದ ನಗರಭಿವೃದ್ಧಿ ಇಲಾಖೆಯ ಆದೇಶದ ಅನ್ವಯ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ 2025–26 ನೇ ಸಾಲಿನ ಆಸ್ತಿತೆರಿಗೆ ರಿಯಾಯಿತಿ ಅವಧಿಯನ್ನು ವಿಸ್ತರಿಸಿ, 2025–26 ನೇ ಸಾಲಿನ ಆಸ್ತಿತೆರಿಗೆಯನ್ನು ಪೂರ್ಣ ಪ್ರಮಾಣದಲ್ಲಿ ದಿನಾಂಕ:31–05–2025 ರ ಒಳಗಾಗಿ ಪಾವತಿಸುವ ಎಲ್ಲಾ ತೆರಿಗೆದಾರರಿಗೆ ಆಸ್ತಿತೆರಿಗೆಯ ಮೇಲೆ ಶೇ.5 ರಷ್ಟು ರಿಯಾಯಿತಿ ನೀಡಲಾಗಿದೆ.

# 1ನೇ ಸುತ್ತಿನ ಸವಾಲು ಸ್ವೀಕಾರ

ಬೆಂಗಳೂರು : ಇದೆಮಿಟ್ಸು ಹೋಂಡಾ ರೇಸಿಂಗ್ ಇಂಡಿಯಾ ತಂಡದ ಸವಾರರು ಥೈಲ್ಯಾಂಡ್‌ನ ಬುರಿರಾಮ್‌ನಲ್ಲಿ ಪ್ರಸಿದ್ಧ ಚಾಂಗ್ ಇಂಟರ್ನ್ಯಾಷನಲ್ ಸರ್ಕೀಟ್ ನಲ್ಲಿ ನಡೆದ 2025ರ ಎಫ್.ಐ.ಎಂ. ಏಷ್ಯಾ ರೋಡ್ ರೇಸಿಂಗ್ ಚಾಂಪಿಯನ್‌ಶಿಪ್‌ನ 1ನೇ ಸುತ್ತಿನ ಸವಾಲನ್ನು ಸ್ವೀಕರಿಸಿದರು. ಸುತ್ತು 1ರ ಮುಕ್ತಾಯಗೊಂದಿತು. ಜೊತೆಗೆ, ತೀವ್ರವಾದ ಮತ್ತು ಆಕ್ಷನ್–ಪ್ಯಾಕ್ಡ್ ವಾರಾಂತ್ಯವನ್ನು ಸಹ ಒದಗಿಸಿತು. ತೀವ್ರ ಸ್ಪರ್ಧಾತ್ಮಕ ಏಷ್ಯಾ ಪ್ರೊಡಕ್ಷನ್ 250ಸಿಸಿ (ಂಕ250) ವರ್ಗದಲ್ಲಿ ಭಾರತೀಯ ಜೋಡಿ ಕವಿನ್ ಕ್ವಿಂಟಾಲ್ ಮತ್ತು ಜೋಹಾನ್ ರೀವ್ಸ್ ಇಂದಿನ ಓಟವನ್ನು ದೃಢಸಂಕಲ್ಪದೊಂದಿಗೆ ಮತ್ತು ಸ್ಥಿರತೆಯಿಂದ ಪೂರ್ಣಗೊಳಿಸಿದರು. 19 ವರ್ಷದ ರೈಡರ್ ಕವಿನ್ ಕ್ವಿಂಟಾಲ್ ರೇಸ್ 1 ರ 10–ಲ್ಯಾಪ್‌ಗಳ ಓಟವನ್ನು 23 ನೇ ಗ್ರಿಡ್ ಸ್ಥಾನದಿಂದ ಪ್ರಾರಂಭಿಸಿ ಒಟ್ಟಾರೆ 19:06.659 ಸಮಯದೊಂದಿಗೆ 19 ನೇ ಸ್ಥಾನದಲ್ಲಿ ಮುಗಿಸಿದರು. ರೇಸ್ 2 ರಲ್ಲಿ, ಕವಿನ್ ಅವರು ಬಲವಾಗಿ ಹೋರಾಡಿ ಕಠಿಣ ಸ್ಪರ್ಧೆಯ ಹೊರತಾಗಿಯೂ, ಚೈತನ್ಯಶೀಲತೆ ಮತ್ತು ಕಾರ್ಯತಂತ್ರದ ರೇಸ್ ಕೌಶಲ್ಯವನ್ನು ಪ್ರದರ್ಶಿಸಿ ತಮ್ಮ ಸ್ಥಾನವನ್ನು ಉಳಿಸಿಕೊಳ್ಳುವಲ್ಲಿ ಯಶಸ್ವಿಯಾದರು.

# ದ್ವಿಚಕ್ರ ವಾಹನಗಳ ಹರಾಜು

ತುಮಕೂರು: ನಗರ ಪೊಲೀಸ್ ಠಾಣೆ ಆವರಣದಲ್ಲಿ ಮಾಲೀಕರು ಪತ್ತೆಯಾಗದ 7 ದ್ವಿಚಕ್ರ ವಾಹನಗಳನ್ನು ಮೇ 6ರಂದು ಬೆಳಿಗ್ಗೆ 10.30 ಗಂಟೆಗೆ ಸಾರ್ವಜನಿಕವಾಗಿ ಬಹಿರಂಗ ಹರಾಜು ಮಾಡಲಾಗುವುದು.

ಹರಾಜನ್ನು ತುಮಕೂರು ಉಪವಿಭಾಗದ ಪೊಲೀಸ್ ಉಪಾಧೀಕ್ಷಕರ ಸಮಕ್ಷಮದಲ್ಲಿ ನಡೆಸಲಾಗುತ್ತಿದ್ದು, ಆಸಕ್ತರು ಭಾಗವಹಿಸಬಹುದಾಗಿದೆ ಎಂದು ಪೊಲೀಸ್ ಇನ್ಸ್‌ಪೆಕ್ಟರ್ ತಿಳಿಸಿದ್ದಾರೆ.

# ಕರ್ತವ್ಯನಿರತ ಹೆಡ್ ಕಾನ್ಸ್ಟೇಬಲ್ ಹೃದಯಾಘಾತಕ್ಕೆ ಬಲಿ

ರಾಯಚೂರು: ಇತ್ತೀಚಿನ ದಿನಗಳಲ್ಲಿ ಹೃದಯಾಘಾತ ಪ್ರಕರಣಗಳು ದಿನೇ ದಿನೇ ಯಾವುದೇ ವಯಸ್ಸಿನ ಮಿತಿಯಿಲ್ಲದೇ ಹೆಚ್ಚಾಗುತ್ತಲೇ ಇವೆ. ಹಲವಾರು ಪ್ರಕರಣಗಳಲ್ಲಿ ಬಸ್ ಕಂಡಕ್ಟರ್, ಡ್ರೈವರ್, ಇತರ ಅಧಿಕಾರಿಗಳು, ಜಿಮ್ ನಲ್ಲಿ ವ್ಯಾಯಾಮ ಮಾಡುವ ಯುವಕರು, ಮದುವೆ ಮನೆಯಲ್ಲಿ ವರ–ವಧು ಈ ಹಠಾತ್ ಹೃದಯಾಘಾತಕ್ಕೆ ಬಲಿಯಾಗಿದ್ದಾರೆ.

ಇದೀಗ ಚಾಮರಾಜನಗರ ಜಿಲ್ಲೆಯಲ್ಲಿ ಕರ್ತವ್ಯದಲ್ಲಿದ್ದ ಪೊಲೀಸ್ ಕಾನ್‌ಸ್ಟೆಬಲ್ ಹೃದಯಾಘಾತದಿಂದ ಸಾವನ್ನಪ್ಪಿದ ಘಟನೆ ನಡೆದಿದೆ.

ಮೃತ ವ್ಯಕ್ತಿಯನ್ನು ರಾಯಚೂರು ಜಿಲ್ಲೆಯ ಲಿಂಗಸುಗೂರು ತಾಲ್ಲೂಕಿನ ಅಲಬಾವಿ ಗ್ರಾಮದ ಪರಶುರಾಮ್ (31) ಎಂದು ಗುರುತಿಸಲಾಗಿದೆ. ಪರಶುರಾಮ್ ಕಳೆದ ಮೂರು ವರ್ಷಗಳಿಂದ ಹನೂರು ತಾಲೂಕಿನ ರಾಂಪುರ ಪೊಲೀಸ್ ಠಾಣೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದರು.ಎಸ್.ಬಿ ಕಳೆದ ಮೂರು ತಿಂಗಳಿನಿಂದ ಕರ್ತವ್ಯದಲ್ಲಿದ್ದರು ಎನ್ನಲಾಗಿದೆ.

ಬೆಳಿಗ್ಗೆ ಕರ್ತವ್ಯದಲ್ಲಿದ್ದಾಗ ಅವರಿಗೆ ಹೃದಯಾಘಾತವಾಗಿದೆ. ಸಹೋದ್ಯೋಗಿಗಳು ತಕ್ಷಣ ಅವರನ್ನು ರಾಂಪುರ ಆಸ್ಪತ್ರೆಗೆ ಕರೆದೊಯ್ದಿದ್ದಾರೆ. ವೈದ್ಯರು ಅವರನ್ನು ಜಿಲ್ಲಾ ಆಸ್ಪತ್ರೆಗೆ ಕರೆದೊಯ್ಯಲು ಸಲಹೆ ನೀಡಿದ್ದಾರೆ. ಆಸ್ಪತ್ರೆಗೆ ಸಾಗಿಸುವ ಮಾರ್ಗಮಧ್ಯೆ ಅವರು ಮೃತಪಟ್ಟಿದ್ದಾರೆ ಎನ್ನಲಾಗಿದೆ.

# ‘ಯುವಜನತೆ ಜನಪದ ಕಲೆಗಳನ್ನು ಮೈಗೂಡಿಸಿಕೊಳ್ಳಬೇಕು’

ತುಮಕೂರು: “ಜನಪದ ಕಲೆಗಳನ್ನು ಯುವಜನತೆ ಮೈಗೂಡಿಸಿಕೊಂಡಾಗ ಮಾತ್ರ ಈ ಕಲೆಗಳು ಮುಂದಿನ ಪೀಳಿಗೆಗೂ ಸಾಗುತ್ತವೆ,” ಎಂದು ಕರ್ನಾಟಕ ಜನಪದ ಅಕಾಡೆಮಿಯ ಸದಸ್ಯ ಮಲ್ಲಿಕಾರ್ಜುನ್ ಕೆಂಕೆರೆ ಹೇಳಿದರು.

ನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ನಡೆದ ಜನಪದ ಉತ್ಸವದಲ್ಲಿ ರಾಶಿ ಪೂಜೆ ಮಾಡುವ ಮೂಲಕ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು. “ಇತ್ತೀಚಿನ ದಿನಗಳಲ್ಲಿ ಯುವಕರು ಮೊಬೈಲ್ ಗೀಳಿಗೆ ಒಳಗಾಗುತ್ತಿದ್ದಾರೆ. ಇದರ ಪರಿಣಾಮವಾಗಿ ನಾಡಿನ ಸಾಹಿತ್ಯ, ಕಲೆ ಮತ್ತು ಸಂಸ್ಕೃತಿಯ ಕಡೆಗಣನೆ ಹೆಚ್ಚಾಗಿದೆ. ಈ ಹಿನ್ನಲೆಯಲ್ಲಿ ವಿದ್ಯಾರ್ಥಿಗಳಲ್ಲಿ ಜಾಗೃತಿ ಮೂಡಿಸಿ, ಜನಪದ ಕಲೆಗಳ ಬಗ್ಗೆ ಆಸಕ್ತಿ ಹುಟ್ಟಿಸಲು ಇಂತಹ ಉತ್ಸವಗಳು ಸಹಕಾರಿಯಾಗಬೇಕು,” ಎಂದು ಅವರು ಹೇಳಿದರು.

ಕಾರ್ಯಕ್ರಮದಲ್ಲಿ ತಮಟೆ ಕಲಾವಿದ್ದೆ ನರಸಮ್ಮ ಅವರು ತಮಟೆಯ ಹಿನ್ನೆಲೆ, ನಿರ್ವಹಣಾ ವಿಧಾನ ಹಾಗೂ ಅದರ ವಿಶಿಷ್ಟತೆಯ ಕುರಿತು ವಿವರಿಸಿದರು. ಯಕ್ಷಗಾನ ಕಲಾವಿದ್ದೆ ಆರತಿ ಪಟ್ರಮೆ ಅವರು “ಯಕ್ಷಗಾನ ಕರಾವಳಿಯಲ್ಲಿ




ಹುಟ್ಟಿ ಇಂದು ನಾಡಿನಾದ್ಯಂತ ಹರಡಿದೆ ಎಂಬುದು ಹೆಮ್ಮೆಮಾಡುವ ಸಂಗತಿ,” ಎಂದರು.

ಸಾಂಸ್ಕೃತಿಕ ಸಂಚಾಲಕರಾದ ಡಾ. ಮುದ್ದಗಂಗಯ್ಯ ಕೆ.ಸಿ. ಅವರು, “ಕಲೆ ಮನುಷ್ಯರನ್ನು ನಿಜವಾದ ಮನುಷ್ಯರನ್ನಾಗಿ ರೂಪಿಸುತ್ತದೆ,” ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಪ್ರಾಂಶುಪಾಲ ಟಿ.ಡಿ. ವಸಂತ ಅವರು, “ವಿದ್ಯಾರ್ಥಿಗಳು ಪಠ್ಯದ ಜೊತೆಗೆ ಕಲೆ, ಸಾಹಿತ್ಯ, ಸಂಸ್ಕೃತಿ ಹಾಗೂ ದೇಸಿ ಉಡುಗೆ–ತೊಡುಗೆಗಳ ಬಗ್ಗೆ ಮೆಚ್ಚುಗೆ ಹೊಂದಬೇಕು,” ಎಂದು ಸಲಹೆ ನೀಡಿದರು.

ಉತ್ಸವದ ಅಂಗವಾಗಿ ವಿದ್ಯಾರ್ಥಿಗಳು ಲಗೋರಿ, ಕುಂಟೆಬಿಲ್ಲೆ, ಚೌಕಾಬಾರ, ಅಳಗುಳಿಮನೆ, ಬುಗುರಿ, ನದಿ–ದಡ ಮುಂತಾದ ದೇಶೀಯ ಆಟಗಳಲ್ಲಿ ಪಾಲ್ಗೊಂಡರು. ಇದೇ ಸಂದರ್ಭದಲ್ಲಿ ದೇಶಿಯ ಪಾಕಪದ್ಧತಿ ಮತ್ತು ವೇಷಭೂಷಣ ಸ್ಪರ್ಧೆಗಳನ್ನೂ ಆಯೋಜಿಸಲಾಗಿದ್ದು, ವಿಜೇತರನ್ನು ಪುರಸ್ಕರಿಸಲಾಯಿತು.

ಕಾರ್ಯಕ್ರಮದ ಆರಂಭದಲ್ಲಿ ಇತ್ತೀಚೆಗೆ ನಿಧನರಾದ ಪೋಪ್ ಜನಪಾಲ್ ಫ್ರಾನ್ಸಿಸ್, ಇಸ್ರೋ ಮಾಜಿ ಅಧ್ಯಕ್ಷ ಕಸ್ತೂರಿರಂಗನ್ ಹಾಗೂ ಪಹಲ್ಗಾಮ್ ದಾಳಿಯಲ್ಲಿ ಹುತಾತ್ಮರಾದ ಭಾರತೀಯರಿಗೆ ಶ್ರದ್ಧಾಂಜಲಿ ಸಲ್ಲಿಸಲಾಯಿತು.

ಕಾರ್ಯಕ್ರಮದಲ್ಲಿ ಡಾ. ಅನುಸೂಯ, ಪ್ರೊ. ಕುಮಾರಸ್ವಾಮಿ, ಡಾ. ಯೋಗೀಶ್ ಮತ್ತಿತರರು ಭಾಗವಹಿಸಿದರು. ಮಧುಶಾಲಿನಿ ಸ್ವಾಗತಿಸಿ, ಡಾ. ಅಶ್ವಕ್ ಅಹಮದ್ ನಿರೂಪಣೆ ನಡೆಸಿದರು. ಪ್ರೊ. ಲಕ್ಷ್ಮಿ ರಂಗಯ್ಯ

# ‘ಲಂಚವಿಲ್ಲದೆ 1,000 ಜನರಿಗೆ ಗ್ರಾಮ ಆಡಳಿತ ಹುದ್ದೆ’



ಬೆಂಗಳೂರು: ರಾಜ್ಯದ ಇತಿಹಾಸದಲ್ಲೇ 1,000 ಜನ ಗ್ರಾಮ ಆಡಳಿತ ಅಧಿಕಾರಿಗಳ ನೇಮಕಕ್ಕೆ ಒಂದೇ ಹಂತದಲ್ಲಿ ಆದೇಶ ಹೊರಡಿಸಿದ್ದು ಇದೇ ಮೊದಲು. ಅಲ್ಲದೆ, ಒಂದು ಪೈಸೆಯೂ ಲಂಚಕ್ಕೆ ಆಸ್ಪದ ನೀಡದೆ ಪಾರದರ್ಶಕವಾಗಿ ನೇಮಕ ಮಾಡಲಾಗಿದೆ ಎಂದು ಹೇಳಲು ಸಂತಸವಾಗುತ್ತಿದೆ ಎಂದು ಸಚಿವ ಕೃಷ್ಣ ಬೈರೇಗೌಡ ಅವರು ತಿಳಿಸಿದರು.

ಮಂಗಳವಾರ ವಿಧಾನಸೌಧದ ಬ್ಯಾಂಕ್ವೆಂಟ್ ಹಾಲ್ನಲ್ಲಿ ನೂತನವಾಗಿ ಆಯ್ಕೆಯಾಗಿರುವ 1,000 ಗ್ರಾಮ ಆಡಳಿತ ಅಧಿಕಾರಿಗಳಿಗೆ ನೇಮಕಾತಿ ಆದೇಶ, ಕಂದಾಯ ಇಲಾಖೆಯನ್ನು ಸಂಪೂರ್ಣ ಡಿಜಿಟಲೀಕರಿಸುವ ನಿಟ್ಟಿನಲ್ಲಿ 4,000 ಗ್ರಾಮ ಆಡಳಿತ ಅಧಿಕಾರಿಗಳಿಗೆ ಲ್ಯಾಪ್ ಟಾಪ್ ವಿತರಣಾ ಹಾಗೂ ಕಂದಾಯ ಇಲಾಖೆಯ ಎರಡು ವರ್ಷದ ‘ಸಾಧನೆಯ ಹಾದಿ’ ಪುಸ್ತಕ ಬಿಡುಗಡೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

“ರಾಜ್ಯದ ಇತಿಹಾಸದಲ್ಲೇ ಏಕ ಕಾಲದಲ್ಲಿ ಸಾವಿರ ಜನರ ನೇಮಕ ಇದೆ ಮೊದಲು. ಇದೊಂದು ದಾಖಲೆ. ಈ ಹಿಂದೆ ಪಿಯುಸಿ ಅಂಕದ ಆಧಾರದಲ್ಲಿ ಆಯಾ ಜಿಲ್ಲೆಯಲ್ಲಿ ಸೀಮಿತ ಸ್ಥಾನಗಳಿಗೆ ನೇಮಕಾತಿ ಆಗುತ್ತಿತ್ತು. ಆದರೆ, ಹುದ್ದೆ ನೇಮಕಾತಿ ಪ್ರಕ್ರಿಯೆಯಲ್ಲಿ ಹಲವು ಜಿಲ್ಲೆಗಳಲ್ಲಿ ಪಾರದರ್ಶಕತೆ ಇಲ್ಲ ಎಂಬ ದೂರು ಇತ್ತು. ಹೀಗಾಗಿ ನಮ್ಮ ಸರ್ಕಾರ ಬಂದ ಮೇಲೆ ಇಡೀ ರಾಜ್ಯದಲ್ಲಿ ಒಂದೇ ಬಾರಿ ಪಾರದರ್ಶಕವಾಗಿ ನೇಮಕವಾಗಬೇಕು, ಎಲ್ಲ ಜಿಲ್ಲೆಯವರಿಗೂ ಸಮಾನ ಸವಕಾಶ ಸಿಗಬೇಕು ಎಂಬ ದೃಷ್ಟಿಯಲ್ಲಿ ಕ್ರಮವಹಿಸಲಾಗಿತ್ತು” ಎಂದರು.

“ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕ ಒಂದೇ ಬಾರಿ ಅರ್ಜಿ ಕರೆದು, ಒಂದೇ ಬಾರಿ ಪರೀಕ್ಷೆ ನಡೆಸಿ ಮಧ್ಯವರ್ತಿಗಳ ಅವಕಾಶ ಇಲ್ಲದೆ ನೇಮಕಾತಿ ಮಾಡಿದ್ದೇವೆ. ಈ ಹುದ್ದೆಗೆ 6,33,916 ಜನ ಅರ್ಜಿ ಸಲ್ಲಿಸಿದ್ದರು. ಭಾಗಶಃ ಕರ್ನಾಟಕ ಬೇರೆ ಯಾವುದೇ ನೇಮಕಾತಿಗೆ ಇಷ್ಟು ಅರ್ಜಿ ಬಂದಿಲ್ಲ. ಇಲ್ಲಿ ಕೆಲಸ ಗಿಟ್ಟಿಸಿದವರು ಎಷ್ಟು ಪುಣ್ಯವಂತರೆಂದರೆ ಅರ್ಜಿ ಸಲ್ಲಿಸಿದವರ ಪೈಕಿ ಶೇ. 0.0016 ಜನ ಮಾತ್ರ ಆಯ್ಕೆಯಾಗಿದ್ದೀರಿ” ಎಂದು ತಿಳಿಸಿದರು.

ಮುಂದುವರೆದು, “ಗ್ರಾಮ ಆಡಳಿತ ಅಧಿಕಾರಿ ಕೆಲಸಕ್ಕೆ ಶಿಫಾರಸು ಮಾಡುವಂತೆ ಏಳೆಂಟು ಜನ ನನ್ನ ಬಳಿಯೂ ಬಂದಿದ್ದರು. ಆದರೆ, ನಾನೇ ಮನಸ್ಸು ಮಾಡಿದರೂ ಶಿಫಾರಸು ಮಾಡಲು ಸಾಧ್ಯವಾಗದಂತೆ ಪಾರದರ್ಶಕವಾಗಿ ಪರೀಕ್ಷೆ ನಡೆಸಲಾಗಿದೆ. ಪರೀಕ್ಷೆಯ ಉತ್ತರ ಪತ್ರಿಕೆ ತಿದ್ದುವುದು ಸೇರಿದಂತೆ ಯಾವ ಅಕ್ರಮ ಚಟುವಟಿಕೆಗಳಿಗೂ ಆಸ್ಪದ ಇಲ್ಲದಂತೆ ಪರೀಕ್ಷೆ ನಡೆಸಲಾಗಿದೆ. ಇಲ್ಲಿ ಕೆಲಸ ಗಿಟ್ಟಿಸಿದವರು ಹುದ್ದೆಗಾಗಿ ಒಂದು ಪೈಸೆಯಾದರೂ ಯಾರಿಗಾದರೂ ಲಂಚ ಕೊಟ್ಟಿದ್ದೀರ . ಇದೇ ಕಾರಣಕ್ಕೆ ಈ ಬಗ್ಗೆ ಈವರೆಗೆ ಒಂದೂ ತಕರಾರು ಬಂದಿಲ್ಲ. ಒಂದು ಪೈಸೆಯೂ ಲಂಚ ಇಲ್ಲದೆ ಹುದ್ದೆ ನೀಡಿದ್ದೇವೆ ಎಂದು ಹೇಳಲು ನನಗೂ ಸಂತೋಷವಾಗುತ್ತದೆ” ಎಂದು ಹರ್ಷ ವ್ಯಕ್ತಪಡಿಸಿದರು

ಈ ಕಾರ್ಯಕ್ರಮವನ್ನು ಸ್ಥಳದ ಅಭಾವದ ನೆಪವೊಡ್ಡಿ ಬೇರೆಡೆ ಸ್ಥಳಾಂತರಿಸಲು ಅಧಿಕಾರಿಗಳು ಸೂಚಿಸಿದರು. ಆದರೆ, ನಾನು ಈ ಸಿಎಂ ಅವರ ಕೈಯಿಂದಲೇ ಎಲ್ಲಾ ಅಧಿಕಾರಿಗಳಿಗೂ ವಿಧಾನಸೌಧದಲ್ಲೇ ಆದೇಶ ಪ್ರತಿ ನೀಡಬೇಕು ಎಂದು ಹೇಳಿ ಸಿದ್ದರಾಮಯ್ಯನವರನ್ನು ಒಪ್ಪಿಸಿದೆ. ಮೊದಲ ಬಾರಿಗೆ ಸಾವಿರ ಜನ ಸರ್ಕಾರಿ ಸೇವೆಗೆ ಕಾಲಿಡುತ್ತಿದ್ದಾರೆ. ಅವರು ಮೊದಲ ಸಲ ವಿಧಾನಸೌಧಕ್ಕೆ ಕಾಲಿಟ್ಟರೆ ಅವರಿಗೆ ವಿಧಾನಸೌಧ ಕಟ್ಟಿದ ಆಶಯ ಅರ್ಥವಾಗುತ್ತೆ, ಆಗಲಾದರೂ ಅವರು ಜನಪರ ಕೆಲಸ ಮಾಡುತ್ತಾರೆ ಎಂಬ ಉದ್ದೇಶದಿಂದಲೇ ಕಾರ್ಯಕ್ರಮವನ್ನು ಇಲ್ಲಿ ಆಯೋಜಿಸಲಾಗಿದೆ” ಎಂದರು.

ನೂತನವಾಗಿ ಆಯ್ಕೆಯಾಗಿರುವ ಅಧಿಕಾರಿಗಳಿಗೂ ಕಿವಿಮಾತು ಹೇಳಿದ ಅವರು, “ವಿಧಾನಸೌಧದಲ್ಲಿ ಆದೇಶ ಪ್ರತಿ ಸ್ವೀಕರಿಸುತ್ತಿರುವ ಹೊಸ ಉದ್ಯೋಗಿಗಳಿಗೂ ಈ ಸಂದರ್ಭದಲ್ಲಿ ಅರಿವು ಇರಬೇಕು ಎಂಬ ಕಾರಣಕ್ಕೆ ಆದೇಶ ಪ್ರತಿಯನ್ನು ಸಿಎಂ ಸಿದ್ದರಾಮಯ್ಯ ಅವರ ಕೈಯಿಂದ ನೀಡಲಾಗುತ್ತಿದೆ. ಬಹುತೇಕರು ಸರ್ಕಾರಿ ಕೆಲಸ ಗಿಟ್ಟಿಸಿದ ಕುಟುಂಬದ ಮೊದಲಿಗರಾಗಿದ್ದಾರೆ. ಈ ಹುದ್ದೆಗೆ ನೀವು ಋಣ ತೀರಿಸಬೇಕು ಎಂತಿದ್ದರೆ ಜನರ ಪ್ರಮಾಣಿಕ ಸೇವೆ ಮಾಡುವ ಮೂಲಕ ಈ ಋಣ ತೀರಿಸಿ” ಎಂದರು.

# ವೆಂಕಟರಮಣಸ್ವಾಮಿಯ ಪುಷ್ಪವಿಮಾನೋತ್ಸವಕ್ಕೆ ಟಿಟಿಡಿ ಸದಸ್ಯ ನರೇಶ್ ಭೇಟಿ



ಕೋಲಾರ: ಜಿಲ್ಲೆಯ ವೈಕುಂಠಪುರಂ ಎಂದೇ ಖ್ಯಾತವಾದ ರೋಣೂರಿನಲ್ಲಿ ಅರ್ಜುನನಿಂದ ಪ್ರತಿಷ್ಟಾಪಿಸಲ್ಪಟ್ಟ ಲಕ್ಷ್ಮೀವೆಂಕಟರಮಣಸ್ವಾಮಿ ಬ್ರಹ್ಮ ರಥೋತ್ಸವದಲ್ಲಿ ಸವಿತಾ ಸಮಾಜದ ಬಂಧುಗಳಿಂದ ನಡೆಯುವ ಅದ್ದೂರಿ ಪುಷ್ಪವಿಮಾನೋತ್ಸವಕ್ಕೆ ಆಗಮಿಸಿದ್ದ ತಿರುಮಲ ತಿರುಪತಿ ಆಡಳಿತ ಮಂಡಳಿ ಕರ್ನಾಟಕದ ಸದಸ್ಯ ಎಸ್.ನರೇಶ್‌ಕುಮಾರ್ ಅವರನ್ನು ದೇವಾಲಯ ಸಮಿತಿಯಿಂದ ಸನ್ಮಾನಿಸಲಾಯಿತು.

ರಥೋತ್ಸವದ ನಂತರ ನಡೆಯವ ಈ ಪುಷ್ಪವಿಮಾನೋತ್ಸವ ಅತ್ಯಂತ ಖ್ಯಾತಿ ಗಳಿಸಿದ್ದು, ಈ ಕಾರ್ಯಕ್ರಮವನ್ನು ಸವಿತಾ ಸಮಾಜದ ಮುಖಂಡರು ಪ್ರತಿವರ್ಷ ನಡೆಸಿಕೊಂಡು ಬಂದಿರುವುದು ದೇವರ ಕಾರ್ಯಗಳಲ್ಲಿ ಸಮಾಜದ ಎಲ್ಲಾ ಬಂಧುಗಳು ಒಟ್ಟುಗೂಡಿ ಕೈಜೋಡಿಸಿಕೊಂಡು ಬಂದಿದ್ದಾರೆ ಎಂದು ನರೇಶ್ ಕುಮಾರ್ ಅಭಿನಂದಿಸಿದರು.

ರೋಣೂರು ಗ್ರಾ.ಪಂ ಸದಸ್ಯೆ ರಾಧಮ್ಮ ನಟರಾಜ್, ಮುಖಂಡ ರವಿ ಮತ್ತಿತರರು ದೇವಾಲಯದ ಕುರಿತು ತಿಳಿಸಿಕೊಟ್ಟು, ಅನಾದಿಕಾಲದಿಂದಲೂ ಸವಿತಾ ಸಮಾಜದ ಬಜ್ಜಪ್ಪ,ವೀರನಾರಾಯಣಪ್ಪನವರ ಮಾರ್ಗದರ್ಶನದಲ್ಲಿ ಸಮುದಾಯದ ಮುಖಂಡರಾದ ಅಂಕತಟ್ಟಿ ಮುನ್ನಾರಾಯಣಪ್ಪ, ಪಿಲ್ಲಪ್ಪ, ಬಳಗೆರೆ ಹನುಮಂತಪ್ಪ, ಗೊರಮಡಗು ಪೆದ್ದನಾರಾಯಣಪ್ಪ, ಶಿಡ್ಲಘಟ್ಟ ಬಸಪ್ಪ, ಆನೂರು ಸುಬ್ಬನ್ನ, ಶ್ರೀನಿವಾಸಪುರ ಸೀತರಾಮಪ್ಪ, ಅವಲಕುಪ್ಪ ಪೆದ್ದವೆಂಕಟಮಣಪ್ಪ, ಪಾಪನ್ನ, ರೋಣೂರು ವೆಂಕಟಪ್ಪ, ಹನುಮಂತಪ್ಪ, ದಿಂಬಾಲು ನಾರಾಯಣಸ್ವಾಮಿ, ತಿನ್ನಲಿ ಸಂಜೀವಪ್ಪ, ಬೆಂಗಳೂರಿನ ಮೇಘನಾತಯ್ಯನವರ ಸಮ್ಮುಖದಲ್ಲಿ ಈ ಪುಷ್ಪವಿಮಾನೋತ್ಸವ ಅದ್ದೂರಿಯಿಂದ ನಡೆಸಿಕೊಂಡು ಬರಲಾಗಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ದೇವಾಲಯದ ಪ್ರಧಾನ ಅರ್ಚಕರಾದ ಮೋಹನ್ ಬಾಬು ಸವಿತಾ ಸಮಾಜ ಗೌರವಾಧ್ಯಕ್ಷ ಎಸ್.ಮಂಜುನಾಥ್, ತಾಲ್ಲೂಕು ಅಧ್ಯಕ್ಷ ಶ್ರೀನಿವಾಸ್, ಮುಖಂಡರಾದ ರವಿಕುಮಾರ್, ಮುನಿರಾಜು ,ರೋಣೂರು ಗ್ರಾ.ಪಂ ಸದಸ್ಯೆ ರಾಧಮ್ಮ ನಟರಾಜ್ ಮತ್ತಿತರರಿದ್ದರು.

# ಗ್ಯಾರಂಟಿ ಯೋಜನೆಗಳನ್ನು ಜನರಿಗೆ ತಲುಪಿಸುವುದೇ ನಮ್ಮ ಸಂಕಲ್ಪ: ಕೆ.ಎಸ್.ಪಾಪಣ್ಣ



ತುಮಕೂರು: ಸಾರ್ವಜನಿಕರಿಗೆ ಸಮರ್ಪಕವಾಗಿ ಗ್ಯಾರಂಟಿ ಯೋಜನೆಗಳನ್ನು ತಲುಪಿಸುವುದು ಅವರನ್ನು ಸ್ವಾವಲಂಬಿಗಳನ್ನಾಗಿಸುವುದು ಗ್ಯಾರಂಟಿ ಅನುಷ್ಠಾನ ಸಮಿತಿಯ ಪ್ರಮುಖ ಸಂಕಲ್ಪವಾಗಿದೆ ಎಂದು ಪಾವಗಡ ತಾಲೂಕು ಗ್ಯಾರಂಟಿ ಅನುಷ್ಠಾನ ಸಮಿತಿಯ ಅಧ್ಯಕ್ಷ ಕೆ.ಎಸ್. ಪಾಪಣ್ಣ ತಿಳಿಸಿದರು.

ಪಾವಗಡ ಪಟ್ಟಣದ ತಾಲೂಕು ಪಂಚಾಯಿತಿ ಸಭಾಂಗಣದಲ್ಲಿ ಮಂಗಳವಾರ ನಡೆದ ಸಭೆಯಲ್ಲಿ

ಇಲಾಖಾವಾರು ಮಾಹಿತಿ ಪಡೆದ ಅವರು ಪಾವಗಡ ತಾಲೂಕಿನಲ್ಲಿ ಗೃಹಲಕ್ಷ್ಮಿ ಯೋಜನೆಯ ಸೌಲಭ್ಯ ಪಡೆಯದವರನ್ನು ಪತ್ತೆ ಹಚ್ಚಿ ಅವರ ಖಾತೆಗೆ 2,000 ರೂ. ಹಣವನ್ನು ತಲುಪಿಸಬೇಕೆಂದು ಶಿಶು ಅಭಿವೃದ್ಧಿ ಯೋಜನಾಧಿಕಾರಿ ರಖೀಬ್ ಅವರಿಗೆ ಖಡಕ್ ಸೂಚನೆ ನೀಡಿದರು.

ಗ್ರಾಮೀಣ ಭಾಗದಲ್ಲಿ ಅರ್ಹ ಫಲಾನುಭವಿಗಳಿಗೆ ಗೃಹಲಕ್ಷ್ಮಿ ಹಣ ಯಾಕೆ ಬರುತ್ತಿಲ್ಲ ಎನ್ನುವುದರ ಬಗ್ಗೆ ಅಂಗನವಾಡಿ ಕಾರ್ಯಕರ್ತೆಯರಿಂದ ಸಮೀಕ್ಷೆ ನಡೆಸಿ ವರದಿ ನೀಡುವಂತೆ ಅವರು ಸೂಚಿಸಿದರು.

ಪಾವಗಡ ತಾಲೂಕಿನ ಎಲ್ಲಾ ನ್ಯಾಯಬೆಲೆ ಅಂಗಡಿಗಳಲ್ಲೂ ಸಹ ಅನ್ನಭಾಗ್ಯ ಯೋಜನೆ ಸಮರ್ಪಕವಾಗಿ ಅನುಷ್ಠಾನಗೊಳ್ಳಬೇಕು. ಮಧ್ಯವರ್ತಿಗಳ ಮತ್ತು ಕಮಿಷನ್ ದಂಧೆಗೆ ಕಡಿವಾಣ ಹಾಕುವುದರ ಜೊತೆಗೆ ಸಮಯಕ್ಕೆ ಸರಿಯಾಗಿ ಪಡಿತರ ವಿತರಣೆಗೆ ಸೂಚಿಸಿದರು.

ಶಕ್ತಿ ಯೋಜನೆಯ ಪ್ರಗತಿಯನ್ನು ಪರಿಶೀಲಿಸಿದ ಅವರು ಗ್ರಾಮೀಣ ಭಾಗದಿಂದ ನಗರ ಪ್ರದೇಶಗಳಿಗೆ ವಿದ್ಯಾರ್ಥಿಗಳು, ಮಹಿಳೆಯರು ಸಂಚರಿಸಲು ಗ್ರಾಮಾಂತರ ಸಾರಿಗೆ ವ್ಯವಸ್ಥೆ ಇಲ್ಲ. ತಾಲೂಕಿನ ಗುಮ್ಮಘಟ್ಟ, ಆರ್.ಡಿ. ರೊಪ್ಪ, ಬೂದಿಬೆಟ್ಟ, ಸಿಂಗರೆಡ್ಡಿಹಳ್ಳಿ ಸೇರಿದಂತೆ ವಿವಿಧಡೆ ಬಸ್ ವ್ಯವಸ್ಥೆ ಮಾಡಬೇಕೆಂದು ಸಾರಿಗೆ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು.

ಗೃಹ ಜ್ಯೋತಿ ಯೋಜನೆಗೆ ಸಂಬಂಧಿಸಿದಂತೆ ಬೆಸ್ಕಾಂ ಇಲಾಖೆಯ ಅಧಿಕಾರಿಗಳಿಂದ ಮಾಹಿತಿ ಪಡೆದು ವಿದ್ಯುತ್ ಸರಬರಾಜಿನಲ್ಲಿ ಯಾವುದೇ ರೀತಿಯ ವ್ಯತ್ಯಯ ಆಗದಂತೆ ಕ್ರಮ ಕೈಗೊಳ್ಳಿ ಮತ್ತು ಗ್ರಾಮೀಣ ಭಾಗದಲ್ಲಿ ಕೆಲವೆಡೆ ಸಿಬ್ಬಂದಿ ಹಣ ಪಡೆದು ಮೀಟರ್ ಅಳವಡಿಸುವುದಾಗಿ ವಂಚಿಸಿರುವುದು ಬೆಳಕಿಗೆ ಬಂದಿದೆ ಇದಕ್ಕೆ ಕಡಿವಾಣ ಹಾಕಬೇಕೆಂದರು.

ಯುವನಿಧಿ ಯೋಜನೆಗೆ ಸಂಬಂಧಿಸಿದಂತೆ ಜಿಲ್ಲಾ ಉದ್ಯೋಗಾಧಿಕಾರಿ ಕಿಶೋರ್ ಅವರಿಂದ ಮಾಹಿತಿ ಪಡೆದ ಅವರು ಯೋಜನೆಯ ಬಗ್ಗೆ ವಿದ್ಯಾರ್ಥಿಗಳು ಹಾಗೂ ನಿರುದ್ಯೋಗಿಗಳಿಗೆ ಅರಿವು ಮೂಡಿಸಬೇಕು. ಯುವನಿಧಿ ಯೋಜನೆಗೆ ಅರ್ಜಿ ಸಲ್ಲಿಸಿದ ವಿದ್ಯಾರ್ಥಿಗಳಿಗೆ ನಿಯಮಾನುಸಾರವಾಗಿ ಹಣ ಪಾವತಿಯಾಗುವಂತೆ ಕ್ರಮವಹಿಸಬೇಕು ಎಂದು ಅವರು ತಿಳಿಸಿದರು.

ಸಭೆಯಲ್ಲಿ ತಾಲೂಕು ಗ್ಯಾರಂಟಿ ಅನುಷ್ಠಾನ ಸಮಿತಿಯ ಸದಸ್ಯರಾದ ಗುಮ್ಮಘಟ್ಟ ಶ್ರೀನಿವಾಸುಲು, ರಂಗೇಗೌಡ, ವೀರಾಂಜನೇಯ, ಉಮೇಶ್, ಶಂಸುದ್ದೀನ್, ಸುಮ ಅನಿಲ್, ಲಕ್ಷ್ಮಿ ರವಿ, ಎಚ್. ಶ್ರೀರಾಮುಲು, ದಿವಾಕರ್, ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಜಾನಕಿರಾಮ್, ಆಹಾರ ಶಿರಸ್ತೆದಾರ್ ಶಶಿಕಲಾ, ಬೆಸ್ಕಾಂ ಎಇಇ ಕೃಷ್ಣಮೂರ್ತಿ,

## ‘ಅನುಭವ ಮಂಟಪ - ಬಸವಾದಿ ಶರಣರ ವೈಭವ’ ವೇದಿಕೆಯಲ್ಲಿ

# ವಚನ ಸಾಹಿತ್ಯದ ಸಂವೇದನೆ



ಕೂಡಲಸಂಗಮ: ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಬಾಗಲಕೋಟೆ ಜಿಲ್ಲಾಡಳಿತದ ಸಂಯುಕ್ತ ಆಶ್ರಯದಲ್ಲಿ ಕೂಡಲಸಂಗಮದಲ್ಲಿ ನಡೆಯುತ್ತಿರುವ 'ಅನುಭವ ಮಂಟಪ –ಬಸವಾದಿ ಶರಣರ ವೈಭವ’ ಶ್ರೇಣಿಯ ಅಂಗವಾಗಿ ವಚನ ಸಾಹಿತ್ಯ–ಸಮಕಾಲೀನ ಸಂವೇದನೆ ವಿಷಯದ ಕುರಿತು ಆಯೋಜಿಸಲಾದ ವಿಚಾರಗೋಷ್ಠಿಯನ್ನು ಸಚಿವ ಶಿವರಾಜ್ ಎಸ್. ತಂಗಡಗಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ. ತಿಮ್ಮಾಪುರ ಅವರು ಉದ್ಘಾಟಿಸಿದರು.

ವಚನ ಸಾಹಿತ್ಯವು ನೈತಿಕ ಮೌಲ್ಯಗಳು, ಸಮಾನತೆ ಮತ್ತು ಮಾನವೀಯತೆಯ ಸಾರವನ್ನು ಸಾರುವದು ಎಂಬುದರ ಬಗ್ಗೆ ಸಮಕಾಲೀನ ಸಂದರ್ಭಗಳಲ್ಲಿ ಇದರ ಪ್ರಸ್ತುತತೆ ಮತ್ತು ಪ್ರಭಾವ ಕುರಿತು ಚರ್ಚೆ ನಡೆಯಿತು. ಈ ಸಂದರ್ಭದಲ್ಲಿ ಶಾಸಕರಾದ ವಿಜಯಾನಂದ ಕಾಶಪ್ಪನವರ್, ನಿಷ್ಕಲ ಮಂಟಪದ ಶ್ರೀ ನಿಜಗುಣಾನಂದ ಸ್ವಾಮೀಜಿ, ಉರಿಲಿಂಗಪೆದ್ದಿ ಮಠದ ಶ್ರೀ ಜ್ಞಾನಪ್ರಕಾಶ್ ಸ್ವಾಮೀಜಿ, ಶ್ರೀ ಗುರು ಮಹಾಂತ ಸ್ವಾಮೀಜಿ, ಡಾ.ಶಿವಕುಮಾರ ಸ್ವಾಮೀಜಿ ಮತ್ತು ಶ್ರೀ ಅನ್ನದಾನಿ ಸ್ವಾಮೀಜಿ ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ಸಾಹಿತಿಗಳಾದ ರಂಜಾನ್ ದರ್ಗಾ, ಡಾ. ಮೀನಾಕ್ಷಿ ಬಾಳಿ, ಡಾ. ಬಿ.ಟಿ. ಲಲಿತಾನಾಯಕ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ನಿರ್ದೇಶಕಿ ಕೆ.ಎಂ. ಗಾಯತ್ರಿ, ಬಾಗಲಕೋಟೆ ಜಿಲ್ಲಾಧಿಕಾರಿ ಕೆ.ಎಂ. ಜಾನಕಿ ಸೇರಿದಂತೆ ಹಲವು ಅಧಿಕಾರಿಗಳು, ಸಾಂಸ್ಕೃತಿಕ ವ್ಯಕ್ತಿತ್ವಗಳು ಹಾಗೂ ಸಾಹಿತ್ಯ ಪ್ರಿಯರು ಭಾಗವಹಿಸಿದ್ದರು.

ಈ ವಿಚಾರಗೋಷ್ಠಿ ಮೂಲಕ ಬಸವ ವಚನಗಳ ಮಾನವೀಯತೆಯ ಚಿಂತನೆಗಳು ಇಂದು ಸಮಾಜಕ್ಕೆ ಹೇಗೆ ಪ್ರಸ್ತುತವಾಗಿವೆ ಎಂಬ ವಿಷಯದ ಕುರಿತು ಚಿಂತನೆ, ಚರ್ಚೆ ನಡೆಯಿತು. ಶರಣರ ಬದುಕು ಮತ್ತು ಬೋಧನೆಗಳು ಇಂದಿನ ಸಮಾಜದ ಸಮಸ್ಯೆಗಳಿಗೆ ಉತ್ತರಗಳಾಗಿ ಇತರಿವಾಗಿವೆ ಎಂಬ ಒಗ್ಗಟ್ಟಿನ ಅಭಿಪ್ರಾಯ ವ್ಯಕ್ತವಾಯಿತು.

# ಫ್ಲೆಕ್ಸ್, ಬ್ಯಾನರ್ ಹಾವಳಿ ಹೆಚ್ಚಾಗಿದ್ದು ತೆರವಿಗೆ ಒತ್ತಾಯ

ಹಾಸನ: ನಗರದ ಎನ್.ಆರ್. ವೃತ್ತದಲ್ಲಿರುವ ಪುನೀತ್ ರಾಜಕುಮಾರ್ ಪ್ರತಿಮೆಯ ಸುತ್ತ ಫ್ಲೆಕ್ಸ್ ಬ್ಯಾನರ್‌ಗಳ ಹಾವಳಿ ಹೆಚ್ಚಾಗಿದ್ದು, ಇದರಿಂದ ಪ್ರತಿಮೆಯೆ ಹೊರಗೆ ಕಾಣದ ಪರಿಸ್ಥಿತಿ ಬಂದಿದ್ದು, ಕೂಡಲೇ ಇದನ್ನು ತೆಗೆಸಿ ಮುಂದೆ ಹಾಕದಾಗೆ ಕಟ್ಟುನಿಟ್ಟಿನ ಕ್ರಮಕೈಗೊಳ್ಳುವಂತೆ ಅಖಿಲ ಕರ್ನಾಟಕ ಡಾ. ರಾಜ್ ಕುಮಾರ್, ಶಿವರಾಜಕುಮಾರ್, ಪುನೀತ್ ರಾಜಕುಮಾರ್ ಅಭಿಮಾನಿಗಳ ಸಂಘದಿಂದ ಜಿಲ್ಲಾಡಳಿತಕ್ಕೆ ಮನವಿ ಸಲ್ಲಿಸಿದರು.

ಪುನೀತ್ ರಾಜಕುಮಾರ್ ಅಭಿಮಾನಿಗಳ ಸಂಘದ ಜಿಲ್ಲಾಧ್ಯಕ್ಷ ಹೆಚ್.ಎಸ್. ರತೀಶ್ ರಾಜ್ ಮತ್ತು ಜಕ್ಕನಹಳ್ಳಿ ಮೋಹನ್ ಕುಮಾರ್ ಮಾಧ್ಯಮದೊಂದಿಗೆ ಮಾತನಾಡಿ, ನಮ್ಮ ಸಂಘದ ವತಿಯಿಂದ ಮನವಿ ಮಾಡಿಕೊಳ್ಳುವುದೇನೆಂದರೆ, ಹಾಸನ ನಗರದ ಎನ್. ಆರ್. ವೃತ್ತದಲ್ಲಿ ಕರ್ನಾಟಕ ರತ್ನ ಪುನೀತ್ ರಾಜಕುಮಾರ್ ಪುತ್ಥಳಿಯನ್ನು ಸ್ಥಾಪಿಸಲಾಗಿದೆ. ಇದು ಮುಚ್ಚಿಹೋಗುವಂತೆ ಕೆಲವು ರಾಜಕಾರಣಿಗಳು ದೊಡ್ಡ ದೊಡ್ಡ ಬ್ಯಾನರ್‌ಗಳನ್ನು ಹಾಕುತ್ತಿದ್ದಾರೆ. ಇದರ ಬಗ್ಗೆ ತಮಗೆ ಈ ಜಾಗದಲ್ಲಿ ಯಾರೂ ಫ್ಲೆಕ್ಸ್ ಬ್ಯಾನರ್ ಗಳನ್ನು ‘ಹಾಕದಂತೆ ಹಾಕ ಹಾಗೂ ಶುಚಿತ್ವ ಕಾಪಾಡುವಂತೆ, ಹಾಲಿ ಹಾಕಿರುವ ಬ್ಯಾನರ್ ಗಳನ್ನು ತೆಗೆಸುವಂತೆ ಈಗಾಗಲೇ ಮೂರು ಬಾರಿ ತಮಗೆ ಮನವಿ ಸಲ್ಲಿಸಿ ಸಲ್ಲಿಸಿದ್ದೇವೆ ಎಂದರು. ಇದೇ ವಿಷಯದಲ್ಲಿ ತಾವುಗಳು ಸೂಕ್ತ ಕ್ರಮ ಕೈಗೊಂಡು ಮುಂದೆ ಈ ಸ್ಥಳದಲ್ಲಿ ಯಾರೂ ಬ್ಯಾನರ್ ಗಳನ್ನು ಹಾಕದಂತೆ ಕ್ರಮ ಕೈಗೊಳ್ಳಬೇಕಾಗಿ ವಿನಂತಿಸುತ್ತೇವೆ. ಹಾಗೂ ಮಂದೆ ಯಾರೇ ಬ್ಯಾನರ್, ಫ್ಲಕೆ ಹಾ ತಕ್ಕೆ ಹಾಕಿದಲ್ಲಿ ಅವರ ಮೇಲೆ ಶಿಸ್ತು ಕ್ರಮ ಕೈಗೊಂಡು, ಪರವಾನಗಿ ರದ್ದು ಮಾಡಬೇಕೆಂದು ವಿನಂತಿಸುತ್ತೇವೆ. ಅಲ್ಲದೇ ಹೇಮಾವತಿ ಪ್ರತಿಮೆಯ ಬಳಿಯೂ ಸಹ ಪ್ರತಿಮೆ ಮುಚ್ಚಿಹೋಗುವಂತೆ ಕೆಲವು ರಾಜಕಾರಣಿಗಳು

ವಿಜಯಲಕ್ಷ್ಮಿ ಅಂಜನಪ್ಪ ಮಾತನಾಡಿದರು.

# ‘ಕನಕಪುರ ತಾಲ್ಲೂಕಿನ ರಾಗಿ ಖರೀದಿ ಕೇಂದ್ರದಲ್ಲಿ ನ್ಯೂನ್ಯತೆಗಳಿಲ್ಲ’

ರಾಮನಗರ: ಜಿಲ್ಲೆಯ ಕನಕಪುರ ತಾಲೂಕಿನಲ್ಲಿ ರೈತರಿಂದ ಬೆಂಬಲ ಬೆಲೆಗೆ ರಾಗಿ ಖರೀದಿಗೆ ತೆರೆಯಲಾಗಿರುವ ರಾಗಿ ಖರೀದಿ ಕೇಂದ್ರಕ್ಕೆ ಜಿಲ್ಲಾಧಿಕಾರಿಗಳಾದ ಯಶವಂತ್ ವಿ. ಗುರುಕರ್ ಅವರು ಏ. 29ರ ಮಂಗಳವಾರ ಅನಿರೀಕ್ಷಿತ ಭೇಟಿ ನೀಡಿದ್ದು, ಅಲ್ಲಿ ಯಾವುದೇ ರೀತಿಯ ನ್ಯೂನ್ಯತೆಗಳಿರುವುದಿಲ್ಲ ಎಂದು ತಿಳಿಸಿದ್ದಾರೆ.

ಬೆಂಬಲ ಬೆಲೆಗೆ ರಾಗಿ ಮಾರಾಟ ಮಾಡಲು ರೈತರು ಫ್ರೂಟ್ಸ್ ತಂತ್ರಾಂಶದಲ್ಲಿ ನೋಂದಣಿ ಯಾಗಿರಬೇಕು, ರಾಗಿ ಮಾರಾಟದ ಸಮಯದಲ್ಲಿ ಫ್ರೂಟ್ಸ್ ತಂತ್ರಾಂಶದಲ್ಲಿ ನೋಂದಣಿ ಜೊತೆಗೆ ಆಧಾರ್ ಕಾರ್ಡ್ ಹಾಗೂ ಬ್ಯಾಂಕ್ ಪಾಸ್ ಬುಕ್ ನ ಜೆರಾಕ್ಸ್ ನೀಡಬೇಕು ಅದರೊಂದಿಗೆ ರೈತರು ಎರಡು ಬಾರಿ ಬಯೋಮೆಟ್ರಿಕ್ ನೀಡಿರುತ್ತಾರೆ.

ರಾಗಿ ಖರೀದಿ ಕೇಂದ್ರದಲ್ಲಿ ಈ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಲಾಗುತ್ತಿದೆ ಹಾಗೂ ರಾಗಿ ಖರೀದಿ ಕೇಂದ್ರದಲ್ಲಿ ಯಾವುದೇ ಮಧ್ಯವರ್ತಿಗಳ ಹಾವಳಿ ಇರುವುದಿಲ್ಲ, ಆದಾಗ್ಯೂ ತಮಿಳುನಾಡಿನಿಂದ ಬರುವ ಲಾರಿಗಳನ್ನು ತಪಾಸಣೆ ನಡೆಸಲು ಅನುಕೂಲವಾಗುವಂತೆ ಕನಕಪುರ ತಾಲ್ಲೂಕಿನ ಗಡಿ ಭಾಗ ಕೊಳಗೊಂಡನಹಳ್ಳಿ ಹಾಗೂ ಕನಕಪುರ ಎಪಿಎಂಸಿ ಮಾರುಕಟ್ಟೆ ಮುಂಭಾಗದಲ್ಲಿ

ಕೂಡಲೆ ಚೆಕ್ ಪೋಸ್ಟ್ ಗಳನ್ನು ನಿರ್ಮಿಸಲು ಜಿಲ್ಲಾಧಿಕಾರಿಯವರು ಸಂಬಂಧಿಸಿದ ಅಧಿಕಾರಿಗಳಿಗೆ ಈಗಾಗಲೇ ಆದೇಶ ನೀಡಿದ್ದಾರೆ. ಜಿಲ್ಲಾಧಿಕಾರಿಗಳ ಈ ಅನಿರೀಕ್ಷಿತ ಭೇಟಿಯ ಸಂದರ್ಭದಲ್ಲಿ ರಾಗಿ ಖರೀದಿ ಕೇಂದ್ರದಲ್ಲಿ ಯಾವುದೇ ರೀತಿಯ ನ್ಯೂನ್ಯತೆಗಳಿರುವುದಿಲ್ಲ ಹಾಗೂ ಕನಕಪುರ ತಾಲ್ಲೂಕಿನ ರೈತರು ನಿರಾತಂಕವಾಗಿ ಬೆಂಬಲ ಬೆಲೆಗೆ ರಾಗಿಯನ್ನು ಖರೀದಿ ಕೇಂದ್ರಕ್ಕೆ ಮಾರಾಟ ಮಾಡಬಹುದಾಗಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ತಪಾಸಣಾ ಕೇಂದ್ರಗಳ ಸ್ಥಾಪನೆ: ಅಧಿಕಾರಿ, ಸಿಬ್ಬಂದಿಗಳ ನಿಯೋಜನೆ

ರಾಮನಗರ: ಕನಕಪುರ ತಾಲ್ಲೂಕಿನ ರಾಗಿ ಖರೀದಿ ಕೇಂದ್ರಕ್ಕೆ ತಮಿಳುನಾಡಿನಿಂದ ಬರುವ ಎಲ್ಲಾ ವಾಹನಗಳನ್ನು ತಪಾಸಣೆ ಮಾಡಿ ಅಕ್ರಮವಾಗಿ ರಾಗಿ ಸಾಗಾಣಿಕೆ ಮಾಡುವುದನ್ನು ತಡೆಗಟ್ಟಲು ಹಾಗೂ ಯಾವುದೇ ಕಾರಣಕ್ಕೂ ಕನಕಪುರ ತಾಲ್ಲೂಕಿನ ರಾಗಿ ಖರೀದಿ ಕೇಂದ್ರಕ್ಕೆ ತಮಿಳುನಾಡಿ ರಾಗಿ ಸರಬರಾಜು ಆಗದಂತೆ ಅಗತ್ಯ ಕ್ರಮವಹಿಸಲು ಕನಕಪುರ ತಾಲ್ಲೂಕಿನ ಗಡಿಭಾಗದ ಕೋಳಗೊಂಡನಹಳ್ಳಿ ಹಾಗೂ ಕನಕಪುರ ತಾಲ್ಲೂಕಿನ ಎಪಿಎಂಸಿ ಮಾರುಕಟ್ಟೆ ಮುಂಭಾಗ ತಪಾಸಣಾ ಕೇಂದ್ರವನ್ನು ತೆರೆಯುವಂತೆ ಹಾಗೂ ಆ ಕೇಂದ್ರಗಳಿಗೆ ಅಧಿಕಾರಿ ಹಾಗೂ ಸಿಬ್ಬಂದಿಯನ್ನು ನಿಯೋಜಿಸಿ ಜಿಲ್ಲಾ ದಂಡಾಧಿಕಾರಿಗಳೂ ಆಗಿರುವ ಜಿಲ್ಲಾಧಿಕಾರಿ ಯಶವಂತ್ ವಿ. ಗುರುಕರ್ ಅವರು ಆದೇಶ ಹೊರಡಿಸಿದ್ದಾರೆ.

ಕೋಳಗೊಂಡನಹಳ್ಳಿ ತಪಾಸಣಾ ಕೇಂದ್ರಕ್ಕೆ ಆಹಾರ ನಿರೀಕ್ಷಕರಾದ ಮನೋಹರ್ ಜಿ.ಆರ್. ಪೊಲೀಸ್ ಇಲಾಖೆಯ ಸಿಬ್ಬಂದಿ ಹಾಗೂ ಕಂದಾಯ ಇಲಾಖೆಯ ರಾಜಸ್ವ ನಿರೀಕ್ಷಕರು ಹಾಗೂ ಗ್ರಾಮ ಆಡಳಿತ ಅಧಿಕಾರಿ ಹಾಗೂ ಕನಕಪರು ತಾಲ್ಲೂಕಿನ ಎಪಿಎಂಸಿ ಮಾರುಕಟ್ಟೆ ಮುಂಭಾಗ ಆಹಾರ ಶಿರಸ್ತೆದಾರರಾದ ಜಯಸಿಂಹ, ಪೊಲೀಸ್ ಸಿಬ್ಬಂದಿ ಹಾಗೂ ಕನಕಪುರ ತಾಲ್ಲೂಕು ಎಪಿಎಂಸಿಯ ಖರೀದಿ ಕೇಂದ್ರ ಅಧಿಕಾರಿ ಶಿವರಾಜು ಎಲ್. ಅವರನ್ನು ನಿಯೋಜಿಸಲಾಗಿದ್ದು, ತಮಿಳುನಾಡಿನಿಂದ ಅಕ್ರಮವಾಗಿ ರಾಗಿ ಸಾಗಾಣಿಕೆ ತಡೆಗಟ್ಟಲು ಈ ಅಧಿಕಾರಿ, ಸಿಬ್ಬಂದಿಗಳು ಪಾಳಿ ಅವಧಿಯಲ್ಲಿ ಕರ್ತವ್ಯ ನಿರ್ವಹಿಸುವಂತೆ ಅವರು ಆದೇಶದಲ್ಲಿ ತಿಳಿಸಿರುತ್ತಾರೆ.

# ವಿದ್ಯಾರ್ಥಿನಿಗೆ ಕಿರುಕುಳ ನೀಡಿದ ಆರೋಪ; ಆರೋಪಿ ಅರೆಸ್ಟ್

ಬೆಳ್ತಂಗಡಿ । ಮಂಗಳೂರು : ವಾಲಿಬಾಲ್ ತರಬೇತಿದಾರನೊಬ್ಬ ಖಾಸಗಿ ಕಾಲೇಜಿನ 17 ವರ್ಷದ ವಿದ್ಯಾರ್ಥಿನಿಗೆ ಮೆಸೇಜ್ ಕಳುಹಿಸಿ ಅಸಭ್ಯವಾಗಿ ವರ್ತಿಸಿ ಕಿರುಕುಳ ನೀಡಿದ ಆರೋಪದ ಮೇಲೆ ಯುವಕನೊಬ್ಬನನ್ನು ಬೆಳ್ತಂಗಡಿ ಠಾಣಾ ಪೊಲೀಸರು ಬಂಧಿಸಿದ್ದಾರೆ.

ಆರೋಪಿ, ಖಾಸಗಿ ಕಾಲೇಜಿನ ವಾಲಿಬಾಲ್ ಆಟಗಾರ ಮತ್ತು ತರಬೇತುದಾರನಾಗಿದ್ದು, ಬಾಲಕಿಗೆ ಪದೇ ಪದೇ ಬೇಡದ ಸಂದೇಶಗಳನ್ನು ಕಳುಹಿಸುತ್ತಿದ್ದನು ಎನ್ನಲಾಗಿದೆ. ಇದರಿಂದ ಬೇಸತ್ತ ಬಾಲಕಿಯ ಕುಟುಂಬಸ್ಥರು ಪೊಲೀಸ್ ದೂರು ದಾಖಲಿಸಿದ್ದಾರೆ. ಆರೋಪಿಯನ್ನು ಬೆಳ್ತಂಗಡಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಬಂಧಿಸಲಾಗಿದೆ. ಬಂಧಿತ ಆರೋಪಿಯು ಕಾರ್ಕಳ ನಿವಾಸಿ ಎನ್ನಲಾಗಿದೆ.

ಏ.26 ರಂದು ಆರೋಪಿ ಮೇಲೆ ಹಲ್ಲೆ ನಡೆಸಿ ಪೊಲೀಸರಿಗೆ ಒಪ್ಪಿಸಿದ ಇಬ್ಬರು ಹಿಂದೂ ಕಾರ್ಯಕರ್ತರ ವಿರುದ್ಧ ಬೆಳ್ತಂಗಡಿ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಹಲ್ಲೆಯ ಸಮಯದಲ್ಲಿ, ಕಾರ್ಯಕರ್ತರು ಆತನ ಮೊಬೈಲ್ ಫೋನ್ ಅನ್ನು ಕಸಿದುಕೊಂಡಿದ್ದಾರೆ ಎಂದು ಆರೋಪಿಸಲಾಗಿದೆ. ಅದರಲ್ಲಿ ಆತ ವಿವಿಧ ಹುಡುಗಿಯರೊಂದಿಗಿದ್ದ ನೂರಾರು ವೀಡಿಯೊಗಳಿವೆ ಎಂದು ವರದಿಯಾಗಿದೆ.

ಹಲ್ಲೆಯ ನಂತರ, ಆರೋಪಿಯು ಪ್ರತಿದೂರು ದಾಖಲಿಸಿದ್ದು, ಇಬ್ಬರ ವಿರುದ್ಧ ಎಫ್ಐಆರ್ ದಾಖಲಿಸಲಾಗಿದೆ. ಆರೋಪಿಗೆ ಇತರ ವಿದ್ಯಾರ್ಥಿಗಳಿಗೆ ಕಿರುಕುಳ ನೀಡುವ ಅಭ್ಯಾಸವಿದೆಯೇ ಎಂದು ಪೊಲೀಸರು ತನಿಖೆ ನಡೆಸುತ್ತಿದ್ದಾರೆ.

# ತಾರುಣ್ಯದಲ್ಲಿ ಜಾಗ್ರತೆ ಇರಲಿ: ಡಾ.ಭಾಗ್ಯ



ಬಳ್ಳಾರಿ: ತಾರುಣ್ಯ ಒಂದು ಪ್ರಮುಖ ಘಟ್ಟ. ಆ ವಯಸ್ಸಿನಲ್ಲಿ ಏನೆಲ್ಲಾ ದೈಹಿಕ, ಮಾನಸಿಕ ಬದಲಾವಣೆಗಳಾಗುತ್ತವೆ. ಆ ವಯಸ್ಸಿನಲ್ಲಿ ನಿಮ್ಮ ಮಾನಸಿಕ ಸಾಮರ್ಥ್ಯವನ್ನು ಕಾಪಾಡಿಕೊಳ್ಳುವುದು ಮುಂದಿನ ಉತ್ತಮ ಜೀವನವನ್ನು ರೂಪಿಸುತ್ತದೆ. ಯಾವುದೇ ಕಾರಣಕ್ಕೂ ತಪ್ಪಿನ ಹೆಜ್ಜೆಯನ್ನು ಇಡಬೇಡಿ, ಸರಿಯಾದ ಮಾರ್ಗ ಕಂಡುಕೊಳ್ಳಿ. ಉತ್ತಮ ಸಾಧನೆ ಮಾಡಿ, ಆಗುವ ವಯಸ್ಸಲ್ಲಿ ಎಲ್ಲವೂ ಆಗುತ್ತದೆ ಎಂದು ಪ್ರಾಧ್ಯಾಪಕರು ಹಾಗೂ ಭಾರತೀಯ ಕುಟುಂಬ ಯೋಜನಾ ಸಂಘದ ಆರ್ಥಿಕ ಸಲಹೆಗಾರರಾದ ಡಾ.ಭಾಗ್ಯ ಅವರು ಹೇಳಿದರು.

ಇಲ್ಲಿನ ಫ್ಯಾಮಿಲಿ ಪ್ಲಾನಿಂಗ್ ಅಸೋಸಿಯೇಷನ್ ಆಫ್ ಇಂಡಿಯಾ ಬಳ್ಳಾರಿ ಶಾಖೆ, ಬಳ್ಳಾರಿ ಬಿಸಿನೆಸ್ ಕಾಲೇಜ್ ಜೊತೆಗೂಡಿ ಕಾಲೇಜ್ ವಿದ್ಯಾರ್ಥಿಗಳಿಗೆ ಲೈಂಗಿಕ ಆರೋಗ್ಯ ಶಿಕ್ಷಣ ಮತ್ತು ಹೆಚ್ ಪಿ ವಿ ವೈರಸ್ ನಿಂದ ಹರಡುವ ಕ್ಯಾನ್ಸರ್ ಮಾಹಿತಿ ಕಾರ್ಯಗಾರ ಹಾಗೂ ಭಾಷಣ ಸ್ಪರ್ಧಾ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅಮಾರಾಜ್ ಭೂಪಾಲ್, ಇದು ಒಂದು ಒಳ್ಳೆಯ ಅವಕಾಶ. ಲೈಂಗಿಕ ಆರೋಗ್ಯ ಶಿಕ್ಷಣ ಮಾಹಿತಿ ಪಡೆದು ಸರಿಯಾದ ಜೀವನ ಮಾರ್ಗ ಗಳನ್ನು ತಿಳಿದುಕೊಳ್ಳಬೇಕು. ನಮ್ಮ ಕಾಲೇಜಿನ ಮಕ್ಕಳಿಗೆ ಇಂತಹ ಉತ್ತಮ ಕಾರ್ಯ ಮಾಡುತ್ತಿರುವುದು ಖುಷಿ ತಂದಿದೆ ಎಂದರು.

ಸಂಪನ್ಮೂಲ ವ್ಯಕ್ತಿ, ಎಫ್‌ಪಿಎಐ ನ ಶಾಖಾ ವ್ಯವಸ್ಥಾಪಕಿ ವಿಜಯಲಕ್ಷ್ಮಿ ಮಾತನಾಡಿ, ಲೈಂಗಿಕ ಶಿಕ್ಷಣ ಎಂದರೆ ಏನು, ಏನೆಲ್ಲಾ ಬದಲಾವಣೆ ಕಂಡು ಬರುತ್ತವೆ, ದೈಹಿಕವಾಗಿ ಮಾನಸಿಕವಾಗಿ ಹೇಗೆ ಬೆಳೆಯುತ್ತದೆ? ತಾರುಣ್ಯ ವಯಸ್ಸಿನಲ್ಲಿ ಒಳ್ಳೆಯ ಸಂಬಂಧ ಯಾವ ರೀತಿ ಇರಬೇಕು? ಮಾನಸಿಕ ಒತ್ತಡವನ್ನು ನಿಭಾಯಿಸುವುದು ಹೇಗೆ? ಎನ್ನುವ ಕುರಿತು ಹದಿಹರೆಯದ ಸಮಸ್ಯೆಗಳ ಚರ್ಚೆ ನಡೆಸಿದರು. ಅದಕ್ಕೆ ಸೂಕ್ತ ಪರಿಹಾರ ಸೂಚಿಸಿದರು. ಗರ್ಭ ಕಂಠದ ಕ್ಯಾನ್ಸರ್ ಎಂದರೇನು? ಹೇಗೆ ಹರಡುತ್ತದೆ? ಅದಕ್ಕೆ ಮುಂಜಾಗ್ರತೆ ಕ್ರಮಗಳೇನು? ಗರ್ಭಕಂಠದ ಕ್ಯಾನ್ಸರ್‌ಗೆ ಕಾರಣವಾಗುವ ವೈರಸ್‌ಗೆ ಹೆಚ್‌ಪಿವಿ ಲಸಿಕೆ ಇದೆ. ಅದನ್ನು ಯಾವಾಗ ಹಾಕಿಸಿಕೊಳ್ಳಬೇಕು? ಅದರ ವಿಧಾನಗಳೇನು? ಯಾವ ವಯಸ್ಸಿನವರಿಗೆ ಎಷ್ಟು ಲಸಿಕೆ ಹಾಕಿಸಬೇಕು? ಎನ್ನುವುದನ್ನು ತಿಳಿಸಿದರು.

ಸ್ಪರ್ಧಾ ಭಾಷಣದಲ್ಲಿ ಒಟ್ಟು 25 ಜನ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು. ಈ ಪೈಕಿ ಕೀರ್ತನ ಪ್ರಥಮ, ಸ್ವಾತಿ ದ್ವಿತೀಯ, ಪ್ರಿನ್ಸಿ ತೃತೀಯ ಸ್ಥಾನ ಪಡೆದರು.

ಕಾರ್ಯಕ್ರಮದ ಕೊನೆಯಲ್ಲಿ ಸ್ಪರ್ಧಾ ವಿಜೇತರಿಗೆ ಬಹುಮಾನ ವಿತರಿಸಲಾಯಿತು. ಬಿಬಿಸಿ ಯ ಪ್ರಾಧ್ಯಾಪಕರಾದ ಶ್ಯಾಮಲ ಮತ್ತು ಸ್ನೇಹ, ಶಾಖಾ ಸಿಬ್ಬಂದಿಗಳು ಇದ್ದರು.

